ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- 64 ಸಂಚಿಕೆ: 64 | PAGE- 8 ಪುಟ 8 | ಮಂಗಳವಾರ- 15-04-2025, | RS.2/- ಬೆಲೆ 2/-

## ಸಂವಿಧಾನದ ಆಶಯ ಈಡೇರಬೇಕಾದರೆ ಅಸಮಾನತೆ, ಅಸ್ಪೃಶ್ಯತೆ ಅಳಿಯಬೇಕು : ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.14:ಮೈಸೂರು ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಪೀಠ ಮತ್ತು ಬೆಂಗಳೂರಿನಲ್ಲೂ ಆಂಧ್ರಪ್ರದೇಶದ ಮಾದರಿಯನ್ನೂ ಮೀರಿದ ಅಂಬೇಡ್ಕರ್ ಮ್ಯೂಸಿಯಂ ಮತ್ತು ಪ್ರತಿಮೆ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸುವುದರ ಮೂಲಕ ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ಸಂವಿಧಾನದ ಆಶಯ ಈಡೇರಬೇಕಾದರೆ ಅಸಮಾನತೆ, ಅಸ್ಪೃಶ್ಯತೆ ಅಳಿಯಬೇಕು. ಜಾತಿ ವ್ಯವಸ್ಥೆ ಇರುವವರೆಗೆ ಸಮಾನತೆ ಬರುವುದಿಲ್ಲ,ಅಸ್ಪೃಶ್ಯತೆ ಅಳಿಯುವುದಿಲ್ಲ ಎಂದು ತಿಳಿಸಿದರು.

ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಿದ್ದ ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ



ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಜನ್ಮದಿನೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಾಬಾ ಸಾಹೇಬ್ ಒಬ್ಬ ವ್ಯಕ್ತಿ ಇಡೀ ದೇಶದ ಶಿಕ್ಷಣ ವಂಚಿತ ನೂರಾರು ಜಾತಿ ಸಮುದಾಯಗಳಿಗೆ ಶಿಕ್ಷಣ ಸಿಗಲು ಕಾರಣಕರ್ತರಾದರು. ಯಾವುದೇ ಜಾತಿ ಸಮುದಾಯವು ಸಹ ಶಿಕ್ಷಣದಿಂದ ವಂಚಿತರಾಗಬಾರದು, ಅವಕಾಶಗಳಿಂದ ವಂಚಿತರಾಗಬಾರದು ಎಂಬ ನಿಟ್ಟಿನಲ್ಲಿ ನಮ್ಮ ಸರ್ಕಾರವು ಸಂವಿಧಾನದಲ್ಲಿ ಹೇಳಿದಂತೆ ಎಲ್ಲಾ ಜಾತಿ, ಎಲ್ಲಾ ಧರ್ಮದ ಬಡವರಿಗೆ (2ನೇ ಪುಟ ನೋಡಿ...)

## ಮಹಿಳೆಯರಿಗೆ ಮಾದರಿಯಾದವರು ಅಕ್ಕಮಹಾದೇವಿ



ಮಲ್ಲಮ್ಮ ನುಡಿ ವಾರ್ತೆ

ಔರಾದ. 12ನೇ ಶತಮಾನದ ಶರಣರಲ್ಲಿ ಶೂನ್ಯ ಪೀಠ ಅಧ್ಯಕ್ಷರಾದ ಅಲ್ಲಮಪ್ರಭು ಜೊತೆ ಸಂವಾದನೆ ಹಾಗೂ ಸ್ವಾಭಿಮಾನಿ ಪ್ರತೀಕರಾದ ವೀರ ವೈರಾಗ್ಯನಿಧಿ ಅಕ್ಕಮಹಾದೇವಿಯವರು ಆಗಿದ್ದಾರೆ ಎಂದು ಸಂತಪುರ್ ಅನುಭವ ಮಂಟಪ ಅಧ್ಯಕ್ಷರಾದ ಬಸವರಾಜ ಬಿರಾದರ್ ಹೇಳಿದರು.

ಸಂತಪುರ್ ಅನುಭವ ಮಂಟಪದಲ್ಲಿ 12ನೇ ಶತಮಾನದ ಧೀರ ಸ್ವಾಭಿಮಾನಿ ಅಕ್ಕಮಹಾದೇವಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಡೀ ಮಹಿಳಾ ಕುಲಕ್ಕೆ ಸ್ವಾಭಿಮಾನ ಹಾಗೂ ಸ್ವಲಂಬನೆ ತಮ್ಮ ಜೀವನವನ್ನು ಹೇಗೆ ನಡೆಸಬೇಕೆಂಬುದನ್ನು ಅಕ್ಕಮಹಾದೇವಿಯವರು ಮಾದರಿಯಾಗಿದ್ದಾರೆ ಎಂದರು.

ಸಂತಪುರ ಗ್ರಾಮದ ಮುಖಂಡರಾದ ಮನೋಹರ ನಿಟ್ಟೂರೆ, ಪ್ರಾಂಶುಪಾಲ ನವೀಲಕುಮಾರ ಉತ್ಕಾರ್, ಹಾವಗಿ ಶರಣರು, ಬಸವರಾಜ ಪಾಟೀಲ್, ಲಕ್ಷ್ಮಣ ಪಾಟೀಲ್, ಶಿವಕುಮಾರ ಮೇತ್ರೆ, ಬಸವರಾಜ ನಿಟ್ಟೂರೆ ಇದ್ದರು.

## ಮಹಮ್ಮದ್ ಪೈಗಂಬರ್ ಬಗ್ಗೆ ಅವಹೇಳನಕಾರಿ ಹೇಳಿಕೆ
## ಮಾತಿನ ವೇಗದಲ್ಲಿ ತಪ್ಪಾಗಿದೆ : ಯತ್ನಾಳ್



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಏ.14: ನಾನು ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಮಾತನಾಡಿಲ್ಲ. ಮಹಮ್ಮದ್ ಅಲಿ ಜಿನ್ನಾ ಬಗ್ಗೆ ಮಾತನಾಡುತ್ತಿದೆ. ಮಾತಿನ ವೇಗದಲ್ಲಿ ತಪ್ಪಾಗಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಸ್ಪಷ್ಟನೆ ನೀಡಿದರು.

ಜಿಲ್ಲೆಯಲ್ಲಿ ತಮ್ಮ ಹತ್ಯೆಗೆ ಸಂಚು ವಿಚಾರವಾಗಿ ಮಾತನಾಡಿದ ಅವರು, ಪ್ರವಾದಿ ಮಹಮ್ಮದ್ ಪೈಗಂಬರ್ ಎಂದರೆ ಮಾತ್ರ ಇಸ್ಲಾಂ ಧರ್ಮದ ಸಂಸ್ಥಾಪಕರ ಹೆಸರು ತೆಗೆದು-ಕೊಂಡಂತಾಗುತ್ತದೆ. ವಿಜಯಪುರದಲ್ಲಿ ಕಾಂಗ್ರೆಸ್ ಬಿಟ್ಟ-ರೇ ಬೇರೆಯವರು ಮಾತನಾಡಿಲ್ಲ. ಕಾಂಗ್ರೆಸ್ಸಿಗರು ಹತಾಶೆಯಾಗಿದ್ದಾರೆ. ಅವರಿಗೆ ಒಂದು ವಿಷಯ ಬೇಕಿದೆ ಅದಕ್ಕೆ ಹೀಗೆ ಮಾಡುತ್ತಿದ್ದಾರೆ ಎಂದರು.

ವಿಜಯಪುರದಲ್ಲಿ ಬರೀ ಗೂಂಡಾಗಿರಿ, ಹಪ್ತಾ ವಸೂಲಿ ನಡೆಯುತ್ತಿತ್ತು. ಅದೆಲ್ಲ ಈಗ ಬಂದ್ ಆಗಿದೆ. ದೇವರಿಗೆ ಬೈದಿದ್ದಾರೆ ಎಂದು ನೆಪ ಹೇಳುತ್ತಿದ್ದು, ಕಾಂಗ್ರೆಸ್‌ನವರು ಮಾತ್ರ ವಿರೋಧ ಮಾಡುತ್ತಿದ್ದಾರೆ. ಹಿಂದೂ ಧರ್ಮದಲ್ಲಿ ಬೇರೆ ದೇವರ ಅವಹೇಳನ ಮಾಡುವುದನ್ನು ಕಲಿಸಿಲ್ಲ. ರಾಮ, ಕೃಷ್ಣ, ಲಕ್ಷ್ಮೀ, ಸರಸ್ವತಿ ಅವಹೇಳನ ಮಾಡಿದಾಗ ಹೀಗೆ ಮಾಡಬೇಕು ಎಂದು ಪ್ರಶ್ನಿಸಿದರು. ಇದೊಂದು ಸಂಚು, ನನ್ನನ್ನು ಮುಗಿಸಲು ಸಂಚು. ಯತ್ನಾಳ್‌ನ್ನು ಮುಗಿಸಲು ಹೋದರೆ ರಾಜ್ಯದಲ್ಲಿ ಬೆಂಕಿ ಹೊತ್ತಿಕೊಳ್ಳುತ್ತದೆ. ಸದ್ಯ ಪೊಲೀಸ್ ಇಲಾಖೆ ತನಿಖೆ ಮಾಡುತ್ತಿದ್ದು, ಇದರ ಹಿಂದೆ ಯಾರಿದ್ದಾರೆ ಎಂದು ಹೊರಬರುತ್ತದೆ. ಈ ಬಗ್ಗೆ ಎನ್‌ಐಎ ತನಿಖೆಯಾಗಲಿ. ನನ್ನನ್ನು ಮುಗಿಸೋಕೆ ಆಗಲ್ಲ. ನಮ್ಮಲ್ಲಿ ರಾಣಿಚೆನ್ನಮ್ಮ, ರಾಯಣ್ಣ, ಅಂಬೇಡ್ಕರ್ ರಕ್ತ ಇದೆ. ಹೀಗೆ ಮುಂದುವರೆದರೆ ನಮ್ಮವರು ಹೋರಾಟಕ್ಕೆ ಮುಂದಾಗುತ್ತಾರೆ ಎಂದು ಎಚ್ಚರಿಕೆ ನೀಡಿದರು. ಇದೇ ವೇಳೆ ಬಿಜೆಪಿ ಜನಾಕ್ರೋಶ ಯಾತ್ರೆ ಬಗ್ಗೆ ಪ್ರತಿಕ್ರಿಯಿಸಿ ಗ್ಯಾಸ್, ಪೆಟ್ರೋಲ್ ದರ ಏರಿಕೆಯಾಗಿದೆ ಎನ್ನುತ್ತಾರೆ. ಅದನ್ನು ಜನ ನಿರ್ಣಯ ಮಾಡುತ್ತಾರೆ. ಯಾವುದು ಸತ್ಯ? ಯಾವುದು ಸುಳ್ಳು? ಎಂದು ಜನರು ನಿರ್ಧರಿಸುತ್ತಾರೆ ಎಂದರು. ಇನ್ನೂ ಕಾಂಗ್ರೆಸ್‌ನವರು ಅಬಕಾರಿಯಲ್ಲಾದ ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಿಲ್ಲ. ಹೊಂದಾಣಿಕೆ ಇರುವುದನ್ನು ಬಿಟ್ಟು, ಹೊಂದಾಣಿಕೆ ಇಲ್ಲದವರನ್ನು ಟಾರ್ಗೆಟ್ ಮಾಡುತ್ತಿದ್ದಾರೆ ಎಂದರು. ಇನ್ನೂ ಜಾತಿಗಣತಿ ಸಮೀಕ್ಷೆ ಸರಿಯಿಲ್ಲ. ದಲಿತರು ರಾಜ್ಯದ ನಂ.1, ಮುಸ್ಲಿಂ ನಂ.1 ಆದರೆ ಅವರನ್ನು ಅಲ್ಪಸಂಖ್ಯಾತ ಸ್ಥಾನದಿಂದ ಇಳಿಸಿ. ಹಾಲುಮತ ದೊಡ್ಡ ಸಮಾಜ, ಲಿಂಗಾಯತರು, ಕ್ಷತ್ರಿಯ, ಬ್ರಾಹ್ಮಣ ಸಮುದಾಯಗಳಿವೆ. ಬ್ರಾಹ್ಮಣರು 2% ಇದ್ದಾರೆ, ಅವರಿಗೆ ಅಲ್ಪಸಂಖ್ಯಾತ ಸ್ಥಾನ ಸಿಗಬೇಕು. ಮರಾಠ, ಬೌದ್ಧರು, ಕ್ರಿಶ್ಚಿಯನ್‌ರಿಗೆ ಅಲ್ಪಸಂಖ್ಯಾತ ಸ್ಥಾನ ಸಿಗಬೇಕು. ಲಿಂಗಾಯತರನ್ನು ಒಡೆದಂತೆ ಮುಸ್ಲಿಂ ಜಾತಿ ಒಡೆಯಲಿ. ಮುಸ್ಲಿಂ ಒಳಜಾತಿಗಳ ಸರ್ವೇ ಆಗಲಿ. ಸರ್ಕಾರ ಮುಸ್ಲಿಂರನ್ನು ಜಾತಿವಾರು ಒಡೆಯಲಿ ಎಂದು ಆಗ್ರಹಿಸಿದರು.

## ಬಿಜೆಪಿ-ಆರ್‌ಎಸ್‌ಎಸ್ ಅಂಬೇಡ್ಕರ್ ಶತ್ರುಗಳು:ಖರ್ಗೆ

ಮಲ್ಲಮ್ಮ ನುಡಿ ವಾರ್ತೆ


ನವದೆಹಲಿ:ಏ.14: ಮೋದಿ ಸರ್ಕಾರವು ಬಿ.ಆರ್. ಅಂಬೇಡ್ಕರ್ ಅವರ ಪರಂಪರೆಗೆ ಕೇವಲ "ಲಿಪ್ ಸರ್ವಿಸ್" ನೀಡುತ್ತಿದೆ. ಆದರೆ ಅವರ ಆಶಯಗಳನ್ನು ಈಡೇರಿಸಲು ಏನನ್ನೂ ಮಾಡುತ್ತಿಲ್ಲ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸೋಮವಾರ ಆರೋಪಿಸಿದ್ದಾರೆ. ಅಲ್ಲದೆ ಬಿಜೆಪಿ-ಆರ್‌ಎಸ್‌ಎಸ್ ಸಂವಿಧಾನ ಶಿಲ್ಪಿಯ "ಶತ್ರುಗಳು" ಎಂದು ಹೇಳಿದರು. ಕಾಂಗ್ರೆಸ್ ಅಂಬೇಡ್ಕರ್ ಅವರನ್ನು ನಡೆಸಿಕೊಂಡ ರೀತಿಯನ್ನು ಟೀಕಿಸಿದ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ವಾಗ್ದಾಳಿ



ನಡೆಸಿದ ಖರ್ಗೆ, 1952 ರ ಚುನಾವಣೆಯಲ್ಲಿ ಎಸ್.ಎ. ಡಾಂಗೆ ಮತ್ತು ವಿ.ಡಿ. ಸಾವರ್ಕರ್, ಸಂವಿಧಾನ ಶಿಲ್ಪಿಯ ಸೋಲಿಗೆ ಕಾರಣ ಎಂದು ಅಂಬೇಡ್ಕರ್ ಬರೆದ ಪತ್ರವನ್ನು ಉಲ್ಲೇಖಿಸಿ ತಿರುಗೇಟು ನೀಡಿದರು.

ಅಂಬೇಡ್ಕರ್ ಜನ್ಮದಿನಾಚರಣೆಯ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ರಾಷ್ಟ್ರವ್ಯಾಪಿ ಜಾತಿ ಜನಗಣತಿಯ ಅಗತ್ಯವನ್ನು ಒತ್ತಿ (2ನೇ ಪುಟ ನೋಡಿ...)

## ದೇಶದಲ್ಲಿ ಕಾಂಗ್ರೆಸ್‌ನಿಂದ ವೋಟ್ ಬ್ಯಾಂಕ್ ವೈರಸ್ :ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.14: ಇತ್ತೀಚೆಗೆ ಅಂಗೀಕರಿಸಲಾದ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ವಿರೋಧಿಸಿದ್ದಕ್ಕಾಗಿ ಕಾಂಗ್ರೆಸ್ ಪಕ್ಷ "ವೋಟ್ ಬ್ಯಾಂಕ್ ನ ವೈರಸ್" ನ್ನು ಹರಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಆರೋಪಿಸಿದ್ದಾರೆ. ವಿರೋಧ ಪಕ್ಷ ಎಸ್‌ಸಿ ಮತ್ತು ಎಸ್‌ಟಿ ಸಮುದಾಯವನ್ನು "ಎರಡನೇ ದರ್ಜೆಯ ನಾಗರಿಕರು" ಎಂದು ಪರಿಗಣಿಸುತ್ತಿದೆ ಎಂದು ಪ್ರಧಾನಿ ಆರೋಪಿಸಿದ್ದಾರೆ.

"ಕಾಂಗ್ರೆಸ್ ಸಂವಿಧಾನದ ವಿಧ್ವಂಸಕವಾಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಸಮಾನತೆಯನ್ನು ತರಲು ಬಯಸಿದ್ದರು, ಆದರೆ ಕಾಂಗ್ರೆಸ್ ಮತ ಬ್ಯಾಂಕ್ ರಾಜಕೀಯದ ವೈರಸ್ ನ್ನು ಹರಡಿತು. ಬಾಬಾಸಾಹೇಬ್ ಪ್ರತಿಯೊಬ್ಬ ಬಡವರು, ಹಿಂದುಳಿದವರು ಘನತೆಯಿಂದ ಮತ್ತು ತಲೆ ಎತ್ತಿ ಬದುಕಲು ಸಾಧ್ಯವಾಗುತ್ತದೆ, ಕನಸುಗಳನ್ನು ಕಾಣಬೇಕು ಮತ್ತು ಅವುಗಳನ್ನು ಪೂರ್ಣಗೊಳಿಸಬೇಕು ಎಂದು ಬಯಸಿದ್ದರು" ಎಂದು ಹಿಸಾರ್‌ನಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾಡಿದ (2ನೇ ಪುಟ ನೋಡಿ)

## ಸಂವಿಧಾನ ಶಿಲ್ಪಿಗೆ ಗೌರವ ನಮನ ಸಲ್ಲಿಸಿದ ಮಾಜಿ ಸಚಿವ ರಾಜಶೇಖರ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಏ.14:ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ,ಹುಮನಾಬಾದ ಪಟ್ಟಣದಲ್ಲಿರುವ ಡಾ.ಬಿ.ಆರ್ ಅಂಬೇಡ್ಕರ್ ರವರ ಪುತ್ಥಳಿಗೆ ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ್ ರವರು ಹಾಗೂ ಬೀದರ ಸಹಕಾರ ನಿಯಮಿತ ನಿ ಅಧ್ಯಕ್ಷರು ಬೀದರ ಡಿ.ಸಿ.ಸಿ ಬ್ಯಾಂಕನ ಉಪಾಧ್ಯಕ್ಷರು ಯುವನಾಯಕರಾದ ಶ್ರೀ ಅಭಿಷೇಕ ಆರ್ ಪಾಟೀಲ್ ರವರು ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ ಉತ್ಸವ ಸಮಿತಿ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ವೇದಿಕೆ ಕಾರ್ಯಕ್ರಮ ಪೂಜ್ಯ ಶ್ರೀಗಳಾದ ನಿಜಗುಣಾನಂದ ಸ್ವಾಮಿಜಿ ರವರ ದಿವ್ಯಸಾನಿದ್ಯದಲ್ಲಿ ನಡೆಯಿತು. ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ್‌ರವರು ದೀಪಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಡಾ.ಬಿ.ಆರ್ ಅಂಬೇಡ್ಕರ್ ರವರ ಕುರಿತು ನುಡಿನಮನ ಸಲ್ಲಿಸಿ ಸಂವಿಧಾನ ಶಿಲ್ಪಿ,ಭಾರತ ರತ್ನ ಡಾ.ಬಿ.ಆರ್ ಅಂಬೇಡ್ಕರ್ ರವರು ಕೇವಲ ಒಂದು ಸಮುದಾಯಕ್ಕೋಸ್ಕರ ಮಾತ್ರವಲ್ಲ, ಮಾನವ ಕುಲದ ಕಟ್ಟಕಡೆಯ ವ್ಯಕ್ತಿಯ ಸಲುವಾಗಿ



ಕಾರ್ಯನಿರ್ವಹಿಸಿದ ಮಹಾಚೇತನ. ಇಂದು ಬಾಬಾಸಾಹೇಬ ಅಂಬೇಡ್ಕರ್ ರವರು ಬರೆದಿರುವ ಸಂವಿಧಾನದಿಂದಲೆ ನಾವೆಲ್ಲರು ಇಂದು ಉನ್ನತ ಸ್ಥಾನಕ್ಕೆರಲು ಸಾಧ್ಯವಾಗಿದ್ದು ಅಂಬೇಡ್ಕರ್ ರವರ ಶಿಕ್ಷಣ, ಸಂಘಟನೆ, ಹೋರಾಟ ಮೂಲ ಮಂತ್ರದ ಮುಖಾಂತಾರ ಸರ್ವರು ಒಗ್ಗಟ್ಟಿನ ಮಂತ್ರ ಜಪಿಸಬೇಕು ಎನ್ನುವ ಮುಖಾಂತರ ನುಡಿನಮನ ಸಲ್ಲಿಸಿದರು.

ಪರಮಪೂಜ್ಯ ಶ್ರೀ ನಿಜಗುಣಾನಂದ ಸ್ವಾಮಿಗಳು, ಶ್ರೀ ಬೆಲ್ದಾಳ ಶರಣರು,ಶ್ರೀ ಧಮ್ಮಾನಂದ ಭಂತೆಜೀ,ಶ್ರೀ ಭೀಮರಾವ ಬಿ ಪಾಟೀಲ್ ವಿಧಾನ ಪರಿಷತ ಸದಸ್ಯರು, ಶ್ರೀಮತಿ ಪಾರ್ವತಿ ಮಡಿವಾಳಪ್ಪ ಶೇರಿಕರ್ (ಅಧ್ಯಕ್ಷರು ಪುರಸಭೆ) ಶ್ರೀ ಮುಕ್ರಮಜಾ (ಉಪಾಧ್ಯಕ್ಷರು ಪುರಸಭೆ)

ಮಾಜಿ ಜಿಲ್ಲಾಪಂಚಾಯತ ಉಪಾಧ್ಯಕ್ಷರಾದ ಶ್ರೀ ಲಕ್ಷ್ಮಣರಾವ ಬುಳ್ಳಾ ,ಶ್ರೀಧರ ಹಿರೇಮನಿ ಅಧ್ಯಕ್ಷರು ಜಯಂತಿ ಉತ್ಸವ ಸಮಿತಿ, ಬಸವರಾಜ ಆರ್ಯ ಗೌರವಾಧ್ಯಕ್ಷರು,ಲಕ್ಷ್ಮಿಪುತ್ರ ಮಾಳಗೆ ಗೌರವಾಧ್ಯಕ್ಷರು,ಶ್ರೀ ಅಫ್ಸರಮಿಯಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು , ಓಂಕಾರ ತುಂಬಾ,ಗ್ರಾಮೀಣ ಅಧ್ಯಕ್ಷರು,ಉಮೇಶ ಜಮಗಿ,ಯುವ ಕಾಂಗ್ರೆಸ್ ಅಧ್ಯಕ್ಷರು,ಪ್ರಭುರಾವ ತಾಳಮಡಗಿ,ಮಲ್ಲಿಕಾರ್ಜುನ ಮಾಶೆಟ್ಟಿ, ದತ್ತಕುಮಾರ ಚಿದ್ರಿ,ಮಲ್ಲಿಕಾರ್ಜುನ ಮಹೇಂದ್ರಕರ,ಬಾಬು ಟೈಗರ್, ಸಿದ್ರಾಮ್ ವಾಘಮಾರೆ,ಸುರೇಶ ಘಾಂಗ್ರೆ,ಹುಲೆಪ್ಪ ಪವಿತ್ರ,ಶ್ರೀಮಂತ ಪಾಟೀಲ್,ಮಹೇಶ ಅಗಡಿ,ವಿಠಲ ಕಲ್ಯಾಣಿ, ಅಶೋಕ ವರ್ಮಾ ,ವೀರಪ್ಪ ಭುತಾಳೆ, ಮಕ್ಸೂದ್ ಅಲಿ , ಸೈಯದ್ ಯಾಸಿನ ಅಲಿ ,ಅಶೋಕ ಕಟ್ಟಿ ,ಬಾಬುರಾವ ಪರಮಶೆಟ್ಟಿ, ಮಲ್ಲಿಕಾರ್ಜುನ ಶರ್ಮಾ,ನರಸಪ್ಪ ಪರಸನೋರ್, ಅನೀಲ ದೊಡ್ಡಿ , ರಾಹುಲ ಉದ್ದಾ ,ವೈಜಿನಾಥ ಡಾಂಗೆ , ಶರಣಪ್ಪಾ ದಂಡೆ ,ಕೃಷ್ಣಪ್ಪಾ ಹಾಲಗೂರ್ಟ,ಗಣಪತಿ ಅಸ್ಟೂರೆ ,ಗೌತಮ ಮೇಟಿ ,ಲೋಕೆಶ ಮೆತ್ರೆ ,ಧರಮ ರೆಡ್ಡಿ ,ವಿರೇಶ ತುಗಾಂವ , ಶಿವಕುಮಾರ ಪರಿಟ್, ರವರು ಸೇರಿದಂತೆ ಹಿರಿಯರು,ತಾಯಂದಿರು,ಯುವಕ ಮಿತ್ರರು,ದಲಿತಪರ ಸಂಘಟನೆಯ ವಿವಿಧ ಪದಾಧಿಕಾರಿಗಳು, ಜಯಂತೋತ್ಸವ ಉತ್ಸವ ಸಮಿತಿಯ ಪದಾಧಿಕಾರಿಗಳು ಪುರಸಭೆಯ ಗೌರವಾನ್ವಿತ ಸದಸ್ಯರು ಹಾಗೂ ಮಾಧ್ಯಮ ಮಿತ್ರರು ಉಪಸ್ಥಿತರಿದ್ದರು.

## ವಿಭಿನ್ನತೆ ಹೊಂದಿದ ಭಾರತಕ್ಕೆ ಅಪಸ್ವರವಿಲ್ಲದ ಶ್ರೇಷ್ಠ
## ಸಂವಿಧಾನ ನೀಡಿದ ಡಾ. ಅಂಬೇಡ್ಕರ್: ಸಚಿವ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:14:ವಿವಿಧ ಭಾಷೆ, ಧರ್ಮ, ಸಮಾಜ, ಆಚಾರ, ವಿಚಾರ ಭೌಗೋಳಿಕ ವಿಭಿನ್ನತೆ ಹೊಂದಿರುವ ಭಾರತಕ್ಕೆ ಯಾರೊಬ್ಬರೂ ಅಪಸ್ವರ ಎತ್ತದಂತಹ ಶ್ರೇಷ್ಠ ಸಂವಿಧಾನವನ್ನು, ಭಾರತರತ್ನ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ರಚಿಸಿದ್ದಾರೆ ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು.

ಜಿಲ್ಲಾ ದಳಿತ ಭವನದ ಆಡಿಟೋ-ರಿಯಂ ಸಭಾಂಗಣದಲ್ಲಿಂದು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವ ಅಂಗವಾಗಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವಾರ್ಪನೆ ಸಲ್ಲಿಸಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ವೈವಿಧ್ಯಮಯ ದೇಶವಾಗಿದೆ. ವಿವಿಧ ಧರ್ಮ, ಭಾಷೆ, ಆಚಾರ, ವಿಚಾರಗಳನ್ನು ಹೊಂದಿರುವಂತಹ ಹಲವು ಸಮಾಜ, ಜನಾಂಗಗಳ ದೇಶವಾಗಿದೆ. ವಿವಿಧ ರೀತಿಯ ಭೌಗೋಳಿಕತೆಯನ್ನು ಸಹ ಹೊಂದಿರುವಂತಹ ಇಂತಹ ರಾಷ್ಟ್ರಕ್ಕೆ ಉತ್ಕೃಷ್ಟವಾದ ಶ್ರೇಷ್ಠ ಸಂವಿಧಾನವನ್ನು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ್ದಾರೆ.ಅದರಲ್ಲಿಯೂ ಯಾರೊಬ್ಬರ ಅಪಸ್ವರ ವಿಲ್ಲದಂತಹ ಶ್ರೇಷ್ಠ ಸಂವಿಧಾನವನ್ನು ರಚಿಸಿರುವುದು ನಮ್ಮ ದೇಶದ ಅಖಂಡತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಸಂವಿಧಾನದ ಮೂಲಕ ಶೋಷಿತ ಸಮಾಜಕ್ಕೆ ನ್ಯಾಯ ಒದಗಿಸಿದ ದೇವಸ್ವರೂಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಾಗಿದ್ದಾರೆ.ರಾಜಕೀಯವಾಗಿ, ಶೈಕ್ಷಣಿಕವಾಗಿ ಶಕ್ತಿ ತುಂಬುವ ಕಾರ್ಯ ಮಾಡಿದ್ದಾರೆ. ಅಂತಹ ಮೇರು ವ್ಯಕ್ತಿತ್ವದ ಡಾ. ಬಾಬಾ ಸಾಹೇಬ್ ರ ತತ್ವ ಆದರ್ಶಗಳನ್ನು (2ನೇ ಪುಟ ನೋಡಿ)

# ಒಂದನೆ ಪುಟದಿಂದ..........

## ಅಸ್ಪೃಶ್ಯತೆ ಅಳಿಯಬೇಕು : ಮುಖ್ಯಮಂತ್ರಿ ಸಿದ್ದರಾಮಯ್ಯ

ಅವಕಾಶ ಕಲ್ಪಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

**ಜಾತಿ ವ್ಯವಸ್ಥೆ ನಿವಾರಣೆಯಾಗದ ಹೊರತು ಸಮಾನತೆ ಸಾಧ್ಯವಿಲ್ಲ:** ಎಲ್ಲಿಯವರೆಗೂ ಜಾತಿ ವ್ಯವಸ್ಥೆ ಇರುತ್ತದೆಯೋ ಅಲ್ಲಿಯವರೆಗೂ ಸಮಾನತೆಯನ್ನು ತರಲು ಸಾಧ್ಯವಾಗುವುದಿಲ್ಲ. ಅಸ್ಪೃಶ್ಯತೆಯನ್ನು ತೊಡೆದು ಹಾಕಲು ಸಾಧ್ಯವಿಲ್ಲ. ಎಂದು ಹೇಳಿದ ಮುಖ್ಯಮಂತ್ರಿಗಳು ಸಂವಿಧಾನ ಜಾರಿಯಾದ ದಿನ 1950 ಜನವರಿ 26 ರಂದು ಬಾಬಾಸಾಹೇಬ್ ಅಂಬೇಡ್ಕರ್ ಅವರು ಒಂದು ಮಾತನ್ನು ಹೇಳಿದ್ದರು, ನಾವು ಇಂದು ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕತೆಯ ಅಸಮಾನತೆ ಇರುವಂತಹ ವೈರುದ್ಯತೆ ಇರುವ ಸಮಾಜಕ್ಕೆ ಕಾಲಿಡುತ್ತಿದ್ದೇವೆ. ಅದರಂತೆ ಇಂದು ನಾವು ಸ್ವಾತಂತ್ರ್ಯ ಬಂದು 75 ವರ್ಷಗಳಾದರೂ ಇಂದಿಗೂ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಅಸಮಾನತೆಯನ್ನು ಹೋಗಲಾಡಿಸಲು ಸಾಧ್ಯವಾಗಲಿಲ್ಲ, ಅಸ್ಪೃಶ್ಯತೆಯನ್ನು ನಿವಾರಣೆ ಮಾಡಲು ಸಾಧ್ಯವಾಗಲಿಲ್ಲ. ಅಸಮಾನತೆ ಮತ್ತು ಅಸ್ಪೃಶ್ಯತೆ ತೊಡೆದು ಹಾಕಿದಲ್ಲಿ ಮಾತ್ರ ಸ್ವಾತಂತ್ರ್ಯಕ್ಕೆ ನಿಜ ಸ್ವರೂಪದ ಅರ್ಥ ಸಿಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಮನುವಾದಿಗಳು ಇದ್ದಕಿದ್ದಂತೆ ಅಂಬೇಡ್ಕರ್ ಮೇಲೆ ಪ್ರೀತಿ ಬಂದಂತೆ ಆಡುತ್ತಿದ್ದಾರೆ. ಆದರೆ ಸಂವಿಧಾನವನ್ನು, ಇದರ ಜಾರಿಯನ್ನು ವಿರೋಧಿಸಿದ್ದವರೇ ಇವರು. ಚುನಾವಣೆಯಲ್ಲಿ ನನ್ನ ಸೋಲಿಗೆ ಸಾವರ್ಕರ್ ಕಾರಣ ಎಂದು ಸ್ವತಃ ಅಂಬೇಡ್ಕರ್ ಅವರೇ ಪತ್ರ ಬರೆದಿದ್ದಾರೆ, ಅಂಬೇಡ್ಕರ್ ಸೋಲಿಗೆ ಕಾಂಗ್ರೆಸ್ ಕಾರಣ ಎಂದು ಮನುವಾದಿಗಳು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ತಿಳಿಸಿದರು.

**ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆ ಜಾರಿ – ಕರ್ನಾಟಕ ಮೊದಲು:** ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯನ್ನು ಜಾರಿಗೆ ತಂದ ರಾಜ್ಯಗಳಲ್ಲಿ ನಮ್ಮ ಕರ್ನಾಟಕ ರಾಜ್ಯ ಮೊದಲು ಅದರಲ್ಲೂ ನಮ್ಮ ಕಾಂಗ್ರೆಸ್ ಸರ್ಕಾರ ಈ ಕಾಯ್ದೆಯನ್ನು ಜಾರಿಗೆ ತಂದಿತು. ಕರ್ನಾಟಕ ಮತ್ತು ಆಂಧ್ರ ಪ್ರದೇಶ ಹೊರತುಪಡಿಸಿ ಈ ಕಾಯ್ದೆ ಬೇರೆ ಯಾವುದೇ ರಾಜ್ಯದಲ್ಲಿ ಜಾರಿ ಮಾಡಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಆಯವ್ಯಯದ ಗಾತ್ರ ಹೆಚ್ಚಾದಂತೆಲ್ಲ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯ ಅನುದಾನವು ಹೆಚ್ಚಾಗಬೇಕು. ಕಳೆದ ವರ್ಷ ನಮ್ಮ ಸರ್ಕಾರ ಆಯವ್ಯಯದಲ್ಲಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯಡಿ ರೂ 32 ಸಾವಿರ ಕೋಟಿಗಳನ್ನು ಮೀಲಿಟ್ಟಿತ್ತು. ಈ ವರ್ಷ ಆಯವ್ಯಯದಲ್ಲಿ ರೂ 42 ಸಾವಿರದ 18 ಕೋಟಿಗಳನ್ನು ಮೀಸಲಿಟ್ಟಿದ್ದೇವೆ. ಆದರೆ ವಿರೋಧ ಪಕ್ಷದವರ ಆಡಳಿತಾವಧಿಯಲ್ಲಿ ಕೇವಲ 8 ಸಾವಿರದ 300 ಕೋಟಿಗಳನ್ನು ಮೀಸಲಿಟ್ಟಿತ್ತು ಎಂದು ತಿಳಿಸಿದರು.

**ಬಡ್ತಿಯಲ್ಲಿ ಮೀಸಲಾತಿ:** ಈ ಹಿಂದೆ ನಮ್ಮ ಕಾಂಗ್ರೆಸ್ ಸರ್ಕಾರದ ಆಡಳಿತಾವಧಿಯಲ್ಲಿ ಬಡ್ತಿಯಲ್ಲಿ ಮೀಸಲಾತಿಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಶ್ರೀಮತಿ ರತ್ನಪ್ರಭ, ಮುಖ್ಯಕಾರ್ಯದರ್ಶಿಗಳು ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಬಡ್ತಿಯಲ್ಲಿ ಮೀಸಲಾತಿಯನ್ನು ಜಾರಿಗೆ ತರಲಾಯಿತು. ಈ ಸಂಬಂಧ ಸುಪ್ರಿಂಕೋ?????ನಲ್ಲಿಯೂ ಸಹ ಹೋರಾಟ ಮಾಡಿ ಅಲ್ಲಿಯೂ ಜಯ ಸಾಧಿಸಲಾಯಿತು. ಅದೇ ರೀತಿ ಕಾಮಗಾರಿ ಗುತ್ತಿಗೆ ನೀಡುವಲ್ಲಿಯೂ ಸಹ ಮೀಸಲಾತಿಯನ್ನು ನಮ್ಮ ಸರ್ಕಾರ ಜಾರಿಗೆ ತಂದಿದೆ ಎಂದು ತಿಳಿಸಿದರು. ಸಮಾಜದಲ್ಲಿ ಸಮಾನತೆಯ ಶಕ್ತಿ ಇಲ್ಲದಂತವರಿಗೆ ಶಕ್ತಿ ತುಂಬಿ ಅವರನ್ನು ಮೇಲೆತ್ತುವ ಕೆಲಸ ಮಾಡಬೇಕು. ಅವಕಾಶ ವಂಚಿತರಿಗೆ, ನ್ಯಾಯ ಸಿಗದವರಿಗೆ ನ್ಯಾಯವನ್ನು ಒದಗಿಸುವುದೇ ನಮ್ಮ ಸರ್ಕಾರದ ಗುರಿ. ಅಂಬೇಡ್ಕರ್ ಅವರ ಆಶಯಗಳ ಜಾರಿಗಾಗಿ ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಜನರ ಕೊಳ್ಳುವ ಶಕ್ತಿಯನ್ನು ಹೆಚ್ಚಿಸಲಾಗಿದೆ. ಇದರಿಂದ ಆರ್ಥಿಕ ಚಟುವಟಿಕೆಗಳು ಚೇತರಿಕೆಯಾಗಿದೆ ಎಂದು ತಿಳಿಸಿದರು.

ವಿದ್ಯಾವಂತರೇ ಹೆಚ್ಚು ಜಾತಿವಾದಿಗಳಾಗುತ್ತಿರುವುದು ಸರಿಯಲ್ಲ. ಶಿಕ್ಷಣದ ಉದ್ದೇಶ ಜಾತಿವಾದಿಗಳಾಗುವುದಲ್ಲ. ಅವಕಾಶ ವಂಚಿತರ ವಿರುದ್ಧ ಹೋರಾಟ ಮಾಡಿ ಅವರನ್ನು ಮೇಲೆತ್ತುವ ಕೆಲಸ ಮಾಡಬೇಕು. ಸಾಮಾಜಿಕವಾಗಿ ಅವರಲ್ಲಿ ಶಕ್ತಿ ತುಂಬುವ ಕೆಲಸ ಮಾಡಬೇಕು. "ಎಲ್ಲರೂ ವಿದ್ಯಾವಂತರಾಗಿ, ಎಲ್ಲರೂ ಸಂಘಟನೆ ಮಾಡಿ, ಎಲ್ಲಾರೂ ಹೋರಾಟ ಮಾಡಿ" ಎಂದು ಬಾಬಾಸಾಹೇಬ್ ಅಂಬೇಡ್ಕರ್ ಹೇಳಿದ್ದಾರೆ. ಅವರ ಆಶಯದಂತೆ ಎಲ್ಲಾರೂ ಸಾಗಬೇಕು ಎಂದು ಕರೆ ನೀಡಿದರು.

ನೆಲ್ಸನ್ ಮಂಡೇಲ ಅವರು ನಾನು ಸಂವಿಧಾನ ಬರೆಯಲು ಸ್ಪೂರ್ತಿ ಭಾರತದ ಸಂವಿಧಾನ (ಖಟಿಜುಚಿಟಿ ಅಠಟಿಣುಣಣಾಣುಠಟಿ) ಎಂದು ಹೇಳಿದ್ದಾರೆ. ಅಂತಹ ಸಂವಿಧಾನವನ್ನು ನಮ್ಮ ದೇಶಕ್ಕೆ ಕೊಟ್ಟ ಮಹಾನ್ ಚೇತನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಅವರ ಆಶಯದಂತೆ ನಾವು ಅವರು ರೂಪಿಸಿ ಕೊಟ್ಟಿರುವ ಸಂವಿಧಾನದಂತೆ ನಡೆಯುವುದೇ ನಾವು ಅವರಿಗೆ ಸಲ್ಲಿಸುವ ಗೌರವ ಎಂದು ತಿಳಿಸಿದರು. ಸಾರಾಯಿ ಬೇಡ, ಶಾಲೆ ಬೇಕು ಎನ್ನುವುದು ದಲಿತ ಸಂಘರ್ಷ ಸಮಿತಿ ಹೋರಾಟದ ಘೋಷಣೆಯಾಗಿತ್ತು. ನಾನು ಉಪಮುಖ್ಯಮಂತ್ರಿ ಆದ ತಕ್ಷಣ ತಾಲ್ಲೂಕು ಮಟ್ಟದಲ್ಲಿ ವಸತಿ ಶಾಲೆ ಆರಂಭಿಸಿದೆ. ಮುಂದಿನ ಆರ್ಥಿಕ ವರ್ಷದ ಕೊನೆಯ ವೇಳೆಗೆ ರಾಜ್ಯದ ಎಲ್ಲಾ ಹೋಬಳಿಗಳಲ್ಲೂ ವಸತಿ ಶಾಲೆ ತೆರೆಯಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

**ಎಲ್ಲಾ ಜಿಲ್ಲೆಗಳಲ್ಲೂ ಡಿ.ಸಿ.ಆರ್.ಇ ಪೊಲೀಸ್ ಠಾಣೆಗಳ ಸ್ಥಾಪನೆ:** ಎಲ್ಲರಿಗೂ ಸಮಾನ ರೀತಿಯಲ್ಲಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಇಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಾಗರೀಕ ಹಕ್ಕು ಜಾರಿ ನಿರ್ದೇಶನ ಪೊಲೀಸ್ ಠಾಣೆಗಳನ್ನು (ಡಿ.ಸಿ.ಆರ್.ಇ) ಉದ್ಘಾಟನೆ ಮಾಡಲಾಗಿದೆ. ಇಂದಿನಿಂದ 32 ಜಿಲ್ಲೆಗಳಲ್ಲಿ ಒಟ್ಟು 33 ಡಿ.ಸಿ.ಆರ್.ಇ ಪೊಲೀಸ್ ಠಾಣೆಗಳು ಕಾರ್ಯಾರಂಭ ಮಾಡಲಿವೆ. ಸಾಂಕೇತಿಕವಾಗಿ ಒಂದು ಕೇಂದ್ರ ಡಿ.ಸಿ.ಆರ್.ಇ ಠಾಣೆಯನ್ನು ಉದ್ಘಾಟಿಸಿದ್ದೇನೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

**ಸಂವಿಧಾನವೇ ನಮ್ಮ ತಂದೆ-ತಾಯಿ : ಸಂವಿಧಾನವೇ ನಮ್ಮ ಬಂಧು – ಬಳಗ : ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್:** ಸಂವಿಧಾನವೇ ನಮ್ಮ ತಂದೆ ತಾಯಿ, ಸಂವಿಧಾನವೇ ನಮ್ಮ ಬಂಧು ಬಳಗ ಎಂದು ತಿಳಿಸಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆತ್ಮ ನೀಡಿದ ಪರಮಾತ್ಮನಿಗೆ ಇಂದು ಗೌರವ ಸಲ್ಲಿಸುವ ಭಾಗ್ಯ ನಮ್ಮದು. ನಾವು ಅಂಬೇಡ್ಕರ್ ಅವರ ಪ್ರತಿಮೆಗೆ ಪೂಜೆ ಮಾಡುತ್ತಿಲ್ಲ, ಅವರ ಪ್ರತಿಭೆಗೆ ಗೌರವ ಸಲ್ಲಿಸುತ್ತಿದ್ದೇವೆ ಎಂದು ತಿಳಿಸಿದರು.

ಯಾವುದೇ ಒಂದು ಸಮಾಜಕ್ಕೆ, ಒಂದು ಧರ್ಮ- ಜಾತಿಯ ಜನಕ್ಕಾಗಿ ಅಲ್ಲ, ಭಾರತದ ಪ್ರತಿಯೊಬ್ಬ ಪ್ರಜೆಯ ಆಚಾರ- ವಿಚಾರಗಳಿಗೆ ರಕ್ಷಣೆ ಕೊಟ್ಟು ಅವರ ಬದುಕು ರೂಪಿಸಿದವರು ಅಂಬೇಡ್ಕರ್. ಜೀವ ಇದ್ದರೆ ಜೀವನ, ಆ ಜೀವಕ್ಕೆ ಸಂವಿಧಾನವೆಂಬ ಉಸಿರು ನೀಡಿದವರು ಅಂಬೇಡ್ಕರ್ ಎಂದರು.

ಮುಂದಿನ ಜನಾಂಗಕ್ಕೆ ಏನು ಕೊಡುಗೆ ನೀಡಿ ಹೋಗುತ್ತೇವೋ ಗೊತ್ತಿಲ್ಲ, ಆದರೆ ಬಾಬಾ ಸಾಹೇಬರು ನೀಡಿದ ಸಂವಿಧಾನವನ್ನು ಅರ್ಥ ಮಾಡಿಕೊಳ್ಳುವಷ್ಟು ಜ್ಞಾನವನ್ನು ಜನರಿಗೆ ಕೊಟ್ಟು ಹೋದರೆ ಅದೇ ನಮ್ಮ ಸಾರ್ಥಕತೆ ಎಂದರು. ಇಡೀ ನಮ್ಮ ಸರ್ಕಾರ ಅಂಬೇಡ್ಕರರ ವಿಚಾರಧಾರೆ, ಅವರು ಹಾಕಿಕೊಟ್ಟ ಹಾದಿಯಲ್ಲಿ ನಡೆಯುತ್ತಿದೆ. ದೇಶದ ಉದ್ದಗಲಕ್ಕೂ ಯಾರದ್ದಾದರೂ ಪುತ್ಥಳಿ ಇದ್ದರೆ ಅದು ಅಂಬೇಡ್ಕರ್ ಅವರದ್ದು ಮಾತ್ರ. ಅವರು ನೀಡಿದ ಸಂವಿಧಾನ ರಕ್ಷಣೆಗೆ ಬದ್ಧರಾಗೋಣ, ಅದೇ ನಾವು ಅವರಿಗೆ ಸಲ್ಲಿಸುವ ಗೌರವವಾಗಿದೆ ಎಂದು ತಿಳಿಸಿದರು.

**ಸಂವಿಧಾನ ಜಾರಿಯಾಗಿ 75 ವರ್ಷಗಳು ಪೂರ್ಣಗೊಂಡಿದ್ದರೂ ಸಹ ಸಮಾಜದಲ್ಲಿ ಜಾತೀಯತೆ ಕಡಿಮೆಯಾಗಿಲ್ಲ – ಸಚಿವ ಹೆಚ್.ಸಿ. ಮಹದೇವಪ್ಪ**

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಡಾ.ಹೆಚ್.ಸಿ.ಮಹದೇವಪ್ಪ, ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವುದು ಸರ್ಕಾರದ ಉದ್ದೇಶವಾಗಿದೆ. ದೇಶದ ಐಕ್ಯತೆ ಮತ್ತು ಸಮಗ್ರತೆಯನ್ನು ಬಲಪಡಿಸಲು ಕಾಂಗ್ರೆಸ್ ಕಾರ್ಯಕಾರಿ ಸಮಿತಿಯಿಂದ ಬೆಳಗಾವಿಯಲ್ಲಿ ಜೈಬಾಪು, ಜೈಭೀಮ್ ಹಾಗೂ ಜೈಸಂವಿಧಾನ ಘೋಷಣೆಗಳನ್ನು ಕೂಗುವ ಮೂಲಕ ಮತ್ತೊಮ್ಮೆ ಸ್ವಾತಂತ್ರ್ಯದ ಉದ್ದೇಶವನ್ನು ಸಾರಲಾಗಿದೆ. ಪರಿಶ್ರಮ, ಹೋರಾಟ, ಆಳ ಅಧ್ಯಯನದ ಮೂಲಕ ಎಲ್ಲಾ ಸಮುದಾಯವನ್ನು ಒಗ್ಗೂಡಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಶ್ರೇಷ್ಟ ಸಂವಿಧಾನವನ್ನು ದೇಶಕ್ಕೆ ನೀಡಿದ್ದಾರೆ. ಸಂವಿಧಾನ ಜಾರಿಯಾಗಿ 75 ವರ್ಷಗಳು ಪೂರ್ಣಗೊಂಡಿದ್ದರೂ ಸಹ ಸಮಾಜದಲ್ಲಿ ಜಾತೀಯತೆ, ಧರ್ಮ ಆಧಾರಿತ ಹೋರಾಟಗಳು, ದ್ವೇಷಪೂರಿತ ನಡವಳಿಕೆಗಳು ಸಾರ್ವಭೌಮತ್ವವನ್ನು ಅಪಾಯಕ್ಕೆ ಸಿಲುಕಿಸಿದೆ. ಪ್ರಜಾಪ್ರಭುತ್ವವನ್ನು ಅರ್ಥೈಸದೇ ಹೋದರೆ ಸಮಾಜದ ಬದಲಾವಣೆ ಸಾಧ್ಯವಿಲ್ಲ ಎಂದರು. ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಲು ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಸಂವಿಧಾನ ಪೀಠಿಕೆಯನ್ನು ಓದಲು ಕಡ್ಡಾಯಗೊಳಿಸಲಾಗಿದೆ. ವಿದ್ಯಾರ್ಥಿಗಳು ನಿರರ್ಗಳವಾಗಿ ಓದುವ ಮೂಲಕ ಸಂವಿಧಾನದ ಆಶಯಗಳನ್ನು ಈಡೇರಿಸುವ ಕಾರ್ಯ ಮಾಡಲಾಗುತ್ತಿದೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು 25 ಲಕ್ಷ ಜನರು ಸೇರಿ 2500 ಕಿಲೋಮೀಟರ್ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶ್ವದಾಖಲೆ ಮಾಡಲಾಗಿದೆ. ಪ್ರಜಾಪ್ರಭುತ್ವದ ಆಶಯಗಳನ್ನು ಸಫಲ ಮಾಡುವಲ್ಲಿ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಸಮಾನತೆಯ ಸಮಸಮಾಜ ನಿರ್ಮಾಣಕ್ಕೆ ಕಂಠಕಪ್ರಾಯವಾಗಿದ್ದನ್ನು ಮನಗಂಡ ಮುಖ್ಯಮಂತ್ರಿಗಳು 5 ಗ್ಯಾರೆಂಟಿಗಳನ್ನು ಜಾರಿಗೆ ತಂದಿದ್ದಾರೆ. ಯುವ ಜನರಿಗೆ ಸಮಾನ ಅವಕಾಶಗಳನ್ನು ಕಲ್ಪಿಸಲು ಗ್ಯಾರೆಂಟಿ ಯೋಜನೆಗಳ ಮೂಲಕ ಪೂರಕ ವಾತಾವರಣ ಕಲ್ಪಿಸಲಾಗಿದೆ ಎಂದು ತಿಳಿಸಿದರು. ಧರ್ಮಾಧಾರಿತ ನಡವಳಿಕೆಗಳು, ಜನರ ವೈವಿಧ್ಯತೆ, ಸಾಂಸ್ಕೃತಿಕ ನಡವಳಿಕೆಗಳನ್ನು ನಾಶ ಮಾಡುವ ಪ್ರವೃತ್ತಿಗಳು ಇಂದಿಗೂ ನಡೆಯುತ್ತಿವೆ. ಹಾಗಾಗಿ ಸಂವಿಧಾನದ ಆಶಯಗಳನ್ನು ಜಾರಿ ಮಾಡಲು ಮುಂಚೂಣಿಯಲ್ಲಿರಬೇಕು. ಸಮುದಾಯಗಳು ಜಾಗೃತರಾಗಬೇಕು. ದಲಿತರು, ಅಸ್ಪೃಶ್ಯರು ದಬ್ಬಾಳಿಕೆಗೆ ಒಳಗಾಗುವುದನ್ನು ರಕ್ಷಿಸಲು ನಾಗರಿಕ ಹಕ್ಕು ಪಡೆಯನ್ನು ಸ್ಥಾಪಿಸಿದ್ದು, ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ. ಸಮೃದ್ಧ ಭಾರತ ಕನಸನ್ನು ನನಸು ಮಾಡಲು ಎಲ್ಲರೂ ಕೈಜೋಡಿಸಬೇಕು ಎಂದರು.

**ಕಟ್ಟಕಡೆಯ ವ್ಯಕ್ತಿಯ ರಕ್ಷಣೆಗಾಗಿ ಸಂವಿಧಾನ – ಸಚಿವ ಕೆ.ಹೆಚ್. ಮುನಿಯಪ್ಪ** ಸಂವಿಧಾನ ಒಂದು ಜಾತಿ, ಒಂದು ವರ್ಗಕ್ಕೆ ಸಂಬಂಧಿಸಿದ್ದಲ್ಲ. 140 ಕೋಟಿ ಜನತೆಯ, ಕಟ್ಟಕಡೆಯ ವ್ಯಕ್ತಿಯ ರಕ್ಷಣೆಗಾಗಿ ಸಂವಿಧಾನವನ್ನು ರೂಪಿಸಲಾಗಿದ್ದು, ಅಂತಹ ಸಂವಿಧಾನವನ್ನು ದೇಶಕ್ಕೆ ಕೊಟ್ಟಂತಹ ಮಹಾನ್ ಚೇತನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಎಂದು ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಡಾ.ಬಿಆರ್.ಅಂಬೇಡ್ಕರ್ ರವರ ಜಯಂತಿಯನ್ನು ಅದ್ದೂರಿಯಾಗಿ ಆಚರಣೆ ಮಾಡಿದ್ದು ಅಧಿಕಾರಿಗಳು ಅತ್ಯುತ್ತಮವಾಗಿ ಶ್ರಮವಹಿಸಿ ಮಾಡಿದ್ದಾರೆ.ಜವಹಾರ್ ಲಾಲ್ ನೆಹರು ಅವರು ಮಹಾತ್ಮ ಗಾಂಧೀಜಿ ಅವರೊಡನೆ ಚರ್ಚಿಸಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾಗಿ ಆಯ್ಕೆ ಮಾಡಿದರು. ಅಂಬೇಡ್ಕರ್ ಅವರು ಯಾರೂ ನಿರೀಕ್ಷಿಸದ ರೀತಿಯಲ್ಲಿ ಸಂವಿಧಾನವನ್ನು ರಚನೆ ಮಾಡಿ ಈ ದೇಶಕ್ಕೆ ಅದ್ಬುತವಾದ ಸಂವಿಧಾನ ನೀಡಿದ್ದಾರೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ತಿಳಿಸಿದರು. ನಮ್ಮ ದೇಶದ ಈ ಸಂವಿಧಾನ ಇತರೆ ದೇಶಗಳಿಗಿಂತ ವಿಶೇಷ ಹಾಗೂ ವಿಭಿನ್ನವಾಗಿದೆ. ಅಂಬೇಡ್ಕರ್ ರವರ ಜಯಂತೋತ್ಸವವನ್ನು ದೇಶವಲ್ಲದೆ ಪ್ರಪಂಚದಾದ್ಯಂತ ಆಚರಣೆ ಮಾಡುತ್ತಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಸಮುದಾಯಕ್ಕೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿ ಸುಮಾರು 42 ಸಾವಿರ ಕೋಟಿರೂಗಳನ್ನು ಮೀಸಲಿಟ್ಟಿದ್ದು ಈ ಸಮುದಾಯದ ಅಭಿವೃದ್ಧಿಗಾಗಿ ಹಲವಾರು ನಿಗಮಗಳ ವತಿಯಿಂದ ವಿವಿಧ ಯೋಜನೆಗಳ ಮತ್ತು ಕಾರ್ಯಕ್ರಮಗಳ ಅನುಷಾ??ನ ಮಾಡುವ ಮೂಲಕ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಇದರ ಅಭಿವೃದ್ಧಿ ಇನ್ನೂ ಸಾಲದು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ನಿಗಮದ ಯೋಜನೆಗಳಲ್ಲಿ ಬದಲಾವಣೆ ಮಾಡಬೇಕು ಮತ್ತು ಇನ್ನೂ ವಿಶೇಷವಾದ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದರ ಮೂಲಕ ಈ ಸಮುದಾಯದ ಅಭಿವೃದ್ಧಿಗೆ ಸಚಿವರು ಅಧಿಕಾರಿಗಳ ಮೂಲಕ ಇನ್ನಷ್ಟು ಹೆಚ್ಚು ಒತ್ತು ನೀಡಬೇಕು ಎಂದರು.

ಮಕ್ಕಳ ವಿಧ್ಯಾಭ್ಯಾಸಕ್ಕಾಗಿ ಆಶ್ರಮ ಶಾಲೆಗಳು ಮತ್ತು ಮೊರಾರ್ಜಿ ವಸತಿ ಶಾಲೆಗಳನ್ನು ನಡೆಸುತ್ತಿದ್ದು ಇದು ಹೋಬಳಿ ಮಟ್ಟದಲ್ಲಿ ನಡೆಯುತ್ತಿವೆ. ಆದರೆ ಈ ವಸತಿ ಶಾಲೆಗಳನ್ನು ಪಂಚಾಯತಿ ಮಟ್ಟಕ್ಕೆ ವಿಸ್ತರಿಸಿದಾಗ ಮಕ್ಕಳ ಕಲಿಕೆಗೆ ಇನ್ನಷ್ಟು ಒತ್ತನ್ನು ನೀಡಲು ಸಾಧ್ಯವಾಗುತ್ತದೆ ಇದನ್ನು ಸಚಿವರು ಮಾಡುವುದಕ್ಕೆ ಕ್ರಮ ವಹಿಸಬೇಕು ಎಂದರು. ಈ ಸಮುದಾಯದ ಅಭಿವೃದ್ಧಿಗಾಗಿ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಗುತ್ತಿಗೆಯಲ್ಲಿ ಒಂದು ಕೋಟಿ ರೂಗಳವರೆಗೂ ಯಾವುದೇ ಟಂಡರ್ ರಹಿತವಾಗಿ ಮೀಸಲಿಟ್ಟಿದ್ದಾರೆ ಇದು ಈ ಸಮುದಾಯದ ಬೆಳವಣಿಗೆಗೆ ಸಹಕಾರಿಯಾಗಲಿದೆ. ನಮ್ಮ ಸರ್ಕಾರ ಬಡವರ, ರೈತರ ದೀನ ದಲಿತರ ಹಾಗೂ ಹಿಂದುಳಿದ ವರ್ಗಗಳ ಪರವಾದ ಆಡಳಿತ ನೀಡುತ್ತಿದ್ದು ನಾವು ನುಡಿದಂತೆ ನಡೆಯುತ್ತಿದ್ದೇವೆ ಎಂದರು.

**ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಭವ್ಯ ಭಾರತದ ಬೆಳಕು : ಶಾಸಕ ರಿಜ್ವಾನ್ ಅರ್ಷದ್** ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್ ಅವರು, ಅಂಬೇಡ್ಕರ್ ರವರು ಕೇವಲ ಹೆಸರು ಮಾತ್ರವಲ್ಲ, ಅವರು ಭವ್ಯ ಭಾರತದ ಬೆಳಕು ಎಂದು ಬಣ್ಣಿಸಿದರು. ವಿವಿಧ ರೀತಿಯಲ್ಲಿ ಶೋಷಣೆಗೆ ಒಳಗಾದವರಿಗೆ ನ್ಯಾಯ ಮತ್ತು ಸಮಾನತೆಯನ್ನು ಒದಗಿಸಿದ ಮಹಾನಾಯಕ. ಶೇಕಡ 80 ರಷ್ಟು ಸಮುದಾಯದವರಿಗೆ ಸಾಮಾಜಿಕವಾಗಿ ನ್ಯಾಯ ಮತ್ತು ಸಮಾನತೆ ಗೌರವ ದೊರೆತಿರುವುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದಿಂದ ಎಂದು ಹೇಳಿದರು. ಅಲ್ಪಸಂಖ್ಯಾತರ ಏಳಿಗೆಗಾಗಿ 4000 ಸಾವಿರ ಕೋಟಿ ರೂಪಾಯಿಯನ್ನು 2025-26 ನೇ ಸಾಲಿನಲ್ಲಿ ಅನುದಾನವನ್ನು ನೀಡಲಾಗಿದೆ. ಈ ಸರ್ಕಾರ ಎಲ್ಲಾ ವರ್ಗದವರ ಸಾಮಾಜಿಕ ನ್ಯಾಯದ ಪರವಾಗಿ ಕೆಲಸ ಮಾಡುತ್ತಿದೆ. ಇದೇ ಸಂದರ್ಭದಲ್ಲಿ ಈ ದಿನವನ್ನು ಸ್ವಾಭಿಮಾನ ದಿನವೆಂದು ಆಚರಿಸಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತರಿಗೆ ಪ್ರಶಸ್ತಿ ಪ್ರಧಾನ ಮಾಡಿ ಸನ್ಮಾನಿಸಲಾಯಿತು.

**ಡಾ. ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತರು:**

ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ 2023ನೇ ಸಾಲಿಗೆ ಸಮಾಜ ಸೇವೆ ಕ್ಷೇತ್ರದಲ್ಲಿ ಮೈಸೂರಿನ ಹರಿಹರಾ ನಂದ ಸ್ವಾಮಿ. ಪತ್ರಿಕೋದ್ಯಮ ಕ್ಷೇತ್ರದಲ್ಲಿ ಬೆಂಗಳೂರಿನ ಇಂದೂಧರ ಹೊನ್ನಾಪುರ, ಆಡಳಿತ ಕ್ಷೇತ್ರದಲ್ಲಿ ದಾವಣಗೆರೆಯ ರುದ್ರಪ್ಪ ಹನಗವಾಡಿ, ದೇವದಾಸಿ ವಿಮೋಚನೆ ಕ್ಷೇತ್ರದಲ್ಲಿ ಬೆಳಗಾವಿಯ ಸೀತವ್ವ ಜೋಡಟ್ಟಿ ಹಾಗೂ ಸಮಾಜ ಸೇವೆ, ರಾಜಕೀಯ ಕ್ಷೇತ್ರದಿಂದ ಬೀದ???ನ ಕೆ.ಪುಂಡಲೀಕರಾವ್ ಶೆಟ್ಟಿಬಾ ಅವರಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು. 2024ನೇ ಸಾಲಿಗೆ ಹೋರಾಟ ಕ್ಷೇತ್ರದಿಂದ ಬೆಂಗಳೂರಿನ ಶ್ರೀಧರ ಕಲಿವೀರ, ಸಮಾಜ ಸೇವೆ, ರಾಜಕೀಯ ಕ್ಷೇತ್ರದಿಂದ ಮಂಡ್ಯದ ಮಲ್ಲಾಜಮ್ಮ, ಪತ್ರಿಕೋದ್ಯಮ ಕ್ಷೇತ್ರದಿಂದ ಬೆಂಗಳೂರಿನ ರಾಮದೇವರ ರಾಕೆ, ಸಾಹಿತ್ಯ/ಸಮಾಜ ಕ್ಷೇತ್ರದಿಂದ ಬೆಳಗಾವಿಯ ವೈ.ಬಿ.ಹಿಮ್ಮಡಿ ಹಾಗೂ ಸಾಹತ್ಯ/ಸಂಘಟನೆ ಕ್ಷೇತ್ರದಿಂದ ಕೋಲಾರದ ಲಕ್ಷ್ಮೀಪತಿ ಕೋಲಾರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

2025ನೇ ಸಾಲಿಗೆ ಪ್ರಕಾಶನ ಕ್ಷೇತ್ರದಿಂದ ಕಲಬುರುಗಿಯ ದತ್ತಾತ್ರೇಯ ಇಕ್ಕಳಗಿ, ಹೋರಾಟ ಕ್ಷೇತ್ರದಿಂದ ಬೆಂಗಳೂರಿನ ಮಾವಳ್ಳಿ ಶಂಕರ್ ಹಾಗೂ ಧಾರವಾಡದ ಎಫ್. ಹೆಚ್.ಜಕ್ಕಪ್ಪನವರ್, ಜನಪದ ಕಲೆ ಕ್ಷೇತ್ರದಿಂದ ಚಾಮರಾಜನಗರದ ಹೊನ್ನೂರು ಗೌರಮ್ಮ ಹಾಗೂ ದಲಿತ ಹೋರಾಟ ಕ್ಷೇತ್ರದಿಂದ ಈರಪ್ಪ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಕಲಬುರಗಿ ಲೋಕಸಭಾ ಸದಸ್ಯ ರಾಧಕೃಷ್ಣ ದೊಡ್ಡಮನಿ, ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹಮ್ಮದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹ್ಮದ್, ಡಾ. ಕೆ. ಗೋವಿಂದರಾಜು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಪಿ.ಎಂ. ನರೇಂದ್ರಸ್ವಾಮಿ, ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್ ಬಂಡಾರಿ, ಮಾಜಿ ಸಚಿವರಾದ ಹೆಚ್. ಆಂಜನೇಯ, ಚಿತ್ರದುರ್ಗ ಲೋಕಸಭಾ ಮಾಜಿ ಸಂಸದ ಚಂದ್ರಪ್ಪ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆರ್. ಸಂಪತ್ ರಾಜ್, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ.ಎಸ್. ಮಂಜುನಾಥ್, ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರವಿಕುಮಾರ್. ಎಸ್., ಕರ್ನಾಟಕ ಅಲೆಮಾರಿ / ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಪಲ್ಲವಿ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಮೇಜರ್ ಪಿ. ಮಣಿವಣ್ಣನ್, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಾದ ಡಾ. ರಾಕೇಶ್ ಕುಮಾರ್ ಕೆ ಸೇರಿದಂತೆ ಶಾಸಕರು, ಗಣ್ಯರು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಿಜೆಪಿ-ಆರ್‌ಎಸ್‌ಎಸ್ ಅಂಬೇಡ್ಕರ್ ಶತ್ರುಗಳು:ಖರ್ಗೆ

ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿಗಳಿಗೆ ಮೀಸಲಾತಿ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಸಂವಿಧಾನವು ನಾಗರಿಕರಿಗೆ ಅಂಬೇಡ್ಕರ್ ನೀಡಿದ ಉಡುಗೊರೆಯಾಗಿದೆ. ಏಕೆಂದರೆ ಅದು ಅವರಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯದ ಹಕ್ಕನ್ನು ನೀಡುತ್ತದೆ ಎಂದು ಅವರು ಹೇಳಿದರು.

"ಸಾಂವಿಧಾನಿಕ ಮೌಲ್ಯಗಳು ಮತ್ತು ಪ್ರಜಾಪ್ರಭುತ್ವದ ರಕ್ಷಣೆಗೆ ಕಾಂಗ್ರೆಸ್ ಬದ್ಧವಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ರಾಷ್ಟ್ರವ್ಯಾಪಿ ಜಾತಿ ಜನಗಣತಿ ಅಗತ್ಯವನ್ನು ಪ್ರತಿಪಾದಿಸಿದ ಖರ್ಗೆ, "ಕೇಂದ್ರ ಸರ್ಕಾರ 2011 ರ ಜನಗಣತಿಯ ಆಧಾರದ ಮೇಲೆ ನೀತಿಗಳನ್ನು ರೂಪಿಸುತ್ತಿದೆ ಮತ್ತು 2021 ರ ಜನಗಣತಿಯ ಬಗ್ಗೆ ಏನೂ ಮಾಹಿತಿ ಇಲ್ಲ. ಜನಗಣತಿಯ ಆಧಾರದ ಮೇಲೆ ನೀತಿಗಳನ್ನು ರೂಪಿಸಲಾಗುತ್ತದೆ. ಸಾಮಾನ್ಯ ಜನಗಣತಿಯ ಜೊತೆಗೆ, ಯಾವ ವಿಭಾಗವು ಎಷ್ಟು ಪ್ರಗತಿ ಸಾಧಿಸಿದೆ ಎಂದು ತಿಳಿಯಲು ಜಾತಿ ಜನಗಣತಿಯನ್ನು ಸಹ ನಡೆಸಬೇಕೆಂದು ನಾವು ಒತ್ತಾಯಿಸುತ್ತೇವೆ" ಎಂದು ಅವರು ಹೇಳಿದರು.

ಜನವರಿ 20, 2006 ರಂದು ಕಾಂಗ್ರೆಸ್ ಪರಿಚಯಿಸಿದ ಆರ್ಟಿಕಲ್ 15(5) ಅಡಿಯಲ್ಲಿ ನೀಡಲಾದ ಮೂಲಭೂತ ಖಾತರಿಯಾದ ಒಬಿಸಿ, ಎಸ್‌ಸಿ ಮತ್ತು ಎಸ್‌ಟಿಗಳಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ತಕ್ಷಣ ಮೀಸಲಾತಿ ಜಾರಿಗೆ ತರಬೇಕು ಎಂದು ಅವರು ಹೇಳಿದರು.

ಇನ್ನು ಮೀಸಲಾತಿ ಮೇಲಿನ ಶೇಕಡಾ 50 ರಷ್ಟು ಮಿತಿಯನ್ನು ತೆಗೆದುಹಾಕುವ ಅಗತ್ಯವನ್ನು ಖರ್ಗೆ ಒತ್ತಿ ಹೇಳಿದರು.

## ದೇಶದಲ್ಲಿ ಕಾಂಗ್ರೆಸ್‌ನಿಂದ ವೋಟ್ ಬ್ಯಾಂಕ್ ವೈರಸ್ :ಪ್ರಧಾನಿ ಮೋದಿ

ಭಾಷಣದಲ್ಲಿ ಪ್ರಧಾನಿ ಮೋದಿ ಹೇಳಿದರು.

"ಕಾಂಗ್ರೆಸ್ ಕಾಲದಲ್ಲಿ, ಎಸ್‌ಸಿ, ಎಸ್‌ಟಿ, ಒಬಿಸಿಗಳಿಗೆ ಬ್ಯಾಂಕಿನ ಬಾಗಿಲುಗಳು ತೆರೆದಿರಲಿಲ್ಲ; ಸಾಲ, ಕಲ್ಯಾಣ ಕಾರ್ಯಕ್ರಮಗಳು ಎಲ್ಲವೂ ಕೇವಲ ಕನಸಾಗಿತ್ತು, ಆದರೆ ಈಗ ಜನ ಧನ್ ಖಾತೆಗಳ ದೊಡ್ಡ ಫಲಾನುಭವಿಗಳು ಎಸ್‌ಸಿ, ಎಸ್‌ಟಿ ಸಹೋದರ ಸಹೋದರಿಯರು" ಎಂದು ಮೋದಿ ಹೇಳಿದ್ದಾರೆ.

ವಕ್ಫ್ ಮಂಡಳಿಯ ಅಡಿಯಲ್ಲಿ "ಲಕ್ಷ ಹೆಕ್ಟೇರ್ ಭೂಮಿ" ಇದೆ, ಆದರೆ ಈ ಆಸ್ತಿಗಳನ್ನು ಬಡವರು ಮತ್ತು ನಿರ್ಗತಿಕರಿಗೆ ಸಹಾಯ ಮಾಡಲು ಸರಿಯಾಗಿ ಬಳಸಲಾಗಿಲ್ಲ ಎಂದು ಅವರು ಹೇಳಿದರು.

"ವಕ್ಫ್ ಹೆಸರಿನಲ್ಲಿ ಲಕ್ಷಾಂತರ ಹೆಕ್ಟೇರ್ ಭೂಮಿ ಇದೆ. ವಕ್ಫ್ ಆಸ್ತಿಗಳ ಪ್ರಯೋಜನಗಳನ್ನು ಅಗತ್ಯವಿರುವವರಿಗೆ ನೀಡಿದ್ದರೆ, ಅದು ಅವರಿಗೆ ಪ್ರಯೋಜನವಾಗುತ್ತಿತ್ತು. ಆದರೆ ಭೂ ಮಾಫಿಯಾ ಈ ಆಸ್ತಿಗಳಿಂದ ಲಾಭ ಪಡೆದಿದೆ" ಎಂದು ಪ್ರಧಾನಿ ಹೇಳಿದ್ದಾರೆ.

ಮುಸ್ಲಿಂ ಮೀಸಲಾತಿಗೆ ಮೋದಿ ಕೆಂಡ!

ಕರ್ನಾಟಕದ ಕಾಂಗ್ರೆಸ್ ಸರ್ಕಾರ ಧರ್ಮದ ಆಧಾರದ ಮೇಲೆ ಟೆಂಡರ್‌ಗಳಲ್ಲಿ ಮೀಸಲಾತಿ ನೀಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಈ ಕ್ರಮವು "ಪರಿಶಿಷ್ಟ ಜಾತಿಗಳು , ಪರಿಶಿಷ್ಟ ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ" ಎಂದು ಆರೋಪಿಸಿದ್ದಾರೆ.

ಇಂತಹ ನಿಬಂಧನೆಗಳು ಸಂವಿಧಾನಬಾಹಿರ ಮಾತ್ರವಲ್ಲದೆ ಭಾರತೀಯ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳಿಗೆ ದ್ರೋಹವಾಗಿದೆ ಎಂದು ಮೋದಿ ಕಿಡಿಕಾರಿದ್ದಾರೆ.

"ಅಂಬೇಡ್ಕರ್ ಧರ್ಮದ ಆಧಾರದ ಮೇಲೆ ಮೀಸಲಾತಿ ಇರುವುದಿಲ್ಲ ಎಂದು ಹೇಳಿದ್ದರು, ಮತ್ತು ಸಂವಿಧಾನದಲ್ಲಿ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುವುದಕ್ಕೆ ನಿರ್ಬಂಧವಿದೆ" ಎಂದು ಪ್ರಧಾನಿ ಮೋದಿ ಹೇಳಿದರು.

ಮೋದಿ ಅವರ ಆರೋಪಗಳಿಗೆ ಪ್ರತಿಕ್ರಿಯಿಸಿದ ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸರ್ಕಾರದ ಮೀಸಲಾತಿ ನೀತಿಯನ್ನು ಸಮರ್ಥಿಸಿಕೊಂಡರು. "ನಾವು ಎಸ್‌ಸಿ/ಎಸ್‌ಟಿಗಳಿಗೂ ಮೀಸಲಾತಿ ನೀಡುತ್ತಿದ್ದೇವೆ. ಆರ್ಥಿಕವಾಗಿ ಸ್ಥಿರವಾಗಿಲ್ಲದವರನ್ನು ಉನ್ನತೀಕರಿಸುವುದು ನಮ್ಮ ಗುರಿಯಾಗಿದೆ; ಅವರು ಮುಖ್ಯವಾಹಿನಿಗೆ ಬರಬೇಕು ಎನ್ನುವುದು ನಮ್ಮ ಉದ್ದೇಶ. ಕಾಂಗ್ರೆಸ್ ಪಕ್ಷ ಮತ್ತು ಕಾಂಗ್ರೆಸ್ ಸರ್ಕಾರವು ಸಮಾಜದ ಪ್ರತಿಯೊಂದು ವರ್ಗವನ್ನು ಸಮಾನವಾಗಿ ನೋಡುತ್ತದೆ" ಎಂದು ಅವರು ಹೇಳಿದ್ದಾರೆ.

## ವಿಭಿನ್ನತೆ ಹೊಂದಿದ ಭಾರತಕ್ಕೆ ಅಪಸ್ವರವಿಲ್ಲದ ಶ್ರೇಷ್ಠ ಸಂವಿಧಾನ ನೀಡಿದ ಡಾ. ಅಂಬೇಡ್ಕರ್: ಸಚಿವ ದರ್ಶನಾಪುರ

ಸ್ವಲ್ಪವಾದರೂ ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅನುಕರಣೆ ಮಾಡುವ ಮೂಲಕ ಸಂಘಟಿತರಾಗಿ, ಸಮಾನ ದೃಷ್ಟಿಕೋನವನ್ನು ಬೆಳೆಸಿಕೊಂಡು ಸಮಾಜ,ದೇಶದ ಒಳಿತಿಗೆ ಶ್ರಮಿಸುವಂತೆ ಅವರು ಸಲಹೆ ನೀಡಿದರು. ದೇಶದಲ್ಲಿ ಸಮಾನತೆ ಇದ್ದಾಗ ಮಾತ್ರ ದೇಶವನ್ನು ಸಮಗ್ರ ಅಭಿವೃದ್ಧಿಯತ್ತ ಕೊಂಡೊಯ್ಯಲು ಸಾಧ್ಯ. ಹಲವು ಅವಮಾನ, ಅಪಮಾನ, ಕಷ್ಟಗಳನ್ನು ಸಹಿಸಿ ದೇಶದ ಐಕ್ಯತೆಗೆ ಶ್ರಮಿಸಿದ ಡಾ. ಬಾಬಾ ಸಾಹೇಬರ ಕನಸು ನನಸಾಗಿಸಲು ಎಲ್ಲರೂ ಒಗ್ಗಟ್ಟರಾಗಿ, ಸಮಾನರಾಗಿ ಬಾಳುವಂತೆ ಅವರು ಸಲಹೆ ನೀಡಿದರು.ಸಮಾಜದಲ್ಲಿ ನಡೆಯುವಂತಹ ಕೆಟ್ಟ ಚಟುವಟಿಕೆಗಳನ್ನು ನಿಯಂತ್ರಿಸಲು ಶಿಕ್ಷಣದಿಂದ ಮಾತ್ರ ಸಾಧ್ಯ. ಗುಡಿ ಗುಂಡಾರ ಗಳಿಗೆ ತಮ್ಮ ಹಣ ವ್ಯಯ ಮಾಡುವ ಬದಲು ಮಕ್ಕಳ ಶಿಕ್ಷಣಕ್ಕೆ ವ್ಯಯಿಸಿ ಅವರನ್ನೇ ಆಸ್ತಿರನ್ನಾಗಿಸಬೇಕು.ಶೈಕ್ಷಣಿಕ ಕ್ರಾಂತಿ ಮೂಲಕ ಸಮಾನತೆ ತರುವ ಜೊತೆಗೆ ತಮ್ಮ ಮಕ್ಕಳನ್ನು ಸುಶಿಕ್ಷಿತ ರನ್ನಾಗಿಸುವ ಮೂಲಕ ಮುಂದಿನ ಪೀಳಿಗೆಯ ಭವಿಷ್ಯ ರೂಪಿಸುವ ಕೆಲಸಮಾಡಗಬೇಕು. ಇದಾದಾಗ ಮಾತ್ರ ದೇಶದ ಸಮಗ್ರತೆ ಹಾಗೂ ಅಭಿವೃದ್ಧಿಗೆ ನೆರವಾಗಲಿದೆ ಎಂದು ಅವರು ಹೇಳಿದರು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ 371 (ಜೆ ) ರನ್ವಯ ಮಾಜಿ ಕೇಂದ್ರ ಸಚಿವ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರ ಪ್ರಯತ್ನದ ಫಲವಾಗಿ ಕಲ್ಯಾಣ ಕರ್ನಾಟಕ ಭಾಗದ ಮಕ್ಕಳಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಅವಕಾಶ ದೊರೆತಿದ್ದು, ತಮ್ಮ ಯಾವುದೇ ರೀತಿಯ ಕಷ್ಟ ಕಾರ್ಪಣ್ಯಗಳಿದ್ದರೂ ಅವುಗಳನ್ನು ಮೀರಿ ಶಿಕ್ಷಣವಂತರಾಗಬೇಕು, ಉದ್ಯೋಗದ ಲಾಭ ಪಡೆಯಬೇಕು. ಸಮಾಜದಲ್ಲಿ ಸಮಾನತೆ ತರಬೇಕು. ದೇಶದ ಅಭಿವೃದ್ಧಿಯಲ್ಲಿ ಕೈಜೋಡಿಸಬೇಕೆಂದು ಅವರು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಕಲಬುರ್ಗಿ ಸರ್ಕಾರಿ ಪದವಿ ಮಹಾವಿದ್ಯಾಲಯದ ಕನ್ನಡ ಸಹಪ್ರಾಧ್ಯಾಪಕರಾದ ಡಾ. ಜಯದೇವಿ ಗಾಯಕವಾಡ ಅವರು ಶತ-ಶತಮಾನಗಳ ನೋವು ಅನುಭವಿಸಿ ಶೋಷಿತ ವರ್ಗಗಳಿಗೆ ಸಂವಿಧಾನದ ಮೂಲಕ ನ್ಯಾಯ ಒದಗಿಸುವ ಕಾರ್ಯವನ್ನು ಡಾ. ಬಾಬಾ ಸಾಹೇಬ್ ಅಂಬೇಡ್ಕರ ಅವರು ಮಾಡಿದ್ದಾರೆ. ಶ್ರಮಿಕರು, ಕಾರ್ಮಿಕರು ,ಮಹಿಳೆಯರು,ರೈತರು ಹಾಗೂ ಬಡ ಜನರಿಗೆ ನ್ಯಾಯ ಒದಗಿಸಿದ್ದಾರೆ.ಶೋಷಿ ತರ ಹಕ್ಕುಗಳಿಗಾಗಿ, ಮಹಿಳೆಯರ ಹಕ್ಕುಗಳಿಗಾಗಿ ಹೋರಾಡಿದ ಅವರು ಸಮಾನತೆ ಮತ್ತು ಸ್ವಾತಂತ್ರ್ಯವನ್ನು ದೇಶಕ್ಕೆ ತಿಳಿ ಹೇಳಿದ್ದಾರೆಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಡಾ. ಸುಶೀಲಾ ಬಿ ಅವರು, ಸಂವಿಧಾನ ಶಿಲ್ಪಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಪ್ರಸ್ತಾವನೆಯಲ್ಲಿಯೇ ವಿಶ್ವದ ಇತರೆ ರಾಷ್ಟ್ರಗಳಿಗಿಂತಲೂ ಮೀಗಿಲಾದ ಧ್ಯೇಯವನ್ನು ವಿವರಿಸಿದ್ದಾರೆ. ವಿಶ್ವದಲ್ಲಿಯೇ ಶ್ರೇಷ್ಠ ಸಂವಿಧಾನ ರಚಿಸಿದ್ದಾರೆ. ವಿವಿಧ ಹಕ್ಕುಗಳು, ಜವಾಬ್ದಾರಿ, ನಾಗರಿಕರಿಗೆ ಮನವರಿಕೆ ಮಾಡಿದ್ದಾರೆ.ಈ ದೇಶದ ಸ್ವಾತಂತ್ರ್ಯ ಸಮಾನತೆ, ಭ್ರಾತೃತ್ವ ಭಾವನೆಯ ಸೃಷ್ಟಿಕರ್ತರು ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರಾಗಿದ್ದಾರೆ. ಅಂತಹ ಮೇಧಾವಿಯ ತತ್ವ ಆದರ್ಶಗಳನ್ನು ಪಾಲಿಸಿ ಈ ಜಿಲ್ಲೆಯಲ್ಲಿಯೂ ಮಕ್ಕಳನ್ನು ಶೈಕ್ಷಣಿಕವಾಗಿ ಮುಂಚೂಣಿಗೆ ತರಬೇಕು. ಈ ಮೂಲಕ ಶಿಸ್ತು ಮತ್ತು ಸುಸ್ಥಿರ, ದೌರ್ಜನ್ಯ ಮುಕ್ತ ಸಮಾಜ ರೂಪಿಸಲು ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಸಂವಿಧಾನದ ಪೀಠಿಕೆ ಓದಲಾಯಿತು. ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಯರಿಗೆ, ಸಮಾಜದ ವಿವಿಧ ಕ್ಷೇತ್ರದಲ್ಲಿ ಶ್ರಮಿಸಿದ ಗಣ್ಯರಿಗೆ ಸನ್ಮಾನಿಸಲಾಯಿತು. ಭಾಷಣ ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷರಾದ ಲಲಿತಾ ಅನಪೂರ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ವಿನಾಯಕ್ ಮಾಲಿ ಪಾಟೀಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್, ಜಯಂತೋತ್ಸವ ಸಮಿತಿ ಅಧ್ಯಕ್ಷ ನರೇಂದ್ರ ಅನ್ವರ್, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ ಮುಧೋಳ, ಜಿಲ್ಲಾ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ಮರೆಯಪ್ಪ ಚಟ್ಟರ್ಕರ್, ಮಲ್ಲಪ್ಪ ಗೋಗಿ, ಉಪಸ್ಥಿತರಿದ್ದರು.

# ಸಮಾಜ ನಿರ್ಮಾಣಕ್ಕೆ ಅಂಬೇಡ್ಕರ್ ಅವರ ಕೊಡುಗೆ ಅಪಾರ: ರಮೇಶ ಮಂಠಾಳ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ದೇಶದಲ್ಲಿ ಸಮಾನತೆಯ ಸಮಾಜ ನಿರ್ಮಾಣಕ್ಕಾಗಿ ಅತ್ಯುತ್ತಮ ಸಂವಿಧಾನ ರಚಿಸಿಕೊಟ್ಟ ಮಹಾನ್ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಅಪಾರವಾಗಿದೆ ಎಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಮೇಶ್ ಮಂಠಾಳ ಹೇಳಿದರು. ತಾಲೂಕಿನ ಸೀತಾಳಗೇರಾ ಗ್ರಾಮ ಪಂಚಾಯತನಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಡಾ. ಬಿ.ಆರ್. ಅಂಬೇಡ್ಕರ್ ರವರ 134ನೇ ಜಯಂತಿ ಆಚರಿಸುತ್ತಾ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಗೋದಾವರಿ ಮಲ್ಲಪ್ಪ, ಉಪಾಧ್ಯಕ್ಷ ವಿಶ್ವನಾಥ ಸೇರಿದಂತೆ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಡಾ.ಬಿ.ಆರ್. ಅಂಬೇಡ್ಕರ್ ರವರ 134ನೇ ಜಯಂತಿ ನಿಮಿತ್ತ

# ಅದ್ದೂರಿಯಾಗಿ ಜರುಗಿದ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರದ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ :- ಇಲ್ಲಿನ ಬಸ ನಿಲ್ದಾಣದ ಪ್ರಭಾರಿ ಘಟಕದ ವ್ಯವಸ್ಥಾಪಕರಾದ ಹಣಮಪ ಛಲವಾದಿಯವರ ನೇತೃತ್ವದಲ್ಲಿ ನಡೆದ ಡಾ. ಬಿ.ಆರ್ ಅಂಬೇಡ್ಕರ್ ರವರ 134ನೇಯ ಜಯಂತಿ ಉತ್ಸವದ ನಿಮಿತ್ಯ ಬಸ್‌ಗೆ ಹಾಗೂ ಡಾ. ಬಾಬಾ ಸಾಹೇಬರ ಭಾವಚಿತ್ರಕ್ಕೆ ವಿವಿಧ ರೀತಿಯ ಅಲಂಕರಿಸಿ ವಿಜೃಂಭಣೆಯಿಂದ ಹಾಗೂ ಕೋಲಾಟದೊಂದಿಗೆ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದವರೆಗೆ ಅತಿ ವಿಜೃಂಭಣೆಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಮೆರವಣಿಗೆ ನಡೆಯಿತು. ಈ ಸಂದರ್ಭದಲ್ಲಿ ಸಂಚಾಲಕರು ರಾಚಪ್ಪಾ ಪರಶೆಟ್ಟಿ, ಸಂಜು-ರೆಡ್ಡಿ, ಸತೀಶ, ರಮೇಶ ಕಲ್ಲೂರ, ಮಹೇಶ, ಕೈಲಾಸ, ಗಪರ್, ಕೈಲಾಸ ಮೇತ್ರೆ, ರಾಜಕುಮಾರ ವರ್ಮಾ, ರಾಜಕುಮಾರ ಬೋರರೆ, ಅನೀಲಕುಮಾರ ಕಠಳ್ಳಿ, ಗುಂಡಪ್ಪಾ ಮೇತ್ರೆ, ಕಲ್ಲಪ್ಪಾ ಕಠಳ್ಳಿ, ವಿಜಯಕುಮಾರ, ಜಲೀಂದ್ರ, ಸಂತೋಷ, ಸಂಗಪ್ಪಾ ಸಿಂಗ್, ಅಂಗದ್ ಬೀದರ, ಕಾರ್ತಿಕ ಸ್ವಾಮಿ, ಸಂಜು-ರೆಡ್ಡಿ ಕನಕಟ್ಟಾ, ಶಿವು ಪಲ್ಲಾರಿ, ಪೂಜಾ ಹಿರೋಳೆ, ಪ್ರಭಾವತಿ, ಶೀಲಾರೆಡ್ಡಿ, ಸವೀತಾ, ಕವೀತಾ, ಕಮಳಾಬಾಯಿ, ಉಪಸ್ಥಿತರಿದ್ದರು. ಕೋಲಾಟ ಹಾಕಿದ ಮಕ್ಕಳಿಗೆ ಬಸ್ ಸಾರಿಗೆವತಿಯಿಂದ ಮಜಿಗೆ ವಿತರಿಸಿದರು.

# ಅಂಬೇಡ್ಕರ್ ಜ್ಞಾನಲೋಕದ ತಾರೆ - ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 14 ವಿಶ್ವ ಜ್ಞಾನಿ ಭಾರತ ರತ್ನ ಡಾ. ಅಂಬೇಡ್ಕರ್ ರವರು ಜ್ಞಾನಲೋಕದ ದ್ರವವತಾರೆಯಾಗಿದ್ದಾರೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದ ದಾಸೋಹ ಮನೆಯಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ರವರ 134ನೇ ಜಯಂತೋತ್ಸವ ನಿಮಿತ್ಯ ಬಾಬಾ ಸಾಹೇಬರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಶ್ರೀಗಳು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರು ನಮ್ಮ ರಾಷ್ಟ್ರದ ಬಹುದೊಡ್ಡ ಆಸ್ತಿಯಾಗಿದ್ದು, ಅವರು ನೀಡಿದ ಕೊಡುಗೆ ಅನನ್ಯ.

ಪ್ರಬುದ್ಧ ಭಾರತದ ನಿರ್ಮಾಣಕ್ಕಾಗಿ ಅವರು ನೀಡಿದ ಸಮರ್ಥ ಸಂವಿಧಾನ ಇಡಿ ವಿಶ್ವ ಸಮುದಾಯಕ್ಕೆ ಮಾದರಿಯಾಗಿದೆ. ಅವರ ಇಡಿ ಬದುಕೆ ಒಂದು ದೊಡ್ಡ ಸಂದೇಶವಾಗಿದ್ದು, ಪ್ರತಿಭಾರತೀಯನು ಅವರು ನೀಡಿದ ಸ್ವಾತಂತ್ರ್ಯ, ಸಮಾನತೆ, ಭಾತೃತ್ವದಂತಹ ಶ್ರೇಷ್ಠ ಚಿಂತನೆ ಪಾಲಿಸಬೇಕು.

ಮನುಷ್ಯನ ಅಭಿವೃದ್ಧಿಯೇ ಮಾನವ ಜನಾಂಗದ ಅಂತಿಮ ಧ್ಯೇಯ ವೆನ್ನುವ ಅವರ ಶ್ರೇಷ್ಠ ವಿಚಾರಧಾರೆ ಅನುಸರಿಸಿದರೆ ಲೋಕ ಕಲ್ಯಾಣ ಖಂಡಿತ ಸಾಧ್ಯ ಎನ್ನುವಲ್ಲಿ ಎರಡು ಮಾತಿಲ್ಲ ಎಂದು ನುಡಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ. ಶರಣಪ್ಪ ಬಿರಾದಾರ. ಹೇಮಲತಾ ಎಂ. ಹಿರೇಮಠ. ಅಲ್ಲಮಪ್ರಭು ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಪಂಡಿತ ಪೂಜಾರಿ ಸ್ವಾಗತಿಸಿದರು.

ಶಿವಾನಂದ ಪೂಜಾರಿ ವಂದಿಸಿದರು.




ಬಸವಕಲ್ಯಾಣ:-ಇಲ್ಲಿನ ತ್ರಿಪೂರಾಂತಿನ ಗವಿಮಠದಲ್ಲಿ ಹಮ್ಮಿಕೊಂಡ 13ನೇ ರಾಜ್ಯಮಟ್ಟದ ಚುಟುಕು ಸಾಹಿತ್ಯ ಸಮ್ಮೇಳನದಲ್ಲಿ ಡಾ. ಶಿವಲೀಲಾ ವ್ಹಿ ಮಠಪತಿ. ಹಾಗೂ ಕುಮಾರಿ ಶ್ರೇಯಾ ಶಾಂತಲಿಂಗ ಮಠಪತಿ. ಚುಟುಕು ವಾಚನ ಮಾಡಿದರು ಇವರಿಗೆ ಸಮ್ಮೇಳನದ ಅಧ್ಯಕ್ಷರಾದ ಪೂಜ್ಯ ಷ.ಬ್ರ.ಡಾ. ರೇವಣಸಿದ್ಧ ಶಿವಾಚಾರ್ಯರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ:- ತಾಲೂಕಿನ ಖೇಡಾ9(ಬಿ) ಗ್ರಾಮದ ಸದ್ಗುರು ಶಿವಲಿಂಗೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯವಾಗಿ ಅದ್ದೂರಿಯಾಗಿ ರಥೋತ್ಸವನ್ನು ಮಠದ ಪೂಜ್ಯರಾದ ಶ್ರೀ ಮ.ನಿ.ಪ್ರ.ಶಿವಲಿಂಗ ಮಹಾಸ್ವಾಮಿಗಳು ಇನ್ನಿತರ ಪೂಜ್ಯರು.ಅನೇಕ ಭಕ್ತಾದಿಗಳ ನಡುವೆ ಜರುಗಿತು. (ಮಲ್ಲಮ್ಮ ನುಡಿ ಚಿತ್ರ )

# ಬೀದರ್ ದಕ್ಷಿಣ ಕ್ಷೇತ್ರದ ಕೈಲಾಸ ಬಾವಗಿ :- ಬಂಡೆಪ್ಪ ಖಾಶಂಪೂರ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 14 :- ಬೀದರ್ ತಾಲೂಕಿನ ಬಾವಗಿ ಗ್ರಾಮದ ಆರಾಧ್ಯ ದೈವ ಪವಾಡ ಪುರುಷ ಶ್ರೀ ಗುರು ಭದ್ರೇಶ್ವರ ರ ಹತ್ತೊಂಬತ್ತನೇ ವರ್ಷದ ಜಾತ್ರಾ ಮಹೋತ್ಸವವನ್ನು ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯರು ದೀಪ ಬೆಳಗಿಸಿ ಮೂಲಕ ಪೂಜ್ಯರು ಮಾತನಾಡಿ ನೇರವೇರಿಸಿದರು. ನಂತರ ಭಕ್ತರ ಭದ್ರೇಶ ಎನ್ನುವ ಗುರು ಭದ್ರೇಶ್ವರ ರ ಭಕ್ತಿ ಗೀತೆಗಳ ಧ್ವನಿ ಸುರುಳಿ ಬಿಡುಗಡೆ ಗೊಳಿಸಿ ಮಾತನಾಡಿದ ಬೀದರ್ ದಕ್ಷಿಣ ಕ್ಷೇತ್ರದ ಮಾಜಿ ಸಚಿವರಾದ ಸನ್ಮಾನ ಶೀ ಬಂಡೆಪ್ಪ ಖಾಶಂಪೂರ ರವರು ನಮ್ಮ ದಕ್ಷಿಣ ಕ್ಷೇತ್ರದಲ್ಲಿ ಅನೇಕ ಮಠ ಮಂದಿರ ಗಳಿವೆ ಅದರಲ್ಲಿ ಬಾವಗಿಯ ಗುರು ಭದ್ರೇಶ್ವರ ಮಂದಿರ ನಮ್ಮ ನಾಡಲದೆ ಹೊರ ನಾಡಿನಲ್ಲಿಯೂ ಕೂಡ ಹೆಸರಾಗಿದೆ ಗುರು ಭದ್ರೇಶ್ವರರು ತನ್ನ ಭಕ್ತರು ಸಂಕಟದಲ್ಲಿದ್ದದ್ದು ತಿಳಿದು ಅವರನ್ನು ತನ್ನ ಲೀಲೆಯಿಂದ ಬಾಳು ಬೆಳಗಿದ ಸಾಕ್ಷಾತ್ ಶಿವನವತಾರಿ ಹಾಗೆಯೇ ಬಾವಗಿ ಗ್ರಾಮವು ಗುರು ಭದ್ರೇಶ್ವರ ರು ನೆಲೆಸಿ ಕೈಲಾಸವಾಗಿಸಿದ್ದಾರೆ ಎಂದು ನುಡಿದರು.

ಶ್ರೀ ಶಿವಶಂಕರ ಶಿವಾಚಾರ್ಯರು ಹಿರೆಮಠ ಸೇಡಂ ಶ್ರೀ ಡಾ ಅಭಿನವರುದ್ರಮುನಿ ಶಿವಾಚಾರ್ಯ ಬಸವಕಲ್ಯಾಣ ಶ್ರೀ ರುದ್ರಮುನಿ ಶಿವಾಚಾರ್ಯ ಚಾಂಬೋಳ ವೇದಮೂರ್ತಿ ಭದ್ರಯ್ಯ ಸ್ವಾಮಿ ಶ್ರೀ ಭದ್ರೇಶ್ವರ ಸಂಸ್ಥಾನದ ವೇದಮೂರ್ತಿ ಬಾಲಸಂಗಯ್ಯ ಸ್ವಾಮಿ ಶಿವಕುಮಾರ ಸ್ವಾಮೀ


ಈ ಸಂದರ್ಭದಲ್ಲಿ ಶಾಂತಕುಮಾರ್ ಸ್ವಾಮಿ ಚನಮಲಪ್ಪ ಹಜರಗಿ ರಾಚಪ್ಪ ಭಾಲ್ಕೇ ನಾಗಶೆಟ್ಟಿ ಅಳ್ಳೀ ಮಡೆಪ್ಪ ಹಜರಗಿ ಕಾಶೆಪ್ಪ ಪಕ್ಕಾ ಸಂಗಮೆಶ ಹಜರಗಿ ಬಸವರಾಜ ಖೌದಿ ಸುನಿಲ ಚಿದ್ರಿ ಲೋಕೇಶ ಕನಶೆಟ್ಟಿ ಸಂತೋಷ ಜಗದಾಳೆ ಶರಣಪ್ಪಾ ಮುದ್ದ ರಾಜಕುಮಾರ ಭದ್ರಣ ರಾಜಕುಮಾರ ಪಾಟೀಲ್ ಜಗನ್ನಾಥ ಚಿದ್ರಿ

ಶಿವಕುಮಾರ ರೇಶಟ್ಟಿ ನಾಗೇಶ್ ಕೋಳಾರ ರಾಜಕುಮಾರ ಮಡಿವಾಳ ಬಸವರಾಜ ಹೋನಿಕೆರೀ ಸಿದ್ದ-ರೊಡ ಭಾಲ್ಕಿ

ಆನಂದ ಸ್ವಾಮಿ ರೆವಣಪ್ಪ ಮೆತ್ರಿ ಬೀರಪ್ಪ ಮಗಡಂಪಳಿ ಎಸ್ ಆರ್. ಸಾಲಿಮಠ ನಿರೊಪಿಸಿ ಸ್ವಾಗತಿಸಿದರು. ಬಾವಗಿ ಸಕಲ ಸದ್ಭಕ್ತರು ಇದ್ದುರು.

ಜಾಹೀರಾತಿಗಾಗಿ
ಇಂದೆ
ಸಂಪರ್ಕಿಸಿ:9449732000

# ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ 134ನೇ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ 134ನೇ ಜಯಂತಿ ಪಟ್ಟಣದ ಪುರಸಭೆ ಕಛೇರಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುರಸಭೆಯ ಅಧ್ಯಕ್ಷೆ ರೋಜಮ್ಮ ತಿಪ್ಪಣ್ಣ, ಉಪಾಧ್ಯಕ್ಷ ಮುಜಾಫರ ಪಟೇಲ್ ಹಾಗೂ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ ರವರು ಹೂ ಮಾಲರ್ಪಣೆ ಮಾಡುವುದರ ಮೂಲಕ ಪೂಜೆಯನ್ನು ನೆರವೇರಿಸಿದರು. ಜಯಂತಿ ಕಾರ್ಯಕ್ರಮದಲ್ಲಿ ಪುರಸಭೆಯ ಸದಸ್ಯರಾದ ದಿಲೀಪಕುಮಾರ ಬಗ್ದಲಕರ್, ರಹೇಮಾನ ಪಾಶ, ನಸೀರ ಖಾನ, ಮಹ್ಮದ ನಸೀರ ಹಕ್ಕೀಂ, ರಾಜದೀಪ ಜಾಬಾ, ವಿಶಾಲ ಬೊರಳೆ, ಲಕ್ಷ್ಮೀಬಾಯಿ ಗಡಮಿ, ಜಲೀಸಾ ಬೇಗಂ ಮತ್ತು ಪಟ್ಟಣದ ಪ್ರಮುಖರಾದ ಅಶೋಕ ಸ್ವಾಮಿ, ಶಾಮರಾವ ಭೂತಾಳೆ, ಶರಣು ಗಡಮಿ, ಕಲ್ಯಾಣರಾವ ಜಾಬಾ, ಮನೋಜಕುಮಾರ ಶರ್ಮ ಮತ್ತು ಪುರಸಭೆಯ ಸಿಬ್ಬಂದಿಗಳಾದ ಪೂಜಾ, ವಿಜಯಕುಮಾರ, ವಾಣಿ ಕುಲಕರ್ಣಿ, ಸಂತೋಷ ಬಿರಾದರ, ಚಿದಾನಂದ, ಆನಂದ, ಕವಿತಾ, ಮಂಜುಳಾ, ಸೇರಿದಂತೆ ಸಿಬ್ಬಂದಿ ವರ್ಗದವರು ಹಾಗೂ ಪಟ್ಟಣದ ಮುಖಂಡರು ಉಪಸ್ಥಿತರಿದ್ದರು.

# ನರೇಗಾದಲ್ಲಿ 5 ಲಕ್ಷ ವರೆಗೆ ವ್ಯಯಕ್ತಿಕ ಸೌಲಭ್ಯ ಪಡೆಯರಿ: ಮುಕ್ಕಣ್ಣ ಕರಿಗಾರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:- ನರೇಗಾ ಯೋಜನೆಯಡಿಯಲ್ಲಿ ಗ್ರಾಮೀಣ ಭಾಗದ ಬಡ ಕುಟುಂಬಗಳಿಗೆ ಒಂದು ಆರ್ಥಿಕ ವರ್ಷದಲ್ಲಿ 100 ದಿವಸ ಕೂಲಿ ಕೆಲಸ ನೀಡುವುದರ ಜೊತೆಗೆ ಫಲಾನುಭಾವಿಗಳ ಜೀವನಧಾರಕ್ಕೆ ನೆರವಾಗುವ ವ್ಯಯಕ್ತಿಕ ಕಾಮಗಾರಿಗಳಿಗೆ 5 ಲಕ್ಷ ರೂ. ಸಹಾಯ ಪಡೆಯಲು ಅವಕಾಶವಿದೆ ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮುಕ್ಕಣ್ಣ ಕರಿಗಾರ ತಿಳಿಸಿದರು. ರವಿವಾರ ತಾಲೂಕಿನ ಸೀತಾಳಗೇರಾ ಗ್ರಾಮದಲ್ಲಿ ನರೇಗಾ ಯೋಜನೆಯಡಿಯಲ್ಲಿ ನಡೆಯುತ್ತಿರುವ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಮಾತನಾಡಿದ ಅವರು, ಪ್ರಸ್ತುತ ಬೇಸಿಗೆಯಲ್ಲಿ ನಮ್ಮ ಭಾಗದಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ಸಮಯದಯದಲ್ಲಿ ಬದಲಾವಣೆ ಮತ್ತು ಬೇಸಿಗೆ ಕಾಲದಲ್ಲಿ ಮಾಡುತ್ತಿರುವ ಕಾಮಗಾರಿಯ ಕೆಲಸದಲ್ಲಿ ರಿಯಾಯಿತಿಯನ್ನು ನೀಡಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಹೇಳಿದರು. ಗ್ರಾಮದ ಜನರು ಕೆಲಸಕ್ಕಾಗಿ ವಲಸೆ ಹೋಗುವುದನ್ನು ತಡೆಗಟ್ಟುವದರ ಜೊತೆಗೆ ಗ್ರಾಮವನ್ನು ಸುಂದರ ಮತ್ತು ಸ್ವಚ್ಛ ಗ್ರಾಮಗಳನ್ನಾಗಿ, ಜನರ ಜೀವನ ಮಟ್ಟ ಸುಧಾರಣೆ ತರಲು ನರೇಗಾ ಯೋಜನೆ ಸಹಕಾರಿಯಾಗಿದೆ, ಗ್ರಾಮಸ್ಥರು ಯೋಜನೆಯ ಲಾಭ ಪಡೆದುಕೊಳ್ಳಿ ಎಂದು ಹೇಳಿದರು.

ತಾ.ಪಂ ಸಹಾಯಕ ನಿರ್ದೇಶಕ ಜಗನಾಥ್ ಮಾತನಾಡಿ, ಗ್ರಾಮದಲ್ಲಿ ರಸ್ತೆ ನಿರ್ಮಾಣ, ಚರಂಡಿ ನಿರ್ಮಾಣ, ರೈತರ ಹೊಲಗಳಲ್ಲಿ ದನದ ಕೊಟ್ಟಿಗೆ, ಕುರಿ ಕೊಟ್ಟಿಗೆ, ಕೃಷಿ ಹೊಂಡ, ಬದು ನಿರ್ಮಾಣ, ಕೆರೆ ಕಟ್ಟಿಗಳನ್ನು ನಿರ್ಮಾಣ ಮಾಡುವಲ್ಲಿ ನರೇಗಾ ಯೋಜನೆ ಮಹತ್ವ ಪಡೆದಿದ್ದೆ ಎಂದು ತಿಳಿಸಿದರು. ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ರಮೇಶ ಮಂಠಾಳ , ಎಡಿಪಿಸಿ ದೀಪಕ ಕಟ್ಟಿಮನಿ, ತಾಲೂಕ ಪಂಚಾಯತ ಅಧಿಕಾರಿಗಳಾದ ಆಕಾಶ್ ಉದಿಗೇರೆ, ಮುಕೇಶ್ ಪಾಟೀಲ್, ಸುನೀಲಕುಮಾರ, ಗ್ರಾಮ ಪಂಚಾಯತ ಸಿಬ್ಬಂದಿಗಳು, ಕಾಯಕ ಬಂಧುಗಳು, ಕೂಲಿ ಕಾರ್ಮಿಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವೀರಭದ್ರೇಶ್ವರ ದೇವಸ್ಥಾನ ಜಾತ್ರೆ 18 ರಿಂದ



ಬೀದರ. ಏ.14 :- ತಾಲ್ಲೂಕಿನ ಗುನ್ನಳ್ಳಿ ಗ್ರಾಮದ ವೀರಭದ್ರೇಶ್ವರ ದೇವಸ್ಥಾನದ 12ನೇ ಜಾತ್ರಾ ಮಹೋತ್ಸವ ಏಪ್ರಿಲ್ 18 ರಿಂದ 20 ರ ವರೆಗೆ ನಡೆಯಲಿದೆ.

ಏಪ್ರಿಲ್ 18 ರಂದು ಸಂಜೆ 6ಕ್ಕೆ ಗ್ರಾಮದಲ್ಲಿ ಕೇದಾರ ಜಗದ್ಗುರು ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರ ಶೋಭಾಯಾತ್ರೆ, ದೇವಸ್ಥಾನದಲ್ಲಿ ಸಂಜೆ 7ಕ್ಕೆ ನಂದಿ ಮೂರ್ತಿ ಸ್ಥಾಪನೆ, ನೂತನ ರಥಕ್ಕೆ ಪೂಜೆ ಹಾಗೂ ರಾತ್ರಿ 8ಕ್ಕೆ ಧರ್ಮಸಭೆ ಹಮ್ಮಿಕೊಳ್ಳಲಾಗಿದೆ ಎಂದು ಬೀದರನ ಗಾಂಧಿ ಗಂಜ್ ಸಹಕಾರ ಬ್ಯಾಂಕ್‌ನ ಉಪಾಧ್ಯಕ್ಷರೂ ಆದ ವೀರಭದ್ರೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಸುನೀಲಕುಮಾರ ಬಿರಾದಾರ ತಿಳಿಸಿದ್ದಾರೆ. ಜಗದ್ಗುರು ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರು ಧರ್ಮಸಭೆಯ ಸಾನಿಧ್ಯ ವಹಿಸುವರು. ತಡೋಳಾದ ರಾಜೇಶ್ವರ ಶಿವಾಚಾರ್ಯರು ನೇತೃತ್ವ ವಹಿಸುವರು. ಲಾಡಗೇರಿಯ ಗಂಗಾಧರ ಶಿವಾಚಾರ್ಯರು, ಖಟಕಚಿಂಚೋಳಿಯ ಗುರುಪಾದಯ್ಯ ಸ್ವಾಮೀಜಿ ಸಮ್ಮುಖ ವಹಿಸುವರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸುವರು. ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸುವರು. ಸಂಸದ ಸಾಗರ್ ಖಂಡ್ರೆ, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ, ಮಾಜಿ ಶಾಸಕ ಅಶೋಕ್ ಖೇಣಿ, ಮುಖಂಡ ಚಂದ್ರಾಸಿಂಗ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸರಸ್ವತಿ ಘಾಳೆಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಹೇಳಿದ್ದಾರೆ. 19 ರಂದು ಸಂಜೆ 5ಕ್ಕೆ ವೀರಭದ್ರೇಶ್ವರ ಮೂರ್ತಿಗೆ ರುದ್ರಾಭಿಷೇಕ, ಸಂಜೆ 6ಕ್ಕೆ ಅಕ್ಕ ಮಹಾದೇವಿ ಮಹಿಳಾ ಮಂಡಳ ವತಿಯಿಂದ ಕೋಲಾಟ ನಡೆಯಲಿದೆ. 20 ರಂದು ನಸುಕಿನ ಜಾವ 5ಕ್ಕೆ ರುದ್ರಾಭಿಷೇಕ, ಬೆಳಿಗ್ಗೆ 6ಕ್ಕೆ ಪಲ್ಲಕ್ಕಿ ಮೆರವಣಿಗೆ, ಬೆಳಿಗ್ಗೆ 7ಕ್ಕೆ ಅಗ್ನಿ ಕುಂಡದ ಪೂಜೆ, ಮಧ್ಯಾಹ್ನ 12ಕ್ಕೆ ಮಹಾ ಪ್ರಸಾದ ವಿತರಣೆ, ಸಂಜೆ 6ಕ್ಕೆ ರಥೋತ್ಸವ, ರಾತ್ರಿ 8ಕ್ಕೆ ಕೋಲಾಟ ಮತ್ತು ರಾತ್ರಿ 9ಕ್ಕೆ ಭಜನೆ ಜರುಗಲಿದೆ ಎಂದು ತಿಳಿಸಿದ್ದಾರೆ. ಜಾತ್ರಾ ಮಹೋತ್ಸವದಲ್ಲಿ ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

# ಏ.15 ರಂದು ನೂತನ "ನಮ್ಮ ಕ್ಲಿನಿಕ್" ಉದ್ಘಾಟನಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.14–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಏ.15ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕರಿಮಾರೆಮ್ಮ ಕಾಲೋನಿ ಮತ್ತು ಶ್ರೀರಾಂಪುರ ಕಾಲೋನಿಗಳಲ್ಲಿ ನೂತನ "ನಮ್ಮ ಕ್ಲಿನಿಕ್" ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಘನಉಪಸ್ಥಿತಿ ಇರುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಉದ್ಘಾಟನೆ ಮತ್ತು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್,ಡಾ.ಸೈಯದ್ ನಾಸೀರ್ ಹುಸೇನ್,ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ,ವಿಧಾನಪರಿಷತ್ ಶಾಸಕರಾದ ಶರೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್,ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.ಮುಖ್ಯಮಂತ್ರಿಗಳ ಆಪ್ತಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ, ರಾಷ್ಟ್ರೀಯ ಆರೋಗ್ಯ ಅಭಿಯಾನ ನಿರ್ದೇಶಕ ನವೀನ್ ಭಟ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಶಿವಕುಮಾರ್ ಕೆ.ಬಿ., ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರಾದ ಡಾ.ತ್ರಿವೇಣಿ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸರೆಡ್ಡಿ, ಜಿಲ್ಲಾ ರೋಗವಾಹಕ ಅಶ್ರೀತ ರೋಗಗಳ ನಿಯಂತ್ರಣ ಅಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಆರ್.ಅಬ್ದುಲ್ಲಾ ಸೇರಿದಂತೆ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಡಾ.ಬಿ.ಆರ್.ಅಂಬೇಡ್ಕರ ನಾಮಫಲಕ ವೃತ್ತ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಡಾ.ಬಿ.ಆರ್.ಅಂಬೇಡ್ಕರರ 134 ನೆಯ ಜಯಂತೋತ್ಸವ ಕಾರ್ಯಕ್ರಮದ ಅಂಗವಾಗಿ ನಗರದ ಬಸ್ ಡಿಪೋ ಆಶ್ರೆಯ ಕಾಲೋನಿಯಲ್ಲಿ ಡಾ,ಬಾಬಾಸಾಹೇಬ್ ಅಂಬೇಡ್ಕರವರ ನಾಮಫಲಕ ಮತ್ತು ವೃತ್ತ ಲೋಕಾರ್ಪಣೆ ಮಾಡಲಾಯಿತು,ನಗರಸಭೆ ಸದಸ್ಯರಾದ ಶ್ರೀಮತಿ ಹೊನ್ನಮ್ಮ ಭೀಮರಾಯ ಕದರಾಪುರ ಉಧ್ಘಾಟನೆ ನೇರವೇರಿಸಿದರು, ಡಾ,ಬಿ,ಆರ್,ಅಂಬೇಡ್ಕರಜಯಂತೋತ್ಸವ ಸಮಿತಿ ಅಧ್ಯಕ್ಷರಾದ ಹೊನ್ನಪ್ಪ ರಸ್ತಾಪುರ ಅಧ್ಯಕ್ಷತೆ ವಹಿಸಿದ್ದರು, ಎಸ್,ಎಸ್,ಡಿ,ಜಿಲ್ಲಾಧ್ಯಕ್ಷರಾದ ಮಾಹಾದೇವ ದಿಗ್ಗಿಯವರು ಕಾರ್ಯಕ್ರಮ ಆಯೋಜನೆ ಮಾಡಿದ್ದರು,ಮುಖ್ಯ ಅತಿಥಿಗಳಾಗಿ ನಗರಸಭೆ ಸದಸ್ಯರಾದ ಶ್ರೀಮತಿ ಜಯಶ್ರೀ ರವಿಚಂದ್ರ ಎದರಮನಿ, ಉಪಸ್ಥಿತಿಯಲ್ಲಿ ಕರ್ನಾಟಕ ಸರ್ಕಾರಿ ಎಸ್,ಸಿ,ಎಸ್,ಟಿ, ನೌಕರರ ಸಂಘದ ಅಧ್ಯಕ್ಷರಾದ ಶ್ರೀಶೈಲ್ ಹೊಸಮನಿ, ಪಿಎಲ್,ಡಿ, ಬ್ಯಾಂಕ್ ಅಧ್ಯಕ್ಷರಾದ ಗುರುನಾಥ ಬಾಣತಿಹಾಳ, ಮುಖಂಡರಾದ ರಾಮಣ್ಣಸಾಧ್ಯಾಪುರ,ಕರಾ,ದ,ಸಂ,ಸ ಯಾದಗಿರಿ ಜಿಲ್ಲಾ ಸಂಚಾಲಕರಾದ ಶಿವುಪುತ್ರಜವಳಿ,ಕಟ್ಟಡ ಕಾರ್ಮಿಕರ ಸಂಘದ ಯಾದಗಿರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಭೀಮರಾಯ ಕದರಾಪುರ,ಕರ್ನಾಟಕ ಮಾದಿಗರ ಸಂಘದ ಅಧ್ಯಕ್ಷರಾದ ಶಿವಕುಮಾರ ದೊಡ್ಡಮನಿ,ದ,ಸಂ,ಸ ತಾಲುಕಾ ಸಂಚಾಲಕರಾದ ಜಯರಡ್ಡಿಹೋಸಮನಿ, ಶರಣು ಸಂಘರ್ಷ ಬಲಭೀಮ ಬೇವಿನಳ್ಳಿ, ಶರಣಪ್ಪ ಖ್ಯಾತನಾಳ, ಬುಡ್ಗಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಯಮನಪ್ಪ ರೇವಲ್. ಎಸ್,ಡಿ,ಎಮ್,ಸಿ, ಅಧ್ಯಕ್ಷರಾದ ಹಣಮಂತ ಅಸಿಬೋಳ, ಸಿಳ್ಯಾಖ್ಯಾತ ಸಮಾಜದ ಗೌಡಪ್ಪ ಮರಮಕಲ್,ಯಂಕಪ್ಪದೇವರಮನಿ, ಬಸವರಾಜ ಕೆಂಭಾವಿ,ವಿಶ್ವರಾಧ್ಯ ಹಾದಿಮನಿ,ನಿಂಗಣ್ಣ ಕದರಾಪುರ, ಅಯಣ್ಣ ಕದಾಪುರ ಅಮರೇಶ ಗುಂಡಗುರ್ತಿ ಸೇರಿದಂತೆ ಅನೇಕ ಕಾರ್ಯಕರ್ತರು ಗಣ್ಯರು ಹಿರಿಯರು ಪಾಲ್ಗೊಂಡಿದ್ದರು,

# ಕೊಪ್ಪಳ ಬೆಂಗಳೂರು ಮಧ್ಯ ನಾನ್ ಎಸಿ ಸ್ಲೀಪರ್ ಬಸ್ ಸಂಚಾರ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೊಪ್ಪಳ–ಬೆಂಗಳೂರು ಮತ್ತು ಕೊಪ್ಪಳ ಬೀದರ ಮಧ್ಯ ಬಸ್ ಸಂಚಾರದಿಂದ ನಮ್ಮ ಭಾಗದ ಜನರಿಗೆ ಅನುಕೂಲವಾಗಲಿದೆ. ಇದು ಜನರ ಬಹುದಿನಗಳ ಬೇಡಿ– ಕೆಯಾಗಿತ್ತು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಸೋಮವಾರ ಕೊಪ್ಪಳ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಕೊಪ್ಪಳ ವಿಭಾಗದ ನೂತನ ನಾಲ್ಕು ಅಮೋಘವರ್ಷ ನಾನ್ ಎಸಿ ಸ್ಲೀಪರ್ ಹೊಸ ಬಸ್ಸುಗಳಿಗೆ ಚಾಲನೆ ನೀಡಿ ಮಾತನಾಡಿದರು.

ಕೊಪ್ಪಳದಿಂದ ಬೆಂಗಳೂರು ಮತ್ತು ಬೀದರ ಮಧ್ಯ ಸಂಚರಿಸಲು ಬಸ್ಸುಗಳ ಅವಶ್ಯಕತೆ ಇತ್ತು ಹಾಗಾಗಿ ಇಂದು ಈ ಬಸ್ಸುಗಳಿಗೆ ಚಾಲನೆ ನೀಡಿದ್ದೇನೆ. ಕೊಪ್ಪಳ ವಿಭಾಗಕ್ಕೆ ನಾಲ್ಕು ಅಮೋಘವರ್ಷ ನಾನ ಎಸಿ ಸ್ಲೀಪರ್ ಬಸ್ಸುಗಳನ್ನು ನೀಡಿದ್ದು ಅವುಗಳಲ್ಲಿ ಎರಡು ಕೊಪ್ಪಳ– ಬೆಂಗಳೂರು ಮಾರ್ಗದಲ್ಲಿ ಕಾರ್ಯಾಚರಣೆ ಮಾಡಲಿವೆ ಈ ಬಸ್ಸು ರಾತ್ರಿ. 10 ಗಂಟೆಗೆ ಕೊಪ್ಪಳ ಕೇಂದ್ರ ಬಸ್ ನಿಲ್ದಾಣದಿಂದ ಹೊರಡಲಿದೆ.

ಕೊಪ್ಪಳ– ಬೀದರ ಮಧ್ಯ 2 ಬಸ್ಸುಗಳು ಸಂಚರಿಸಲಿದ್ದು. ಕೊಪ್ಪಳದಿಂದ ರಾತ್ರಿ 8:25 ಬಸ್ಸು ಬಿಡಲಿದೆ. ಇವುಗಳು ವಾರದ ಎಲ್ಲಾ ದಿನಗಳಲ್ಲಿ ಸಂಚರಿಸಲಿದ್ದು ಸಾರ್ವಜನಿಕರು ಇವುಗಳ ಸದುಪಯೋಗ ಪಡೆದುಕೊಳ್ಳಬೇಕು. ಕೊಪ್ಪಳದಿಂದ ಬೆಂಗಳೂರು ಹಾಗೂ ಬೀದರಿಗೆ ಈ ನಾನ ಎಸಿ ಸ್ಲೀಪರ್ ಬಸ್ಸುಗಳ ಸಂಚಾರದಿಂದ ಜನರಿಗೆ ಬಹಳ ಅನುಕೂಲವಾಗಲಿದೆ ಎಂದು ಹೇಳಿದರು

ಸಚಿವರು ನೂತನ ಬಸ್ಸುಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದ ನಂತರ ಬಸ್ಸುಗಳ ಒಳಗಡೆ ಹೋಗಿ ಬಸ್ಸಿನ ಆಸನಗಳ ವ್ಯವಸ್ಥೆ ಹಾಗೂ ಅದರಲ್ಲಿರುವ ಸೌಲಭ್ಯಗಳ ಪರಿಶೀಲಿಸಿದ ನಂತರ ಎಲ್ಲವನ್ನು ಅಚ್ಚುಕಟ್ಟಾಗಿ ನಿರ್ವಹಿಸಿಕೊಂಡು ಹೋಗಬೇಕು ಮತ್ತು ಪ್ರಯಾಣಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆಗಳಾಗದ ರೀತಿಯಲ್ಲಿ ಜನರಿಗೆ ಸೇವೆ ನೀಡುವಂತೆ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ.ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್. ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದ ಹಿರಿಯ ನಿಯಂತ್ರಣಾಧಿಕಾರಿ ಮಹಾದೇವ ಮುಂಜಿ

ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಂಗ್ರೇಸ್ ಪಕ್ಷವನ್ನು ಇನ್ನಷ್ಟು ಸದೃಢಗೊಳಿಸಿ:ಬಾಬು ಟೈಗರ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಕಾಂಗ್ರೇಸ್ ಪಕ್ಷವನ್ನು ಇನ್ನಷ್ಟು ಸದೃಢಗೊಳಿಸುವ ನಿಟ್ಟಿನಲ್ಲಿ ಸಮಯ ಮೀಸಲಿಡಬೇಕು. ಸಂಘಟನೆ ಕಾರ್ಯ ಅತ್ಯಂತ ಚುರುಕಿನಿಂದ ನಡೆಯಬೇಕು ಎಂದು ಕಾಂಗ್ರೇಸ್ ಪಕ್ಷದ ಮುಖಂಡ ಬಾಬು ಟೈಗರ್ ಸೋಮವಾರ ಪ್ರವಾಸಿ ಮಂದಿರದಲ್ಲಿ ಆಯೋಜನೆ ಮಾಡಿರುವ ಮಾಜಿ ಕೆಪಿಟಿಸಿಎಲ್‌ನ ನಾಮನಿರ್ದೇಶನ ಸದಸ್ಯರಾದ ಶಾಂತಕುಮಾರರವರ 32ನೇ ಹುಟ್ಟುಹಬ್ಬದ ನಿಮಿತ್ತ ಕಾಂಗ್ರೆಸ್ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿರುವ ಶಾಂತಕುಮಾರ ಅರಳಿ ರವರ ಹುಟ್ಟುಹಬ್ಬದ ಅಂಗವಾಗಿ ಕೇಕ್ ಕತ್ತರಿಸುವ ಮೂಲಕ ಮಾತನಾಡುತ್ತಾ ತಿಳಿಸಿದರು. ಶಾಂತಕುಮಾರ ಅರಳಿರವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರಿಗೆ ದೇವರು ಆರೋಗ್ಯ ಆಶ್ವರ್ಯ, ನೆಮ್ಮದಿ ನೀಡಲಿ ಎಂದು ಶುಭ ಕೋರಿದರು. ಈ ಸಂದರ್ಭದಲ್ಲಿ ಸಂತೋಷ ಅತಿವಾಳ, ರಾಹುಲ್ ಉದ್ಧಾ, ಶ್ರೀನಿವಾಸ್ ಕಲ್ಲೂರ, ಸುದಾಕರ್ ಮಾಡಗೂಳ, ಸುನೀಲ ಶಿವನಾಯಕ, ಭೀಮಶಾ ಎಲ್. ಹೆಗಡೆ, ಈಶ್ವರ ಮೇಲ್ಕೇರಿ, ಶರಣಪ್ಪ ಧುಮ್ಮನಸೂರ, ಪ್ರಭು ಬುದ್ಧಾ, ಸುಧಾಕರ್ ಹೊಸಮನಿ, ನರಸಿಂಗ್ ಇಟಗಾ, ಪಾಂಡುರಂಗ ಸಂಗಮ್,

ಶಿವಕುಮಾರ ಸಾಗರ, ದೇಸಾಯಿ ಮಾಡಗೂಳ ಉಪಸ್ಥಿತರಿದರು.

# ಗುರುವಿನ ಕೃಪಾಯಿಂದ ಸಾಧನೆ ಸಾಧ್ಯ– ಬಸವಲಿಂಗೇಶ್ವರ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಮನುಷ್ಯ ತನ್ನ ಜೀವನದಲ್ಲಿ ಗುರುವಿನ ಕೃಪೆಯಿಂದ ಮಾತ್ರ ಎತ್ತರಕ್ಕೆ ಬೆಳೆಯಲು ಸಾಧ್ಯ ಎಂದು ಯಲಬುರ್ಗಾದ ಶ್ರ ಷ ಬ್ರ ಬಸವಲಿಂಗೇಶ್ವರ ಸ್ವಾಮೀಜೀ ಹೇಳಿದರು.

ಅವರು ಕುಕನೂರ ತಾಲ್ಲೂಕಿನ ತಳಕಲ್ ಗ್ರಾಮದ ಮುಂಡರಗಿ ಅನ್ನದಾನೀಶ್ವರಶಾಖಾಮಠದಲ್ಲಿ ನಡೆದ ಶ್ರೀ ಜಗದ್ಗುರು ಅನ್ನದಾನೀಶ್ವರರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಗುರುವಂದನೆ ಸ್ವೀಕರಿಸಿ ಮಾತನಾಡುತ್ತಾ ಶ್ರೀಮಠದ 9 ನೇ ಜಗದ್ಗುರುಗಳು ಪಂಡಿತರಾಗಿ,ಭವರೋಗವೈದ್ಯರಾಗಿ ಜೀವನ ನಡೆಸಿದವರು ತಮ್ಮ ಬದುಕಿನುದ್ದಕ್ಕೂ ಹಲವಾರು ಪವಾಡಗಳನ್ನ ಮಾಡುತ್ತಾ ಲೀಲಾಮೂರ್ತಿಯಾಗಿ ಅಪಾರ ಭಕ್ತರನ್ನ ಸಂಪಾದಿಸಿದವರು ಎಂದರು. ನಂತರ ಮಾತನಾಡಿದ ಶ್ರೀಮಠದ ಪೂಜ್ಯ ಮಹಾದೇವ ಸ್ವಾಮೀಜಿ ನಮ್ಮ ಮಠದ ಗುರುಗಳು ತಳಕಲ್ ಗ್ರಾಮದ ಜನರಿಗೆ 4 ಎಕರೆ ಭೂಮಿ ನೀಡಿದ ಭೂ ದಾನಿಗಳು, ಅವರ ಕಾಲದಲ್ಲಿ ಶ್ರೀಮಠ ಹಲವಾರು ಧರ್ಮಪರ ಕಾರ್ಯಗಳಿಗೆ ದಾನ ಧರ್ಮ ಮಾಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ, ಹಲವಾರು ಮಠ ಮಂದಿರಗಳ ಕಲ್ಯಾಣಕ್ಕೆ ಶ್ರೀಮಠದ ಗುರುಗಳು ಶ್ರಮಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಗುರುಗಳ ಪುಣ್ಯಸ್ಮರಣೋತ್ಸವ ಅಂಗವಾಗಿ ರುದ್ರಾಭಿಷೇಕ, ಮಹಾದಾಸೋಹ ನಡೆಸಲಾಯಿತು.

ಮಲ್ಲಪ್ಪ ಗೋರಿ, ಮುದಿಯಪ್ಪ ಯೋಗೆಮ್ಮನವರ, ರಾಮಣ್ಣ ನಿಟ್ಟಲಿ, ಸೋಮಣ್ಣ ಕರ್ಜಗಿ, ಬಸವರಾಜ ಬ್ಯಾಳಿ, ಸುರೇಶ, ಪಕ್ಕಪ್ಪ ಅಳವಂಡಿ, ಮಂಜುನಾಥ, ನವೀನಕುಮಾರ, ಹನುಮಂತ, ಕಲ್ಲಯ್ಯ ಸೇರಿದಂತೆ ಹಲವಾರು ಭಕ್ತರು ಇದ್ದರು.

# ಡಿಗ್ಗಿ ಗ್ರಾ.ಪಂ.ಯಲ್ಲಿ ಅಂಬೇಡ್ಕರ ಅವರ 134ನೇ ಜಯಂತೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತನಲ್ಲಿ ಸೋಮವಾರ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ 134ನೇ ಜಯಂತೋತ್ಸವ ನಿಮಿತ್ತ ಪಿ.ಡಿ.ಓ ಪ್ರಶಾಂತ ಸುತಾರ ಅಂಬೇಡ್ಕರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮಿಸಿದರು.

ನಂತರ ಮಾತನಾಡಿ, ದಿನದಲಿತರ, ಹಿಂದುಳಿದ ವರ್ಗದವರ, ಸ್ತ್ರೀಯರ, ಮಕ್ಕಳ ಎಲ್ಲರ ಏಳಿಗೆ ಮತ್ತು ಸಮಾನತೆಯಾಗಿ ಹೋರಾಡಿದ ಮಹಾನನಾಯಕ ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾ.ಪಂ. ಸದ್ಯಸ್ಯ ಮಿಥುನ ಸೂರ್ಯವಂಷಿ, ಡೇಟಾ ಒಪರೇಟರ್ ಸಾಗರ, ಕರಾವಸೂಲಿಗಾರಾದ ಭೀಮರಾವ ದಭಾಲೆ, ಲಕ್ಷ್ಮಿ ಮೇಡಂ, ಸಿಬ್ಬಂದಿಗಳಾದ ಸೂರ್ಯಕಾಂತ ಖರಾಬೆ, ಪ್ರಕಾಶ ಡೋಣಗಾಪುರೆ, ಚಂದ್ರಶೇಖರ ಮೆಹತ್ರೆ, ಮಡಿವಾಳಪ್ಪ ಬಿರಾದಾರ ಸೇರಿದಂತೆ ಇನ್ನಿತರು ಇದ್ದರು.

# ಅಂಬೇಡ್ಕರ್ ರ ಬದುಕು, ಬರಹ ಸರ್ವರಿಗೂ ಮಾದರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಹಾ ಮಾನವತಾವಾದಿ, ಜ್ಞಾನಿ, ಸಂಘಟಕರಾಗಿದ್ದ ಡಾ. ಬಿ.ಆರ್.ಅಂಬೇಡ್ಕರ್ ರ ಬದುಕು, ಬರಹ, ಸಂದೇಶಗಳು ಸರ್ವರಿಗೂ ಮಾದರಿಯಾಗಿವೆ ಎಂದು ಸಂಸದ ಸಾಗರ್ ಖಂಡ್ರೆ ಅವರು ಹೇಳಿದರು.

ಪಟ್ಟಣದ ಪುರವನದಲ್ಲಿ ತಾಲ್ಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ, ಪುರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಪ್ರತಿಯೊಬ್ಬರ ಪಾಲಿಗೆ ಪವಿತ್ರ ಗ್ರಂಥವಾದ ಸಂವಿಧಾನವನ್ನು ನೀಡಿದ ಮಹಾ ಮೇಧಾವಿ ಅಂಬೇಡ್ಕರ್ ರು.

ಅವರ ಬದುಕು, ಜೀವನಶೈಲಿ, ಕೊಡುಗೆಗಳು ಎಲ್ಲರಿಗೂ ಸ್ಫೂರ್ತಿ. ಅವರ ಬೃಹತ್ ಮತ್ತು ಸೂಕ್ಷ್ಮ ಕೊಡುಗೆಗಳಿಂದಲೇ ದೇಶದ ಎಲ್ಲ ಜನತೆಗೆ ಸಮಾನತೆ, ಹಕ್ಕು, ಕರ್ತವ್ಯ ಲಭಿಸಿದೆ ಎಂದು ತಿಳಿಸಿದರು.

ಸಾಹಿತಿ ಪಾರ್ವತಿ ಸೋನಾರೆ ಅವರು ವಿಶೇಷ ಉಪನ್ಯಾಸ ನೀಡಿದರು.

ಪುರಸಭೆ ಅಧ್ಯಕ್ಷೆ ಶಶಿಕಲಾ ಸಿಂಧನಕೆರೆ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ತಹಶೀಲ್ದಾರ್ ಮಲ್ಲಿಕಾರ್ಜುನ ವಡ್ಡನಕೇರಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದರ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಸತೀಶಕುಮಾರ ಸಂಗನ್, ಪುರಸಭೆ ಅಧಿಕಾರಿ ಸಂಗಮೇಶ ಕಾರಬಾರಿ ಸೇರಿದಂತೆ ವಿವಿಧ ಇಲಾಖೆಗಳ ಪ್ರಮುಖರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ಪುರಸಭೆಯಿಂದ ಪುರಭವನದವರೆಗೆ ಅಂಬೇಡ್ಕರ್ ಅವರ ಭಾವಚಿತ್ರದ ಮೆರವಣಿಗೆ ನಡೆಯಿತು.

# ಅಂಬೇಡ್ಕರ್ ಅವರ ಆದರ್ಶಗಳು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಲಿ. ಪಿಡಿಓ ಶರಣಪ್ಪ ಗಾದಗೆ ಅಭಿಮತ




ಮಲ್ಲಮ್ಮ ನುಡಿ ವಾರ್ತೆ

ಔರಾದ್:ಡಾ.ಬಿ.ಆರ್ ಅಂಬೇಡ್ಕರ್ ಅವರದು ಮಹಾನ್ ಚೇತನ ಸಂಘರ್ಷದ ಅನುಭವದಿಂದ ಹುಟ್ಟಿಕೊಂಡ ವ್ಯಕಿತ್ವ. ಅವರ ಮನಸ್ಸಿನಲ್ಲಿ ಅಂದು ಮೂಡಿದ ಸಮಾನತೆಯ ಪ್ರಜ್ಞೆ ,ಭವ್ಯ ಭಾರತಕ್ಕೆ ಬಲಿಷ್ಠ ಸಂವಿಧಾನವನ್ನು ನೀಡುವಂತೆ ಪ್ರೇರೆಪಿಸಿತು ಎಂದು ಪಿಡಿಓ ಶರಣಪ್ಪ ಗಾದಗೆ ನುಡಿದರು.

ತಾಲೂಕಿನ ಜಂಬಗಿ ಗ್ರಾಮ ಪಂಚಾಯತ್ ನಲ್ಲಿ ಸೋಮವಾರ ಆಚರಿಸಿದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜ ಸಲ್ಲಿಸಿ ಮಾತನಾಡಿದ ಅವರು

ನಮ್ಮ ಇಂದಿನ ದಿನ ನಿತ್ಯದ ಜೀವನ ನಮ್ಮ ಸಂವಿಧಾನದ ತಳಹದಿಯ ಮೇಲೆ ನಿಂತಿದೆ. ಅಂದು ಅಂಬೇಡ್ಕರ್ ಸಮಸ್ಯೆಯ ಭಾಗವಾಗಿ, ಕಷ್ಟಕಾರ್ಪಣ್ಯಗಳನ್ನು ಎದುರಿಸಿದ್ದರಿಂದಾಗಿ ಸಮಾಜದಲ್ಲಿನ ಶೋಷಿತರ ಭವಣೆಯನ್ನು ಅರಿಯಲು ಸಾಧ್ಯವಾಯಿತು. ಅಂತಹ ಶೋಷಿತರಿಗೆ ಸಮಾಜದಲ್ಲಿ ಗೌರಯುತವಾಗಿ ಬದುಕುವ ಪರಿಸ್ಥಿತಿಯನ್ನು ತರಲು ಪ್ರೇರೆಪಿಸಿತು.., ಇಡೀ ಸಮುದಾಯವೇ ಬದಲಾವಣೆಯತ್ತಾ ಹೆಜ್ಜೆ ಹಾಕಿದರೆ ಸರ್ವರ ಏಳಿಗೆ ಖಂಡಿತ ಸಾಧ್ಯ. ಆ ಹಿನ್ನಲೆಯಲ್ಲಿ ಅಂಬೇಡ್ಕರ್ರವರ ಚಿಂತನೆ ಸದಾ ನಮಗೆಲ್ಲರಿಗೂ ಉತ್ತಮ ಮಾರ್ಗದರ್ಶಿ ಎಂದರು.

ಗ್ರಾಮ ಪಂಚಾಯತ್ ಸದಸ್ಯ ವಿಠ್ಠಲ್ ಬುದ್ರೆ ಮಾತನಾಡಿ, ಅಸ್ಪೃಶ್ಯತೆಯ ಭಾವನೆ ಮೊದಲು ನಮ್ಮ ಮನಸ್ಸಿನಿಂದ ತೊಲಗಬೇಕು. ನಮ್ಮ ಮನಸ್ಸಿನೊಳಗೆ ಅಸ್ಪೃಶ್ಯರು ಎಂದು ಇದ್ದ ವರ್ಗ, ಈಗಲೂ ಅದೇ ಪರಿಸ್ಥಿತಿಯಲ್ಲಿ ಜೀವನ ಸಾಗಿಸುತ್ತಿದೆ. ನಾವು ವಿಜ್ಞಾನ ತಂತ್ರಜ್ಞಾನದಲ್ಲಿ ಎಷ್ಟೇ ಮುಂದುವರೆದರೂ, ವೇಸ್ಟ್ ಮ್ಯಾನೇಜ್ಮೆಂಟ್ ಸಿಸ್ಟಮ್ನಲ್ಲಿ ಯಾವುದೇ ಬದಲಾವಣೆಗಳಾಗಲಿಲ್ಲ. ಪ್ರತಿಯೊಬ್ಬರ ಜೀವನದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆದರ್ಶ ತತ್ವಗಳನ್ನು ಅಳವಡಿಸಿಕೊಳ್ಳಬೇಕು. ಎಲ್ಲಕ್ಕಿಂತ ಮುಖ್ಯವಾಗಿ ನಮ್ಮ ಪೀಳಿಗೆಗೆ ಶಿಕ್ಷಣದ ಬಗ್ಗೆ ಪ್ರಾಮುಖ್ಯತೆ ಮಾಡಬೇಕು. ಜೀವನದಲ್ಲಿ ಮುಂದೆ ಬರಬೇಕು ಆದರೂ ಅದಕ್ಕೆ ಶಿಕ್ಷಣ ಬಹಳ ಪ್ರಾಮುಖ್ಯತೆ ವಾಗಿದೆ ಎಂದರು.ಪಂ ಅಧ್ಯಕ್ಷೆ ಸುಮನಾಬಾಯಿ ಪಾಟೀಲ್, ಪಂಚ ಗ್ಯಾರಂಟಿ ಯೋಜನೆ ಸದಸ್ಯ ಎಂ ಡಿ ಸಲಾವೊದ್ದಿನ್, ನೌನಾಥ ಭಾಲ್ಕೆ, ಅಭಂಗರಾವ್ ತಾಡಮಲ್ಲೆ, ರಾಜು ಮಹಾರಾಜವಾಡಿ, ದತ್ತಾತ್ರಿ ಗಾಯಕವಾಡ, ದಯಾನಂದ, ಅನಿಲ್, ಸಂತೋಷ್, ಬಾಲಾಜಿ ಪಾಟೀಲ್, ಕಾರ್ಯದರ್ಶಿ ಜಗದೇವಿ, ಶಿವಕುಮಾರ್ ಪಾರಾ, ಪತ್ರಕರ್ತ ಅಹಮದ್ ಜಂಬಗಿ ಇತರರಿದ್ದರು..

# ಸಂವಿಧಾನ ಎಲ್ಲರಿಗೂ ಸಮಾನತೆ ಕಲ್ಪಿಸಿದೆ

ಮಲ್ಲಮ್ಮ ನುಡಿ ವಾರ್ತೆ

ಔರಾದ..ಭಾರತದ ಸಂವಿಧಾನ ಅತಿ ಕಟ್ಟಕಡೆಯ,ದುರ್ಬಲ ಹಾಗೂ ಮಹಿಳೆಯರಿಗೆ ಪ್ರಜಾಪ್ರಭುತ್ವದ ಮೂಲಕ ಸಮಾನತೆ ಕಲ್ಪಿಸಿದೆ ಎಂದು ಯರನಳ್ಳಿ ಸರ್ಕಾರಿ ಪ್ರೌಢಶಾಲೆಯ ಸಂಪನ್ಮೂಲ ಶಿಕ್ಷಕರಾದ ಶಾಮ ಸುಂದರ ಖಾನಾಪುರ ಹೇಳಿದರು.

ಸಂತಪೂರ ಸಿದ್ಧರಾಮೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಪತ್ರಕರ್ತರು, ನ್ಯಾಯವಾದಿಗಳು, ಅರ್ಥಶಾಸ್ತ್ರಜ್ಞರು ಹಾಗೂ ಬರಹಗಾರರು ಇತ್ಯಾದಿ ಸೃಜನಶೀಲ ಜ್ಞಾನ ಸ್ವ– ರೂಪಿ ಆಗಿದ್ದರು ಎಂದರು.

ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಮಾತನಾಡಿ ಭಾರತ ಸಂವಿಧಾನ ಬೃಹತ್ ಸಂವಿಧಾನ ಹಾಗೂ ಸರ್ವಕಾಲಕ್ಕೂ ಪ್ರಸ್ತುತವಾಗಿದೆ. ಸಂವಿಧಾನದ ಸೌಲಭ್ಯಗಳ ಉಪಯೋಗವನ್ನು ಪಡೆದು ಬಲಿಷ್ಠರಾಗಲು ಅವಕಾಶ ಕಲ್ಪಿಸಿದರು ಡಾ.ಬಿ.ಆರ್ ಅಂಬೇಡ್ಕರ್ ರವರಾಗಿದ್ದಾರೆ ಎಂದರು.

ಪ್ರತಿಭಾವಂತ ವಿದ್ಯಾರ್ಥಿನಿ ಪ್ರಿಯಾಂಕಾ ಪ್ರಕಾಶ ಮಾತನಾಡಿದರು. ಉಪನ್ಯಾಸಕರಾದ ಶಿವಪುತ್ರ ಧರಣಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಇದೇ ಸಂದರ್ಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಾದ ಪ್ರಿಯಾಂಕಾ ಪ್ರಕಾಶ, ಗೀತಾ ನರಸಪ್ಪ, ಭಾಗ್ಯವಂತಿ ಶರಣಯ್ಯ ರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶಾಸಕ ಶರಣಗೌಡ ಕಂದಕೂರು ಮನವಿಗೆ ಸಭಾಪತಿ ಯು.ಟಿ.ಖಾದರ್ ಸ್ಪಂದನೆ

# ಇನ್ಮೂ ಮುಂದೇ ಶಾಸಕರ ಅಧ್ಯಕ್ಷತೆಯಲ್ಲಿಯೇ ಜನಸ್ಪಂದನೆ ಸಭೆ : ಸರ್ಕಾರ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ರಾಜ್ಯದ ಎಲ್ಲ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿನಡೆಯುವಜನಸ್ಪಂದನ ಕಾರ್ಯಕ್ರಮಗಳು ಸ್ಥಳಿಯ ಶಾಸಕರ ಅಧ್ಯಕ್ಷತೆಯಲ್ಲಿಯೇ ಆಯೋಜಿಸುವಂತೆಯೇ ರಾಜ್ಯ ವಿಧಾನಸಭೆಯ ಸಚಿವಲಾಯದ ನಿರ್ದೇಶಕರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸುತ್ತೋಲೆ ಹೊರಡಿಸಿದ್ದಾರೆ.



ನನ್ನ ಮನವಿಗೆ ಸ್ಪಂಧಿಸಿ ಆದೇಶ ನೀಡಿದ ಸಭಾಪತಿ ಯು.ಟಿ.ಖಾದರ್ ಅವರಿಗೆ ರಾಜ್ಯದ ಎಲ್ಲ ಶಾಸಕರ ಪರವಾಗಿ ಅಭಿನಂದಿಸುವೆ.
**–ಶರಣಗೌಡ ಕಂದಕೂರು ಶಾಸಕರು, ಗುರುಮಠಕಲ್**

ಈ ಕುರಿತು ಗುರುಮಠಕಲ್ ಜೆಡಿಎಸ್ ಶಾಸಕ ಶರಣಗೌಡ ಕಂದಕೂರು,ತಾಲೂಕು ಕೇಂದ್ರಗಳಲ್ಲಿ ಆಯೋಜಿಸುವ ಜನಸ್ಪಂದನ ಕಾರ್ಯಕ್ರಮಗಳಿಗೆ ಜನಪ್ರತಿನಿಧಿ ಮತ್ತು ಶಾಸಕರನ್ನು ಆಹ್ವಾನಿಸದೇ ಇರುವುದರಿಂದ ಶಾಸಕರಿಗೆ ಅಗೌರವ ಮತ್ತು ಹಕ್ಕುಚ್ಯುತಿ ತೋರಿದಂತಾಗುತ್ತದೆ,ಕಾರಣ ಈ ಆದೇಶವನ್ನು ಮರುಪರಿಶೀಲಿಸಿ, ಶಾಸಕರ ಅಧ್ಯಕ್ಷತೆಯಲ್ಲಿಯೇ ಆಯೋಜಿಸುವಂತೆಯೇ ನಿರ್ದೇಶನ ನೀಡಬೇಕೆಂದು ಸಭಾಪತಿ ಯು.ಟಿ.ಖಾದರ್ ಅವರಿಗೆ ಪತ್ರ ಅವರಿಗೆ ಪತ್ರ ಬರೆದಿದ್ದರು.

ಕಂದಕೂರು ಅವರು ಬರೆದ ಪತ್ರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಈಗ ಶಾಸಕರ ಅಧ್ಯಕ್ಷತೆಯಲ್ಲಿಯೇ ಆಯೋಜಿಸುವಂತೆ ಆದೇಶ ಹೊರಡಿಸಿದೆ.

# ಅಯೋಧ್ಯೆಯಲ್ಲಿ ರಾಮ ಮಂದಿರ ಸ್ಥಾಪನೆಯಿಂದಾಗಿ ಸನಾತನ ಧರ್ಮದ ಜಾಗೃತಿ–ಎನ್. ಗೋಪಾಲ್‌ಜಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.15:ಅಯೋಧ್ಯೆಯಲ್ಲಿ ರಾಮ ಮಂದಿರದ ಸ್ಥಾಪನೆಯ ನಂತರ ದೇಶ ವಿದೇಶದಲ್ಲಿ ಸನಾತನ ಧರ್ಮದ ಬಗ್ಗೆ ಹೆಮ್ಮೆ ಗೌರವಗಳು ಹೆಚ್ಚಾಗುತ್ತಿವೆ.ವಿದೇಶದ ಭೋಗಜೀವನದ ಬದಲಾಗಿ ದೇಶದ ಯೋಗಜೀವನದ ಬಗ್ಗೆ ಆಕರ್ಷಣೆ ಹೆಚ್ಚಾಗುತ್ತಿದೆ. ಸನಾತನ ಧರ್ಮದ ಆಚರಣೆಗಳು ವೈಭವದಿಂದ ನೆರವೇರುತ್ತಿವೆ. ವಯಸ್ಕರ ಜತೆ ಯುವಜನಾಂಗ ಕೂಡ ರಾಮೋತ್ಸವ ಹನುಮಾನೋತ್ಸವ ಕೃಷ್ಣೋತ್ಸವದಂತಹ ಕಾರ್ಯಕ್ರಮಗಳಲ್ಲಿ ಸ್ವಯಂಪ್ರೇರಿತರಾಗಿ ಹರ್ಷೋಲ್ಲಾಸದಿಂದ ಪಾಲ್ಗೊಳ್ಳುತಿದ್ದಾರೆ.ಎಂದು ವಿಶ್ವ ಹಿಂದು ಪರಿಷತ್ ಕೇಂದ್ರೀಯ ಸಹ ಕಾರ್ಯದರ್ಶಿ ಹಾಗೂ ಅಯೋಧ್ಯೆ ರಾಮ ಮಂದಿರ ನಿರ್ಮಾಣದ ಉಸ್ತುವಾರಿ ಎನ್. ಗೋಪಾಲಜಿಯವರು ಹೇಳಿದರು. ಅವರು ಬೀದರ ನಗರದಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳದ ವತಿಯಿಂದ ಹಮ್ಮಿಕೊಂಡ ಹನುಮಾನ ಜಯಂತಿ ಶೋಭಾಯಾತ್ರೆಯನ್ನುದ್ದೇಶಿಸಿ ನಗರದ ಬಸವೇಶ್ವರ ವೃತ್ತದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಮುಂದುವರೆದು,ಅಯೋಧ್ಯೆಯ ರಾಮ ಮಂದಿರದ ನಿರ್ಮಾಣದ ಕಾರ್ಯಗಳು ವೇಗವಾಗಿ ನಡೆಯುತ್ತಿದ್ದು ಕೊನೆ ಹಂತದಲ್ಲಿವೆ. ದಿನಾಲೂ ದೇಶವಿದೇಶದ ಲಕ್ಷಾಂತರ ಶೃದ್ಧಾಳುಗಳು ದರ್ಶನ ಪಡೆಯುತ್ತಿದ್ದಾರೆ. ರಾಮ ಮಂದಿರ ನಿರ್ಮಾಣದ ನಂತರ ರಾಮ ರಾಜ್ಯದ ಕನಸ್ಸುಗಳು ಈಡೇರಿಸಲು ಸಂಕಲ್ಪ ತೊಡಲಾಗಿದೆ. ಹಾಗಾಗಿ ಅಯೋಧ್ಯೆಯ ರಾಮನನ್ನು ಮನೆಮನೆಗೂ ಮನಮನಕ್ಕೂ ತಲುಪಿಸುವ ಕರ್ಯ ಕೂಡ ಮಾಡಲಾಗುತ್ತಿದೆ. ರಾಮಮಂದಿರ ನಿರ್ಮಾಣ ಮಾಡಿದಂತೆಯೇ ರಾಮರಾಜ್ಯದ ಸ್ಥಾಪನೆ ಕೂಡ ಯಕಃಶ್ಚಿತ್ ಮಾಡಲಾಗುತ್ತಿದೆ. ರಾಮರಾಜ್ಯ ಆದರೆ ಭಾರತಕ್ಕೆ ವಿಶ್ವಗುರು ವಿಶ್ವನಾಯಕನ ಸ್ಥಾನ ಪ್ರಾಪ್ತವಾಗುತ್ತದೆ. ರಾಮರಾಜ್ಯದಲ್ಲಿ ಈಗ ನಡೆಯುತ್ತಿರುವ ಕೇಡುಗಳಿಗೆ ಆಸ್ಪದವಿರುವುದಿಲ್ಲ. ಅಲ್ಲಿ ಒಳ್ಳೆಯವರಿಗೆ ಪುರಸ್ಕಾರ ಕೆಟ್ಟವರಿಗೆ ತಿರಸ್ಕಾರವಿತ್ತದೆ. ಒಳ್ಳೆ ಕಾರ್ಯಗಳಿಗೆ ಪ್ರೋತ್ಸಾಹ ಕೆಟ್ಟ ಕಾರ್ಯಗಳಿಗೆ ಕಡಿವಾಣವಿರುತ್ತದೆ. ರಾಮರಾಜ್ಯದಲ್ಲಿ ದುಷ್ಟರಿಗೆ ನೆಲೆಬೆಲೆ ಇರುವುದಿಲ್ಲ. ಲವ್‌ಜಿಹಾದ್ ಗೋಹತ್ಯೆ ಮತಾಂತರ ಅತ್ಯಾಚಾರ ಭ್ರಷ್ಟಾಚಾರ ನಡೆಯೋದಿಲ್ಲ. ಹಾಗೂ ವರ್ಗ ವರ್ಣ ಜಾತಿ ಭೇದಭಾವವಿರುವುದಿಲ್ಲ.ಜೊತೆಗೆ ಸನಾತನ ಧರ್ಮದ ಮೇಲಿನ ದೌರ್ಜನ್ಯ ಇವಾವುವು ನಡೆಯುವುದಿಲ್ಲ. ಅದಕ್ಕೆ ಬದಲಾಗಿ ಸುಖ ಸಮೃದ್ಧಿ ಸಂಪತ್ತು ವಿಕಾಸ ಉದ್ಯೋಗ ವಿದ್ವತ್ತು ಕೌಶಲ್ಯ ಪರಾಕ್ರಮವುಳ್ಳ ರಾಷ್ಟ್ರ ಇದಾಗುತ್ತದೆ. ಜೊತೆಗೆ ಭಾರತದ ಜ್ಞಾನದ ತಂತ್ರಜ್ಞಾನದ ಅನಾವರಣವಾಗಿ ಇಲ್ಲಿನ ಉತ್ಪನ್ನಗಳು ವಿಶ್ವಮಾರುಕಟ್ಟೆಯಲ್ಲಿ ಬೆಲೆಬಾಳುವುವುಳ್ಳವಾಗುತ್ತವೆ ಎಂದರು.

ರಾಮರಾಜ್ಯದಲ್ಲಿ ಕೆಳವರ್ಗದ ಶಬರಿಸುಗ್ರಿವರಂತಹವರ ಆದರ್ಶವನ್ನು ಶ್ರೀರಾಮನೆ ಎತ್ತಿ ಹಿಡಿದಿದ್ದಾನೆ. ರಾಮರಾಜ್ಯದಲ್ಲಿ ಭೇದದಿಂದ ಅಳೆಯದೇ ಎಲ್ಲವನ್ನು ಭಾವದಿಂದ ಅಳೆಯಲಾಗುತ್ತದೆ. ನಾವು ಕೂಡ ರಾಮ ಭಕ್ತ ಹನುಮಂತನಂತೆ ಆದರ್ಶದಿಂದ ಒಳೆಯ ಕರ್ಯಗಳಲ್ಲಿ ತೊಡಗಿಸಿಕೊಂಡರೆ ರಾಮನ ಕೃಪಕಟಾಕ್ಷ ಖಂಡಿತ ದೊರಕುತ್ತದೆ ಎಂದರು.

ಶಿವಾಜಿ ಮಹಾರಾಜರು ಸನಾತನ ಧರ್ಮದ ಸಂರಕ್ಷಕನಾಗಿ ಅಪ್ರತಿಮ ಪರಾಕ್ರಮ ಹೊಂದಿದ್ದ. ಬಾಲ್ಯದಲ್ಲೇ ಶತ್ರುಗಳಿಗೆ ಸಿಂಹಸ್ವಪ್ನನಾಗಿದ್ದ. ಹಾಗೇಯೇ ಕಿತ್ತೂರುರಾಣಿ ಚೆನ್ನಮ್ಮಳು ಕೂಡ ಮಾದರಿಯಾದ ಪರಾಕ್ರಮ ಹೊಂದಿದ್ದಳು. ಅಂತಹ ವೀರರನ್ನು ನಮ್ಮ ಮಕ್ಕಳು ಬಾಲ್ಯದಿಂದಲೇ ಅನುಸರಿಸುವಂತಾಗಬೇಕೆಂದು ಹೇಳಿದರು. ಭಾರತದಲ್ಲಿ ಬಹುದಿವಸಗಳವರೆಗೆ ಸನಾತನ ವಿರೋಧಿ ಸರಕಾರ ರಾಜ್ಯವಾಳಿದ್ದರಿಂದ ಆ ಸರಕಾರಗಳಲ್ಲಿ ಹಿಂದುತ್ವದ ಬೆಳವಣಿಗೆ ತಡೆಯಲಾಗಿತ್ತು. ಹಿಂದುತ್ವದ ಬಗ್ಗೆ ಅಗೌರವ ಅನಾದರ ದೌರ್ಜನ್ಯವೆಸಗಲಾಗುತ್ತಿತ್ತು. ದೇಶಪ್ರೇಮಿಗಳಿಗೆ ಸನಾತನ ಸಂಸ್ಕೃತಿಪ್ರೇಮಿಗಳಿಗೆ ತುಳಿಯಲಾಗುತ್ತಿತ್ತು. ಬರ್ಬರವಾಗಿ ಹಲ್ಲೆ ಹತ್ಯೆ ಮಾಡಲಾಗುತ್ತಿತ್ತು. ಈಗ ಮೋದಿ ಯೋಗಿ ಸರಕಾರ ಬಂದ ಮೇಲೆ ಇದಕ್ಕೆಲ್ಲಾ ಕಡಿವಾಣ ಬಿದ್ದಿದೆ. ಈಟ್ ಕಾ ಜವಾಬ್ ಪತ್ಥರ್ ಸೆ, ಮತ್ತು ಭೇಡೆತೋ ಭೋಡೆಂಗೆ ನಹೀ ಹಾಗೂ ದೇಶದ್ರೋಹಿಯೊಂಕೋ ಉನಕಾ ದೇಶ ಔರ್ ಉನಕಾ ಘರ್ ಘುಸ್ ಕೇ ಮಾರ್‌ಕೇ ರಹಂಗೆ ಎನ್ನುವ ಮಾತುಗಳು ಈಗ ಶತಸಿದ್ಧವಾಗಿ ಕಾರ್ಯಾಚರಣೆಯಲ್ಲಿವೆ ಎಂದರು.

ಬೀದರನ ಸನಾತನಿಗಳು ಸ್ವತಂತ್ರಪೂರ್ವದಲ್ಲಿ ಮತ್ತು ನಂತರದಲ್ಲಿ ಇಲ್ಲಿ ಆಡಳಿತದಲ್ಲಿದ್ದ

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಏಪ್ರಿಲ್ 22.ರಂದು ಗೌರವ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಔರಾದ್:ಸಂವಿಧಾನಶಿಲ್ಪಿ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ರವರ 134 ನೇ ಜಯಂತಿಯ ಪ್ರಯುಕ್ತ ದಿ. 22–04–2025 ಕ್ಕೆ ನಡೆಯುವ ತಾಲೂಕು ಮಟ್ಟದ ಜಯಂತೋತ್ಸವದಲ್ಲಿ ಕರ್ನಾಟಕ ರಾಜ್ಯ ಸರಕಾರಿ ಎಸ್ಸಿ /ಎಸ್ಟಿ ನೌಕರರ ಸಮನ್ವಯ ಸಮಿತಿ ತಾಲೂಕು ಘಟಕ ಔರಾದ ವತಿಯಿಂದ ತಾಲೂಕಿನ ಹೆಮ್ಮೆಯ ಪ್ರತೀಕವಾದ ಈ ಕೆಳಕಂಡ ವಿದ್ಯಾರ್ಥಿಗಳಿಗೆ ವೇದಿಕೆಯಲ್ಲಿ ಸನ್ಮಾನಿಸಲಾಗುವುದು.

1) 2023–24 ನೇ ಸಾಲಿನಲ್ಲಿ ಎಂಬಿಬಿಎಸ್ ಮುಗಿಸಿದ (ಎಸ್ಸಿ/ ಎಸ್ಟಿ ವಿದ್ಯಾ ರ್ಥಿಗಳು).

2) 2023–24 ನೇ ಸಾಲಿನಲ್ಲಿ ಎಂಬಿಬಿಎಸ್ , ಜೆಇಇ, ಐಐಟಿ ಪ್ರವೇಶ ಪಡೆದ (ಎಸ್ಸಿ/ಎಸ್ಟಿ ವಿದ್ಯಾರ್ಥಿಗಳು)

3) ಐಎಎಸ್, ಐಪಿಎಸ್, ಕೆಎಎಸ್ ಹುದ್ದೆ ಪಡೆದ(ಎಸ್ಸಿ/ ಎಸ್ಟಿ ವಿದ್ಯಾ ರ್ಥಿಗಳು)

4) ಪ್ರತಿ ವರ್ಷದಂತೆ ಈ ವರ್ಷವು 2024–25 ನೇ ಸಾಲಿನಲ್ಲಿ ತಾಲೂಕಿಗೆ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು(ಸಾಮಾನ್ಯ)

ಅಂತಹ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಔರಾದ್ ತಾಲೂಕ ಅಧ್ಯಕ್ಷರು ಪಂಡರಿ ಆಡೆ ಮೊಬೈಲ್ ಸಂಖ್ಯೆ –9900395568 ಮತ್ತು ರಾಜಕುಮಾರ ಡೋಂಗ್ರೆ ಅಧ್ಯಕ್ಷರು ಕ ರಾ ಸ ಎಸ್ಸಿ/ಎಸ್ಟಿ ನೌಕರರ ಸಮನ್ವಯ ಸಮಿತಿ ತಾಲೂಕು ಘಟಕ ಔರಾದ ರವರ ಮೊಬೈಲ್ ಸಂಖ್ಯೆ –7899698189 ಗೆ ಏಪ್ರಿಲ್ 20 ರ ಒಳಗೆ ಸಂಪರ್ಕಿಸಿ ನೊಂದಣಿ ಮಾಡಿಸಿಕೊಳ್ಳುವಂತೆ ತಿಳಿಸಿದ್ದಾರೆ.

# ಉದ್ಯೋಗ ಮೇಳಕ್ಕೆ ಹೆಚ್ಚುವರಿ ಬಸ್ ಗಳ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 14–2025ರ ಏಪ್ರಿಲ್ 16 ರಂದು ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಆಯೋಜಿಸಿದ್ದು, ಈ ಉದ್ಯೋಗ ಮೇಳಕ್ಕೆ ಹೆಚ್ಚುವರಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಸುನೀಲ್‌ಕುಮಾರ ಚಂದರಗಿ ಅವರು ತಿಳಿಸಿದ್ದಾರೆ.

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ (ಕೆ.ಎಸ್.ಡಿ.ಸಿ) ಅವರು ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಯುವ ಸಮೃದ್ಧಿ ಸಮ್ಮೇಳನವನ್ನು 2025ರ ಏಪ್ರಿಲ್ 16ರ ಬುಧವಾರ ರಂದು ಕೆ.ಸಿ.ಟಿ ಕಾಲೇಜ್ ಕ್ಯಾಂಪಸ್ ಖಮರ್– ಉಲ್– ಇಸ್ಲಾಂ ಕಾಲೋನಿ ರಿಂಗ್ ರಸ್ತೆ ಕಲಬುರಗಿ–5815140 ಇಲ್ಲಿಗೆ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯ ವರೆಗೆ ಹಮ್ಮಿಕೊಳ್ಳಲಾಗಿದೆ.

ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಯಾದಗಿರಿ ಜಿಲ್ಲೆಯ ಯಾದಗಿರಿ, ಶಹಾಪೂರ, ಸುರಪುರ, ಗುರುಮಠಕಲ್ ಘಟಕಗಳಿಂದ 2025ರ ಏಪ್ರಿಲ್ 16 ರಂದು ಕಲಬುರಗಿಗೆ ಹೆಚ್ಚುವರಿ ಬಸ್ಸುಗಳ ಸೌಕರ್ಯ ಕಲ್ಪಿಸಲಾಗಿದೆ. ಉದ್ಯೋಗಾಕಾಂಕ್ಷಿಗಳು ಈ ಸಾರಿಗೆ ಸೌಕರ್ಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗ ಮೇಳಕ್ಕೆ ಹೆಚ್ಚುವರಿ ಸಾರಿಗೆ ಸೌಲಭ್ಯಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 14: 2025ರ ಏಪ್ರಿಲ್ 16 ರಂದು ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಆಯೋಜಿಸಿದ್ದು, ಈ ಉದ್ಯೋಗ ಮೇಳಕ್ಕೆ ಹೆಚ್ಚುವರಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಸುನೀಲ್‌ಕುಮಾರ ಚಂದರಗಿ ಅವರು ತಿಳಿಸಿದ್ದಾರೆ.

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ (ಕೆ.ಎಸ್.ಡಿ.ಸಿ) ಅವರು ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಯುವ ಸಮೃದ್ಧಿ ಸಮ್ಮೇಳನವನ್ನು 2025ರ ಏಪ್ರಿಲ್ 16ರ ಬುಧವಾರ ರಂದು ಕೆ.ಸಿ.ಟಿ ಕಾಲೇಜ್ ಕ್ಯಾಂಪಸ್ ಖಮರ್ ಉಲ್ ಇಸ್ಲಾಂ ಕಾಲೋನಿ ರಿಂಗ್ ರಸ್ತೆ ಕಲಬುರಗಿ–5815140 ಇಲ್ಲಿಗೆ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯ ವರೆಗೆ ಹಮ್ಮಿಕೊಳ್ಳಲಾಗಿದೆ. ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಯಾದಗಿರಿ ಜಿಲ್ಲೆಯ ಯಾದಗಿರಿ, ಶಹಾಪೂರ,ಸುರಪುರ,ಗುರುಮಠಕಲ್ ಘಟಕಗಳಿಂದ 2025ರ ಏಪ್ರಿಲ್ 16 ರಂದು ಕಲಬುರಗಿಗೆ ಹೆಚ್ಚುವರಿ ಸಾರಿಗೆ ಸೌಕರ್ಯ ಕಲ್ಪಿಸಲಾಗಿದೆ. ಉದ್ಯೋಗಾಕಾಂಕ್ಷಿಗಳಿಗೆ ಈ ಸಾರಿಗೆ ಸೌಕರ್ಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏ: 14– : ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಏಪ್ರಿಲ್ 14 ಹಾಗೂ ಏಪ್ರಿಲ್ 15 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು,ಈ ಕೆಳಗಿನ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಏಪ್ರಿಲ್ 14 ರಂದು ಸೋಮವಾರ ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಸಂವಿಧಾನ ಶಿಲ್ಪಿ,ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134 ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮಧ್ಯಾಹ್ನ 1.30 ಗಂಟೆಗೆ ಶಹಾಪೂರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

ಏಪ್ರಿಲ್ 15 ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಶಹಾಪೂರಗೆ ಆಗಮಿಸಿ, ಸಾರ್ವಜನಿಕ ಕುಂದುಕೊರತೆ ವಿಚಾರಣೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

# ಸಂವಿಧಾನ ಎಲ್ಲರಿಗೂ ಸಮಾನತೆ ಕಲ್ಪಿಸಿದೆ



ಮಲ್ಲಮ್ಮ ನುಡಿ ವಾರ್ತೆ

ಔರಾದ..ಭಾರತದ ಸಂವಿಧಾನ ಅತಿ ಕಟ್ಟಕಡೆಯ,ದುರ್ಬಲ ಹಾಗೂ ಮಹಿಳೆಯರಿಗೆ ಪ್ರಜಾಪ್ರಭುತ್ವದ ಮೂಲಕ ಸಮಾನತೆ ಕಲ್ಪಿಸಿದೆ ಎಂದು ಯರನಳ್ಳಿ ಸರ್ಕಾರಿ ಪ್ರೌಢಶಾಲೆಯ ಸಂಪನ್ಮೂಲ ಶಿಕ್ಷಕರಾದ ಶಾಮ ಸುಂದರ ಖಾನಾಪುರ ಹೇಳಿದರು.

ಸಂತಪೂರ ಸಿದ್ದರಾಮೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಪತ್ರಕರ್ತರು,ನ್ಯಾಯವಾದಿಗಳು, ಅರ್ಥಶಾಸ್ತ್ರಜ್ಞರು ಹಾಗೂ ಬರಹಗಾರರು ಇತ್ಯಾದಿ ಸೃಜನಶೀಲ ಜ್ಞಾನ ಸ್ವರೂಪಿ ಆಗಿದ್ದರು ಎಂದರು.

ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಮಾತನಾಡಿ ಭಾರತ ಸಂವಿಧಾನ ಬೃಹತ್ ಸಂವಿಧಾನ ಹಾಗೂ ಸರ್ವಕಾಲಕ್ಕೂ ಪ್ರಸ್ತುತವಾಗಿದೆ. ಸಂವಿಧಾನದ ಸೌಲಭ್ಯಗಳ ಉಪಯೋಗವನ್ನು ಪಡೆದು ಬಲಿಷ್ಠರಾಗಲು ಅವಕಾಶ ಕಲ್ಪಿಸಿದರು ಡಾ.ಬಿ.ಆರ್ ಅಂಬೇಡ್ಕರ್ ರವರಾಗಿದ್ದಾರೆ ಎಂದರು.

ಪ್ರತಿಭಾವಂತ ವಿದ್ಯಾರ್ಥಿನಿ ಪ್ರಿಯಾಂಕಾ ಪ್ರಕಾಶ ಮಾತನಾಡಿದರು. ಉಪನ್ಯಾಸಕರಾದ ಶಿವಪುತ್ರ ಧರಣಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಇದೇ ಸಂದರ್ಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಾದ ಪ್ರಿಯಾಂಕಾ ಪ್ರಕಾಶ, ಗೀತಾ ನರಸಪ್ಪ, ಭಾಗ್ಯವಂತಿ ಶರಣಯ್ಯ ರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಕ್ರೀಡಾ ವಸತಿ ಶಾಲೆ /ನಿಲಯಗಳ ಪ್ರವೇಶಕ್ಕೆ, ವಿಶೇಷ ಆಯ್ಕೆ ಶಿಬಿರಗಳು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಏಪ್ರಿಲ್ 14:ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದಾದ್ಯಂತ ಒಟ್ಟು 02 ಕ್ರೀಡಾ ವಸತಿ ಶಾಲೆ ಹಾಗೂ 32 ಕ್ರೀಡಾ ವಸತಿ ನಿಲಯಗಳನ್ನು ಹೊಂದಿದೆ. ಈ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ 5ನೇ ತರಗತಿ, 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ. ಹಂತದ ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದ್ದು ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ವೈಜ್ಞಾನಿಕ ಕ್ರೀಡಾ ತರಬೇತಿ, ಕ್ರೀಡಾ ಸಲಕರಣೆಗಳು, ಕ್ರೀಡಾ ಸಮವಸ್ತ್ರ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ದಿನಭತ್ಯೆ/ಪ್ರಯಾಣ ಭತ್ಯೆ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ತರಬೇತಿ ಪಡೆದ ಅನೇಕ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತರ–ರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ದಾಖಲಿಸಿರುತ್ತಾರೆ.

ಪ್ರಖ್ಯಾತ ಕ್ರೀಡಾಪಟುಗಳಾದ ಪ್ರಮೀಳಾ ಅಯ್ಯಪ್ಪ, ಜಿ.ಜಿ. ಶೋಭಾ, ಹೆಚ್.ಎಂ.ಜ್ಯೋತಿ, ಎಸ್.ಡಿ. ಈಶನ್, ಬಾಂಧವ್ಯ ಶಶಿಕಾಂತ್, ಮಲಪ್ರಭಾ ಜಾಧವ್, ಮೋಹಿತ್ ಹೆಚ್.ಎಸ್. ಪ್ರಿಯಾಂಕ ಪಿ. ಹಲವಾರು ನೂರಾರು ಕ್ರೀಡಾಪಟುಗಳು ಕ್ರೀಡಾ ವಸತಿ ಶಾಲೆ/ನಿಲಯದಿಂದ ಹೊರಹೊಮ್ಮಿದ ಕ್ರೀಡಾಪಟುಗಳಾಗಿರುತ್ತಾರೆ.

ಅಲ್ಲದೇ, ಈ ವಸತಿಶಾಲೆ/ನಿಲಯಗಳಲ್ಲಿ ತರಬೇತಿ ಪಡೆದ ನೂರಾರು ಕ್ರೀಡಾಪಟುಗಳು ತಮ್ಮ ಕ್ರೀಡಾ ಸಾಧನೆಯ ಹಿನ್ನೆಲೆಯಲ್ಲಿ ಪೊಲೀಸ್, ರೈಲ್ವೆ ಅರಣ್ಯ, ಆದಾಯ ತೆರಿಗೆ ಇಲಾಖೆ, ಮಹಾಲೇಖಪಾಲರ ಕಛೇರಿ, ಬ್ಯಾಂಕ್‌ಗಳು ಹಾಗೂ ಇನ್ನಿತರೆ ಸರ್ಕಾರಿ ಇಲಾಖೆಗಳಲ್ಲಿ ಉದ್ಯೋಗವನ್ನು ಪಡೆದು, ಜೀವನವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿರುತ್ತಾರೆ.

ಈ ಕ್ರೀಡಾ ವಸತಿ ಶಾಲೆ / ನಿಲಯಗಳಿಗೆ ಪ್ರತೀ ವರ್ಷ ಆಯ್ಕೆ ಶಿಬಿರಗಳ ಮೂಲಕ ಕ್ರೀಡಾಪಟುಗಳ ಆಯ್ಕೆ ಕೈಗೊಳ್ಳಲಾಗುತ್ತಿದೆ. ಗ್ರಾಮೀಣ ಭಾಗದ ಬಾಲಕ ಮತ್ತು ಬಾಲಕಿಯರಿಗೆ ಮತ್ತೊಂದು ವಿಶೇಷ ಅವಕಾಶವನ್ನು ನೀಡುವ ದೃಷ್ಟಿಯಿಂದ 2025–26 ನೇ ಸಾಲಿನಲ್ಲಿ ವಿಶೇಷ ಆಯ್ಕೆ ಶಿಬಿರವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.

ಏಪ್ರಿಲ್ 15 ರಂದು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಫೆನ್ಸಿಂಗ್, ಆರ್ಚರಿ ಹಾಗೂ ಧಾರವಾಡದ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್ ವಾಲಿಬಾಲ್, ಸೈಕ್ಲಿಂಗ್, ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಕುಸ್ತಿ ಮತ್ತು ಕಬ್ಬಡಿ, ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ಪುಟ್ಬಾಲ್, ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ, ಹಾಕಿ, ತುಮಕೂರಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಮ್ನಾಸ್ಟಿಕ್ಸ್, ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಜೂಡೋ ಆಯ್ಕೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

ಅದೇ ರೀತಿ ಏಪ್ರಿಲ್ 17 ರಂದು ಕಲಬುರಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಉಡುಪಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಕಬಡ್ಡಿ, ಬೀದರ್ ನ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್, ಬಳ್ಳಾರಿಯ ಪುಟ್ಬಾಲ್ ಕ್ರೀಡಾಂಗಣದಲ್ಲಿ ಪುಟ್ಬಾಲ್, ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ, ಚಿಕ್ಕಮಗಳೂರಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜುಡೋ ತರಬೇತಿ ಆಯ್ಕೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

ಆಯ್ಕೆ ನಿಯಮಗಳು : ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಯಾವುದೇ ಸ್ಥಳದ ಆಯ್ಕೆ ಶಿಬಿರದಲ್ಲಿ ಭಾಗವಹಿಸಲು ಮುಕ್ತ ಅವಕಾಶವಿದೆ. 2025–26 ನೇ ಸಾಲಿನ ಪ್ರವೇಶಕ್ಕೆ ಈಗಾಗಲೇ ಆಯೋಜಿಸಲಾದ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸಬಹುದು. ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗಿಯಾಗಿರುವ ಆದರೆ, ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗದ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳಲು ಉದ್ದೇಶಿಸಿದಲ್ಲಿ ಈ ಬಗ್ಗೆ ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ದಾಖಲಿಸಿ, ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದು. ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಈಗಾಗಲೇ ಆಯ್ಕೆಯಾಗಿರುವವರು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸುವ ಅವಶ್ಯಕತೆ ಇಲ್ಲ.

8 ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್–2025 ಕ್ಕೆ ಅನ್ವಯವಾಗುವಂತೆ 14 ವರ್ಷ ವಯಸ್ಸಿನ ಒಳಗೆ ಇರಬೇಕು. ಪ್ರಥಮ ಪಿ.ಯು.ಸಿ. ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್–2025 ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸಿನ ಒಳಗೆ ಇರಬೇಕು.

ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಆಯಾ ಸ್ಥಳಗಳಲ್ಲಿ ಬೆಳಿಗ್ಗೆ 9–00 ಗಂಟೆಗೆ ವರದಿ ಮಾಡಿಕೊಳ್ಳತಕ್ಕದ್ದು.

ವಾಲಿಬಾಲ್ ಮತ್ತು ಬಾಸ್ಕೆಟ್‌ಬಾಲ್ ಹೊರತುಪಡಿಸಿ, ಇತರೆ ಕ್ರೀಡೆಗಳಲ್ಲಿ ಅಸಾಧಾರಣ ಸಾಧನೆ ತೋರುವ ಕ್ರೀಡಾಪಟುಗಳಿಗೆ ಎತ್ತರದ (ಊಜುಝುಣ) ಅರ್ಹತಾ ಮಾನದಂಡದಲ್ಲಿ ಸಡಿಲಿಕೆ ನೀಡಲಾಗುವುದು.

ಈ ಶಿಬಿರಗಳಲ್ಲಿ ಭಾಗವಹಿಸಿ ಆಯ್ಕೆಯಾದ ಕ್ರೀಡಾಪಟುಗಳು ರಾಜ್ಯ ಮಟ್ಟದ ಆಯ್ಕೆ ತರಬೇತಿ ಶಿಬಿರಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ, ಅರ್ಹರಾದಲ್ಲಿ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ಪ್ರವೇಶ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಯುವ ಸಹಾಯವಾಣಿ ಸಂಖ್ಯೆ:155265 ಅಥವಾ ನಿಮ್ಮ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ

# ಡಾ. ಬಿ. ಆರ್. ಬಾಬಾಸಾಹೇಬ ಅಂಬೇಡ್ಕರ್ ಅವರ 134ನೆಯ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ; ನಗರದ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಡಾ. ಬಿ. ಆರ್. ಬಾಬಾಸಾಹೇಬ ಅಂಬೇಡ್ಕರ್ ಅವರ 134ನೆಯ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಮೊದಲಿಗೆ ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ಮೇಜರ್ ಪಿ. ವಿಠಲ ರೆಡ್ಡಿಯವರು ಅಂಬೇಡ್ಕರರು ಭಾರತೀಯ ಇತಿಹಾಸದಲ್ಲಿ ವಿಶಿಷ್ಟಸ್ಥಾನ ಪಡೆದ ಮಹಾನ ಪುರುಷ. ಸಮಾಜ ಸುಧಾರಕ, ಅರ್ಥಶಾಸ್ತ್ರಜ್ಞ , ಕಾನೂನು ಪಂಡಿತ, ಮತ್ತು ಭಾರತೀಯ ಸಂವಿಧಾನದ ಶಿಲ್ಪಿಯಾಗಿದ್ದಾರೆ. ಜಾತಿ ವ್ಯವಸ್ಥೆಯ ವಿರುದ್ಧ ಹೋರಾಟ ಮಾಡುವ ಮೂಲಕ ಅವರು ಭಾರತದ ತಳಮಟ್ಟದ ಜನರಿಗೆ ಮಾನವೀಯ ಹಕ್ಕುಗಳನ್ನು ನೀಡಿದ ಮಹಾನ್ ನಾಯಕ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಉಪ ಪ್ರಾಚಾರ್ಯ ಶ್ರೀ ಅನಿಲಕುಮಾರ ಅಣದೂರೆ ಅವರು ಡಾ. ಭೀಮರಾವ್ ರಾಮಜಿ ಅಂಬೇಡ್ಕರ್ ಅವರು 1891ರ ಏಪ್ರಿಲ್ 14ರಂದು ಮಹಾರಾಷ್ಟ್ರದ ಮೌ ಪಟ್ಟಣದಲ್ಲಿ ಜನಿಸಿದರು. ಅವರು ತನ್ನ ಬಾಲ್ಯದಲ್ಲಿ ಅನೇಕ ಜಾತಿಭೇದದ ಅವಮಾನಗಳನ್ನು ಅನುಭವಿಸಿದರು. ಆದರೂ ಅವರು ವಿದ್ಯಾಭ್ಯಾಸದಲ್ಲಿ ಪ್ರಗತಿಪರರಾಗಿದ್ದರು. ಅವರು ಬಾಂಬೆ ವಿಶ್ವವಿದ್ಯಾಲಯದಿಂದ ಪದವಿ ಪಡೆದನಂತರ, ಅಮೇರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯ ಹಾಗೂ ಇಂಗ್ಲೆಂಡಿನ ಲಂಡನ್ ಶಾಲಾ ಆಫ್ ಎಕಾನಾಮಿಕ್ಸ್‌ನಲ್ಲಿ ಉನ್ನತ ಶಿಕ್ಷಣ ಪಡೆದು ಡಾಕ್ಟರೇಟ್ ಗಳಿಸಿದರು. ಸಮಾಜದಲ್ಲಿ ಅಸಮಾನತೆ, ಅನಕ್ಷರತೆ ಮತ್ತು ಜಾತಿಭೇದದ ವಿರುದ್ಧ ಗಟ್ಟಿಯಾಗಿ ಹೋರಾಟ ನಡೆಸಿದರು. ಅಸ್ಪೃಶ್ಯರೆಂದು ಪರಿಗಣಿಸಲ್ಪಟ್ಟವರ ಹಕ್ಕುಗಳಿಗಾಗಿ ಧ್ವನಿ ಎತ್ತಿದರು.

ಎನ್.ಎಸ್ ಎಸ್ ಅಧಿಕಾರಿ ಡಾ. ದೀಪಾ ರಾಗಾ ಅವರು ಮಾತನಾಡಿ ಸ್ವಾತಂತ್ರ್ಯ ನಂತರ, ಅಂಬೇಡ್ಕರ್ ಅವರನ್ನು ಭಾರತದ ಪ್ರಥಮ ಕಾನೂನು ಸಚಿವರನ್ನಾಗಿ ನೇಮಿಸಲಾಯಿತು. ಅವರು ಸಂವಿಧಾನ ಸಭೆಯ ಅಧ್ಯಕ್ಷರಾಗಿ ಭಾರತೀಯ ಸಂವಿಧಾನವನ್ನು ರಚಿಸಿದರು. ಈ ಸಂವಿಧಾನವು ವಿಶ್ವದ ಅತ್ಯಂತ ದೊಡ್ಡ ಮತ್ತು ಸಮಗ್ರವಾದ ಸಂವಿಧಾನವಾಗಿದ್ದು, ಎಲ್ಲರಿಗೂ ಸಮಾನ ಹಕ್ಕುಗಳನ್ನು, ನ್ಯಾಯವನ್ನು ಮತ್ತು ಸ್ವಾತಂತ್ರ್ಯವನ್ನು ಖಾತ್ರಿಪಡಿಸುತ್ತದೆ ಎಂದು ಹೇಳಿದರು.

ಡಾ. ಸೂರ್ಯವಂಶಿ ಪೂಜಾ ಸ್ವಾಗತಿಸಿದರೆ, ಶ್ರೀ ಮಾರುತಿ. ಬಿ. ವಂದಿಸಿದರು. ಕಾರ್ಯಕ್ರಮವನ್ನು ಶ್ರೀ ಬಸವರಾಜ ಬಿರಾದಾರ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಡಾ. ಶ್ವೇತಾ ಮೋಹನ ನಾಯಕ, ಡಾ. ಲಕ್ಷ್ಮಿ ವಿಶ್ವನಾಥ, ಕಚೇರಿ ಅಧೀಕ್ಷಕರಾದ ಶ್ರೀ ಸುಜಿತಕುಮಾರ ಪಿ., ನೂರ್ ಪಾಶಾ, ,ಸಚಿನ ಶೆಟಕರ್, ಶೇಶೇರಾವ್ ಜಾಧವ, ವಿಲಾಸ ರಾಥೋಡ್ ಮತ್ತು ಬೋಧಕೇತರ ಸಿಬ್ಬಂದಿ ಉಪ್ಥಿತರಿದ್ದರು.

## ನಾಳೆ ಕಲಬುರಗಿಯಲ್ಲಿ "ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ": ಬಳ್ಳಾರಿಯಿಂದ ಹೆಚ್ಚುವರಿ ಬಸ್ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.14–ಇದೇ ಏಪ್ರಿಲ್ 16 ರಂದು ಕಲಬುರಗಿಯಲ್ಲಿ "ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ" ಆಯೋಜಿಸಿದ್ದು, ಈ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವ ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಬಳ್ಳಾರಿಯಿಂದ ಏ.15 ರಂದು ಜನದಟ್ಟಣೆಯ ಮೇರೆಗೆ ಕಕರಸಾನಿ ಬಳ್ಳಾರಿ ವಿಭಾಗದಿಂದ ಹೆಚ್ಚುವರಿ ಸಾರಿಗೆ ಸೌಕರ್ಯ ಒದಗಿಸಲಾಗುತ್ತಿದೆ.

ಈ ಹೆಚ್ಚುವರಿ ಸಾರಿಗೆ ಸೇವೆಯನ್ನು ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವ ಉದ್ಯೋಗಾಕಾಂಕ್ಷಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್ ಬಾನ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಪತ್ರಕರ್ತರು ಸಹಕಾರಿ ಕ್ಷೇತ್ರದಲ್ಲಿ ಪ್ರಗತಿ ಹೊಂದಲಿ ಮಲ್ಲಪ್ಪ ಸಂಕಿನ್ ಕರೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಸಹಕಾರಿ ಕ್ಷೇತ್ರದಲ್ಲಿ ಪತ್ರಕರ್ತರು ಅಭಿವೃದ್ಧಿ ಹೊಂದುವ ಮೂಲಕ ಆರ್ಥಿಕವಾಗಿ ಸಮಾಜದಲ್ಲಿ ಮುಖ್ಯ ವಾಹಿನಿಗೆ ಬರುವುದು ತುಂಬ ಅಗತ್ಯವಿದೆ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಶಹಾಪುರದ ಪ್ರವಾಸಿ ಮಂದಿರದಲ್ಲಿ ನಡೆದ ತಾಲ್ಲೂಕು ಪತ್ರಕರ್ತರ ಸಭೆಯಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ನೂರಾರು ಸಂಖ್ಯೆಯಲ್ಲಿ ಪತ್ರಕರ್ತರು ಇದ್ದಾರೆ. ಪತ್ರಕರ್ತರ ಸಹಕಾರ ಸಂಘ ಸ್ಥಾಪಿಸಬೇಕು ಎಂಬ ಕನಸು ಕಳೆದ ಒಂದೂವರೆ ದಶಕದಿಂದಲೂ ಇತ್ತು. ಇದೀಗ ಅದು ಈಡೇರುವ ಕಾಲ ಬಂದಿದೆ ಎಂದು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಹಕಾರ ಸಂಘ ಸ್ಥಾಪಿಸಲಾಗುತ್ತದೆ. ಇದಕ್ಕಾಗಿ ಸಂಬಂಧಪಟ್ಟ ಇಲಾಖೆಯಿಂದಲೂ ಸಹ ಅನುಮೋದನೆ ಪಡೆಯಲಾಗಿದೆ. ಹೀಗಾಗಿ ಪ್ರತಿಯೊಬ್ಬ ಪತ್ರಕರ್ತರು ಕೂಎ ಶೇರು ಹಾಕುವುದು ಅಗತ್ಯವಿದೆ. ಇದರಿಂದಾಗಿ ಸಾಕಷ್ಟು ಅನುಕೂಲವಾಗಲಿದೆ ಎಂದರು ಹೇಳಿದರು.

ಪತ್ರಕರ್ತರು ಸುದ್ದಿಯ ಒತ್ತಡದ ನಡುವೆ ನಿತ್ಯ ಕೆಲಸ ಮಾಡುತ್ತಾರೆ. ಆದರೆ ಆರ್ಥಿಕ ಅಭಿವೃದ್ಧಿ ಕಡೆಗೆ ಅವರು ಅಷ್ಟೊಂದು ಗಮನ ಹರಿಸುವುದಿಲ್ಲ. ಇದನ್ನು ಮನಗಂಡು ಸಹಕಾರ ಸಂಘ ರಚನೆ ಮಾಡಲಾಗುತ್ತದೆ. ಇದು ಪತ್ರಕರ್ತರ ಪಾಲಿಗೆ ಸಂಜೀವಿನಿಯಾಗಲಿದೆ ಎಂದು ಹೇಳಿದರು.

ಸಹಕಾರ ಸಂಘದಿಂದ ಮುಂದಿನ ದಿನಗಳಲ್ಲಿ ಸರಕಾರದಿಂದಲೂ ಕೂಡ ಅಗತ್ಯವಾದ ಸೌಲಭ್ಯಗಳನ್ನು ಪಡೆಯಲಾಗುವುದು. ಒಂದು ಅತ್ಯುತ್ತಮವಾದ ಸಹಕಾರ ಸಂಘ ಮಾಡುವ ಮೂಲಕ ಎಲ್ಲರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ಇರುವ ಎಲ್ಲ ಪತ್ರಕರ್ತರು ಮತ್ತು ಅವರ ಕುಟುಂಬ ವರ್ಗಕ್ಕೆ ಸಹಕಾರ ಸಂಘವು ಮುಂದಿನ ದಿನಗಳಲ್ಲಿ ವರದಾನವಾಗಿ ಪರಿಣಮಿಸಲಿದೆ ಎಂದು ಹೇಳಿದರು.

ಇದೇ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ರಾಜ್ಯ ಮಟ್ಟದ ದತ್ತಿ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ಟಿ.ನಾಗೇಂದ್ರ ಅವರನ್ನು ಸನ್ಮಾನಿಸಲಾಯಿತು.

ಸಂಘದ ರಾಜ್ಯ ಪರಿಷತ್ತಿನ ಸದಸ್ಯ ರಾಘವೇಂದ್ರ ಕಾಮನಟಗಿ, ತಾಲ್ಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಮುದನೂರ ಅಧ್ಯಕ್ಷತೆ ವಹಿಸಿದ್ದರು. ಪತ್ರಕರ್ತ ಶರಣು ಗದ್ದುಗೆ ಸಾನ್ನಿಧ್ಯ ವಹಿಸಿದ್ದರು. ತಾಲ್ಲೂಕಿನ ಎಲ್ಲ ಪತ್ರಕರ್ತರು ಉಪಸ್ಥಿತಿ ಇದ್ದರು.

ಪತ್ರಕರ್ತ ವಿಶಾಲ್ ದೋರನಹಳ್ಳಿ ಸ್ವಾಗತಿಸಿದರು. ಪತ್ರಕರ್ತ ರಾಘವೇಂದ್ರ ಹಾರಣಗೇರಾ ವಂದಿಸಿದರು.

## ಜಿ.ಪಂ. ಕಚೇರಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರವರ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.14–ಸಂವಿಧಾನ ಶಿಲ್ಪಿ, ಭಾರತ ರತ್ನ, ಡಾ. ಬಿ.ಆರ್. ಅಂಬೇಡ್ಕರ್‌ರವರ 134ನೇ ಜಯಂತೋತ್ಸವ ಅಂಗವಾಗಿ ಕಲಬುರಗಿ ಜಿಲ್ಲಾ ಪಂಚಾಯತ ಕಚೇರಿಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಪಿಡಿಡಿಆರ್‌ಡಿಎ ರಾದ ಜಗದೇವಪ್ಪ ಬಿ, ಸಿಪಿಓ. ಅವರಾದ ಶರಣಯ್ಯ ಮಠಪತಿ, ಉಪ ನಿರ್ದೇಶಕ (ಯೋಜನೆ) ರಾದ ಮಧುಮತಿ, ಸಹಾಯಕ ಕಾರ್ಯದರ್ಶಿ ವೀರೇಂದ್ರ, ಲೆಕ್ಕಾಧಿಕಾರಿ ಪವನಕುಮಾರ, ಎಪಿಓ ರಾದ ವಿಜಯಲಕ್ಷ್ಮಿ, ಜಿಲ್ಲಾ ಪಂಚಾಯತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಂವಿಧಾನ ಶಿಲ್ಪಿ ಡಾ,ಬಿ,ಆರ್,ಅಂಬೇಡ್ಕರವರ 134 ನೇಯ ಜಯಂತೋತ್ಸವ ಅದ್ದೂರಿ ಸಂಭ್ರಮದ ಮೇರವಣಿಗೆ!!




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಗೊಂಬೆಕುಣಿತ,ಕಣಿ ಹಲಿಗಿಕುಣಿತ, ಹಾಗೂ ನಾನಾ ವೇಶಭೂಷಣಗಳಿಂದ ಮಕ್ಕಳ ಕೊಲಾಟ, ಡೊಳ್ಳು ಕುಣಿತ, ಹಲಿಗೆ ನಿನಾದಗಳ ಮಧ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಯುದ್ದಕ್ಕೂ ವಿಶ್ವರತ್ನ ಡಾ,ಬಾಬಾಸಾಹೇಬ ಅಂಬೇಡ್ಕರವರ ಪ್ರತಿಮೆಯ ಭವ್ಯ ಮೇರವಣಿಗೆಯಲ್ಲಿ, ಡಾ,ಬಿ,ಆರ್,ಅಂಬೇಡ್ಕರವರ 134 ನೆಯ ಜಯಂತೋತ್ಸವ ಸಂಭ್ರಮದ ಸಡಗರಗಳಿಂದ ಜರುಗಿತು, ಬುದ್ದನಗರದ ಡಾ, ಬಾಬಾಸಾಹೇಬ ಅಂಬೇಡ್ಕರವರ ಪ್ರತಿಮೆಯಿಂದ ಸಾಗಿದ ಮೇರವಣಿಗೆ ಹಳೆ ಬಸ್ ನಿಲ್ದಾಣ ಮತ್ತು ಬಸವೇಶ್ವರ ವೃತ್ತದಿಂದ ಸಿಪಿಎಸ್, ಶಾಲಾ ಮೈದಾನದವರೆಗೂ ಸಾಗಿತ್ತು, ಸಂಧರ್ಭದಲ್ಲಿ ಅನೇಕ ಗ್ರಾಮಗಳಿಂದ ದಲಿತಪರ ಸಂಘಟನೆಗಳು, ಕಾರ್ಯಕರ್ತರು ಪ್ರಗತಿಪರ ಚಿಂತಕರು, ಮಹಿಳೆಯರು ಮಕ್ಕಳು ಯುವಕರು ಆಗಮಿಸಿ ಮೇರವಣಿಗೆಯಲ್ಲಿ ತಮ್ಮ ಕಲೆಯನ್ನು ಪ್ರದರ್ಶನ ಮಾಡಿದರು, ಈ ಕಾರ್ಯಕ್ರಮಕ್ಕೆ ಶಹಾಪುರ ನಗರ ಠಾಣಾ ಪಿ,ಐ ಸಾಹೇಬಗೌಡ ಪಾಟೀಲ್ ನೇತೃತ್ವದಲ್ಲಿ ಸೂಕ್ತ ಪೋಲಿಸ್ ಬಂದೋಬಸ್ತ ಕೈಗೊಂಡಿದ್ದರು,

# ಕ್ರೀಡಾ ವಸತಿ ಶಾಲೆ /ನಿಲಯಗಳ ಪ್ರವೇಶಕ್ಕೆ, ವಿಶೇಷ ಆಯ್ಕೆ ಶಿಬಿರಗಳು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.14–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದಾದ್ಯಂತ ಒಟ್ಟು 02 ಕ್ರೀಡಾ ವಸತಿ ಶಾಲೆ ಹಾಗೂ 32 ಕ್ರೀಡಾ ವಸತಿ ನಿಲಯಗಳನ್ನು ಹೊಂದಿದೆ. ಈ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ 5ನೇ ತರಗತಿ, 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ. ಹಂತದ ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದ್ದು ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ವೈಜ್ಞಾನಿಕ ಕ್ರೀಡಾ ತರಬೇತಿ, ಕ್ರೀಡಾ ಸಲಕರಣೆಗಳು, ಕ್ರೀಡಾ ಸಮವಸ್ತ್ರ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ದಿನಭತ್ಯೆ/ಪ್ರಯಾಣ ಭತ್ಯೆ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ತರಬೇತಿ ಪಡೆದ ಅನೇಕ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತರ–ರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ದಾಖಲಿಸಿರುತ್ತಾರೆ.

ಪ್ರಖ್ಯಾತ ಕ್ರೀಡಾಪಟುಗಳಾದ ಪ್ರಮೀಳಾ ಅಯ್ಯಪ್ಪ, ಜಿ.ಜಿ. ಶೋಭಾ, ಹೆಚ್.ಎಂ.ಜ್ಯೋತಿ, ಎಸ್.ಡಿ. ಈಶನ್, ಬಾಂಧವ್ಯ ಶಶಿಕಾಂತ್, ಮಲಪ್ರಭಾ ಜಾಧವ್, ಮೋಹಿತ್ ಹೆಚ್.ಎಸ್.ಪ್ರಿಯಾಂಕ ಪಿ. ಹಲವಾರು ನೂರಾರು ಕ್ರೀಡಾಪಟುಗಳು ಕ್ರೀಡಾ ವಸತಿ ಶಾಲೆ/ನಿಲಯದಿಂದ ಹೊರಹೊಮ್ಮಿದ ಕ್ರೀಡಾಪಟುಗಳಾಗಿರುತ್ತಾರೆ.

ಅಲ್ಲದೇ, ಈ ವಸತಿಶಾಲೆ/ನಿಲಯಗಳಲ್ಲಿ ತರಬೇತಿ ಪಡೆದ ನೂರಾರು ಕ್ರೀಡಾಪಟುಗಳು ತಮ್ಮ ಕ್ರೀಡಾ ಸಾಧನೆಯ ಹಿನ್ನೆಲೆಯಲ್ಲಿ ಪೊಲೀಸ್, ರೈಲ್ವೆ ಅರಣ್ಯ, ಆದಾಯ ತೆರಿಗೆ ಇಲಾಖೆ, ಮಹಾಲೇಖಪಾಲರ ಕಛೇರಿ, ಬ್ಯಾಂಕ್‌ಗಳು ಹಾಗೂ ಇನ್ನಿತರೆ ಸರ್ಕಾರಿ ಇಲಾಖೆಗಳಲ್ಲಿ ಉದ್ಯೋಗವನ್ನು ಪಡೆದು, ಜೀವನವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿರುತ್ತಾರೆ.

ಈ ಕ್ರೀಡಾ ವಸತಿ ಶಾಲೆ / ನಿಲಯಗಳಿಗೆ ಪ್ರತೀ ವರ್ಷ ಆಯ್ಕೆ ಶಿಬಿರಗಳ ಮೂಲಕ ಕ್ರೀಡಾಪಟುಗಳ ಆಯ್ಕೆ ಕೈಗೊಳ್ಳಲಾಗುತ್ತಿದೆ. ಗ್ರಾಮೀಣ ಭಾಗದ ಬಾಲಕ ಮತ್ತು ಬಾಲಕಿಯರಿಗೆ ಮತ್ತೊಂದು ವಿಶೇಷ ಅವಕಾಶವನ್ನು ನೀಡುವ ದೃಷ್ಟಿಯಿಂದ 2025–26 ನೇ ಸಾಲಿನಲ್ಲಿ ವಿಶೇಷ ಆಯ್ಕೆ ಶಿಬಿರವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.

ಏಪ್ರಿಲ್ 15 ರಂದು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಫೆನ್ಸಿಂಗ್, ಆರ್ಚರಿ ಹಾಗೂ ಧಾರವಾಡದ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್ ವಾಲಿಬಾಲ್, ಸೈಕ್ಲಿಂಗ್, ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಕುಸ್ತಿ ಮತ್ತು ಕಬ್ಬಡಿ, ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ಫುಟ್ಬಾಲ್, ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ, ಹಾಕಿ, ತುಮಕೂರಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಮ್ನಾಸ್ಟಿಕ್ಸ್, ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಜೂಡೋ ಆಯ್ಕೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಏಪ್ರಿಲ್ 17 ರಂದು ಕಲಬುರಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿ–ಕ್ಸ್, ವಾಲಿಬಾಲ್, ಉಡುಪಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಕಬಡ್ಡಿ, ಬೀದರ್‌ನ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್, ಬಳ್ಳಾರಿಯ ಫುಟ್ಬಾಲ್ ಕ್ರೀಡಾಂಗಣದಲ್ಲಿ ಫುಟ್ಬಾಲ್, ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ, ಚಿಕ್ಕಮಗಳೂರಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜುಡೋ ತರಬೇತಿ ಆಯ್ಕೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

*ಆಯ್ಕೆ ನಿಯಮಗಳು:*

ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಯಾವುದೇ ಸ್ಥಳದ ಆಯ್ಕೆ ಶಿಬಿರದಲ್ಲಿ ಭಾಗವಹಿಸಲು ಮುಕ್ತ ಅವಕಾಶವಿದೆ. 2025–26 ನೇ ಸಾಲಿನ ಪ್ರವೇಶಕ್ಕೆ ಈಗಾಗಲೇ ಆಯೋಜಿಸಲಾದ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸಬಹುದು.

ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗಿಯಾಗಿರುವ ಆದರೆ, ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗದ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳಲು ಉದ್ದೇಶಿಸಿದಲ್ಲಿ ಈ ಬಗ್ಗೆ ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ದಾಖಲಿಸಿ, ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದು.

ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಈಗಾಗಲೇ ಆಯ್ಕೆಯಾಗಿರುವವರು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸುವ ಅವಶ್ಯಕತೆ ಇಲ್ಲ.

8 ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್–2025 ಕ್ಕೆ ಅನ್ವಯವಾಗುವಂತೆ 14 ವರ್ಷ ವಯಸ್ಸಿನ ಒಳಗೆ ಇರಬೇಕು. ಪ್ರಥಮ ಪಿ.ಯು.ಸಿ. ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್–2025 ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸಿನ ಒಳಗೆ ಇರಬೇಕು.

ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಆಯಾ ಸ್ಥಳಗಳಲ್ಲಿ ಬೆಳಿಗ್ಗೆ 9 ಗಂಟೆಗೆ ವರದಿ ಮಾಡಿಕೊಳ್ಳತಕ್ಕದ್ದು. ವಾಲಿಬಾಲ್ ಮತ್ತು ಬಾಸ್ಕೆಟ್‌ಬಾಲ್ ಹೊರತುಪಡಿಸಿ, ಇತರೆ ಕ್ರೀಡೆಗಳಲ್ಲಿ ಅಸಾಧಾರಣ ಸಾಧನೆ ತೋರುವ ಕ್ರೀಡಾಪಟುಗಳಿಗೆ ಎತ್ತರದ (ಊಜುರುಣ) ಅರ್ಹತಾ ಮಾನದಂಡದಲ್ಲಿ ಸಡಿಲಿಕೆ ನೀಡಲಾಗುವುದು. ಈ ಶಿಬಿರಗಳಲ್ಲಿ ಭಾಗವಹಿಸಿ ಆಯ್ಕೆಯಾದ ಕ್ರೀಡಾಪಟುಗಳು ರಾಜ್ಯ ಮಟ್ಟದ ಆಯ್ಕೆ ತರಬೇತಿ ಶಿಬಿರಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ, ಅರ್ಹರಾದಲ್ಲಿ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ಪ್ರವೇಶ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಯುವ ಸಹಾಯವಾಣಿ ಸಂಖ್ಯೆ:155265 ಅಥವಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ವಕ್ಫ್ ತಿದ್ದುಪಡಿ ಹಿಂಪಡೆಯದೆ ಹೋದರೆ ರಾಜ್ಯದಂತ ಹೋರಾಟ ಸೈಯದ್ ಖಾದ್ರಿ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ವಕ್ಫ್ ತಿದ್ದುಪಡಿ ಮಾಡಿರುವುದನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿ ಮುಸ್ಲಿಂ ಒಕ್ಕೂಟದ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿದರು. ನಗರದಲ್ಲಿ ಬೃಹತ್ ಸಂಖ್ಯೆಯಲ್ಲಿ ಜಮಾಯಿಸಿದ್ದ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಸಂಘಟನೆಯ ಮುಖಂಡರಾದ ಕೇಂದ್ರದ ಸರ್ಕಾರದ ವಿರುದ್ಧ ಹಾಗೂ ನರೇಂದ್ರಮೋದಿ ಅವರ ವಿರುದ್ಧ ಈ ರೀತಿ ಮುಸ್ಲಿಂ ಬಾಂಧವರಿಗೆ ತಮ್ಮ ಹಕ್ಕುಗಳನ್ನು ಕಿತ್ತಿಕೊಳ್ಳುವ ಹಕ್ಕು ಇವರಿಗೆನಿದೆ ಈ ರೀತಿ ಮುಸ್ಲಿಮರಿಗೆ ಅನ್ಯಾಯ ಮಾಡುತ್ತಿರುವ ಅಮಿತ್ ಶಾ ಅವರಿಗೆ ತಕ್ಕ ಪಾಠ ಕಲಿಸುತ್ತೇವೆ, ಕೂಡಲೇ ಇದನ್ನು ರದ್ದು ಮಾಡದೇ ಹೋದರೆ ರಾಜ್ಯದ್ಯಂತ ಹೋರಾಟ ಮಾಡುವುದಾಗಿ ಸೈಯದ ಖಾದ್ರಿ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ಸಂದೇಶವನ್ನು ನೀಡಿದರು.

ಹುಸೇನ ಖಾಲೀದ ಮಾತನಾಡಿ, ವಕ್ಫ್ ಸಂಪತ್ತಿನ ಭದ್ರತೆ ಮತ್ತು ಅದರ ಪ್ರಮಾಣಿಕ ನಿರ್ವಹಣೆಗೆ ವಿರೋಧವಲ್ಲ ಆದರೆ ತಿದ್ದುಪಡಿ ವಾಸ್ತವವಾಗಿ ವಕ್ಫ ಸಂಪತ್ತು ಮೇಲಿನ ಸಮುದಾಯದ ಹಕ್ಕನ್ನು ಕುಗ್ಗಿಸುತ್ತಿದೆ. ವಕ್ಸ್ ತಿದ್ದುಪಡಿ ಮಸೂದೆ–2024 ಅಲ್ಪಸಂಖ್ಯಾತರಿಗೆ ಸಂವಿಧಾನವು ನೀಡಿರುವ ವಿಶೇಷ ವಿಧಿ 14ರ ಸಮಾನತೆಯ ಹಕ್ಕು, 25 ರ ತಮ್ಮ ಧರ್ಮವನ್ನು ಅನುಸರಿಸುವ ಹಕ್ಕು 26 ರ ಧಾರ್ಮಿಕ ವ್ಯವಹಾರಗಳನ್ನು ನಿರ್ವಹಿಸುವ ಸ್ವಾತಂತ್ರ್ಯ, 29 ಅಲ್ಪಸಂಖ್ಯಾತರ ಹಕ್ಕು ಮತ್ತು 300ಎ ಆಸ್ತಿ ಹಕ್ಕು ಅವುಗಳನ್ನು ಉಲ್ಲಂಘಿಸುತ್ತದೆ. ತಹಸೀಲ್ದಾರ ಮೂಲಕ ಭಾರತದ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಡಾ.ಭೀಮಣ್ಣ ಮೇಟಿ, ಮಹಾದೇವಪ್ಪ ಸಾಲಿಮನಿ, ಸಣ್ಣನಿಂಗಣ್ಣನಾಯ್ಕಡಿ, ಅಲ್ಲಾ ಪಟೇಲ್ ಮಕ್ತಾಪುರ, ಮಹಮ್ಮದ ರಫೀಕ ಚೌದ್ರಿ, ಸೈಯದ ಪಾಶ ಪಟೇಲ್, ಶೇಖ್ ಕಲೀಮ್ ತವಕಲ್ಲಿ

ಸೈಯದ ಶಫೀವುದ್ದೀನ ಸರಮಸ್ತ, ಅಬ್ದುಲ್ ರಹಮಾನ, ಸೈಯದ ಅಸದ ಹುಸೇನ ಗೋಗಿ ಇದರು.

## ಮೇ 13 ರಂದು ನಡೆಯುವ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಡಾಕ್ಟರ್ ಬಾಬು ಜಗಜೀವನ್ ರಾವ್ ಜಯಂತೋತ್ಸವ ಯಶಸ್ವಿಗೊಳಿಸೋಣ ಶಾಂತಪ್ಪ ಕಟ್ಟಿಮನಿ ಕರೆ.



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರದ ಹಳೆ ಪ್ರವಾಸಿ ಮಂದಿರದಲ್ಲಿ ಇಂದು ಮಾದಿಗ ಸಮುದಾಯದ ಎಲ್ಲ ಯುವಕರು ಹಿರಿಯ ರಾಜಕೀಯ ಪಕ್ಷಗಳು ಉಪಸ್ಥಿತರಿದ್ದರು ಕಾರ್ಯಕ್ರಮದ ರೂಪರೇಷೆಗಳು ಹಾಗೂ ಕೆಲ ಸಮಿತಿಗಳ ಅಧ್ಯಕ್ಷರನ್ನು ಆಯ್ಕೆ ಮಾಡಿ ಸರ್ವಾನುಮತದಿಂದ ಕಾರ್ಯಕ್ರಮ ಯಶಸ್ವಿಗೊಳಿಸೋಣ ಎಂದು ಮಾನಪ್ಪ ವಠಾರ ಹೇಳಿದರು.

ಜಯಂತೋತ್ಸವ ಅಧ್ಯಕ್ಷರಾದ ವಾಸದೇವ ಕಟ್ಟೆಮನೆಯವರು ನಾವೆಲ್ಲರೂ ಸಮಾಜದ ಒಳಿತುಗಾಗಿ ಹಗಲು ಇರುಳು ದುಡಿದು ಸಮಾಜವನ್ನು ಮುನ್ನಡೆಸುವಂಥ ಕೆಲಸ ಯುವಕರು ಹಿರಿಯರ ಮಾರ್ಗದರ್ಶನ ಜೊತೆಗೆ ನಾವೆಲ್ಲರೂ ಕೈಜೋಡಿಸೋಣ ಎಂದು ಹೇಳಿದರು.

ಶಾಂತಪ್ಪ ಕಟ್ಟಿಮನಿ ಅವರು ಸಭೆಯನ್ನು ಉದ್ದೇಶಿಸಿ ಯುವಕರ ಹಾದಿಯಲ್ಲಿ ಮುನ್ನಡೆಸುವ ಕೆಲಸ ನಮ್ಮದು ಆಗಿರುತ್ತದೆ ಆದ ಕಾರಣ ಯುವಕರು ಸಮಾಜಕ್ಕೆ ಮಾದರಿಯಾಗಿಸುವ ಕೆಲಸ ನೀವು ಮಾಡಬೇಕು ಎಚ್ಚರಿಕೆ ಸಂದೇಶವನ್ನು ನೀಡಿದರು.

ರುದ್ರಪ್ಪ ಹುಲಿಮನಿ. ವೆಂಕಟೇಶ್ ಆಲೂರು. ಸೋಪಣ್ಣ ದರಿಯಾಪುರ್. ಜಟ್ಟಪ್ಪ ಕೆಂಭಾವಿ. ಭೀಮರಾಯ ಕದ್ರಾಪುರ್. ಭೀಮರಾಯ ಪೂಜಾರಿ. ಮಲ್ಲಣ್ಣ ಉಳಂಡಗೇರಿ . ಶಂಕ್ರಪ್ಪ ಶಾಣೆನವರ್. ಬಸವರಾಜ್ ಗುತ್ತಿಪೇಟೆ. ಪರಶುರಾಮ್ ಮಹಲ್ ರೋಜ. ಮಲ್ಲಿಕಾರ್ಜುನ ಉಮರದೊಡ್ಡಿ. ಶಿವು ದೊಡ್ಡಮನಿ. ಈರಣ್ಣ ಗೊತ್ತಿಪೇಟೆ. ಅಯ್ಯಣ್ಣ ಕದರಾಪುರ್ .ಮಲ್ಲಿಕಾರ್ಜುನ ಕಟ್ಟಿಮನಿ. ಲಕ್ಷ್ಮಣ ದೇವಿನಗರ್ . ಶಿವು ಇಂದ್ರನಗರ್. ಧರ್ಮಣ್ಣ ನಾಟೇಕರ್. ಭೀಮಶಂಕರ್ ಕಟ್ಟಿಮನಿ. ಹೊನ್ನಪ್ಪ ಕಟ್ಟಿಮನಿ. ಪ್ರದೀಪ್ ಅಣಬಿ. ಶರಣು ಹತ್ತಿಗೂಡೂರು. ಸಮಾಜದ ಹಿರಿಯ ಹಾಗೂ ಯುವಕರು ಸಮಾಜ ಚಿಂತಕರು

ಕಾರ್ಯಕ್ರಮದಲ್ಲಿ ಉಪಸ್ಥಿತರು.

## ಉದ್ಯೋಗ ಮೇಳಕ್ಕೆ ವಿಶೇಷ ಬಸ್ ವ್ಯವಸ್ಥೆ

ಕಲಬುರಗಿ,ಏ.14.(ಕರ್ನಾಟಕ ವಾರ್ತೆ) ಕಲಬುರಗಿಯ ಕೆ.ಸಿ.ಟಿ. ಕಾಲೇಜಿನಲ್ಲಿ ಇದೇ ಏಪ್ರಿಲ್ 16 ರಂದು ನಡೆಯುವ ಉದ್ಯೋಗ ಮೇಳಕ್ಕೆ ಕಲಬುರಗಿ ವಿಭಾಗದ ವಿವಿಧ ಜಿಲ್ಲಾ–ತಾಲೂಕಾ ಕೇಂದ್ರಗಳಿಂದ ಉದ್ಯೋಗ ಆಕಾಂಕ್ಷಿಗಳು ಆಗಮಿಸಲು ಅನುಕೂಲವಾಗುವಂತೆ ಕೆ.ಕೆ.ಆರ್.ಟಿ.ಸಿ ಸಂಸ್ಥೆಯಿಂದ ಜನದಟ್ಟಣೆ ಅನುಗುಣವಾಗಿ ವಿಶೇಷ ಸಾರಿಗೆ ಬಸ್ ವ್ಯವಸ್ಥೆ ಮಾಡಲಾಗಿದೆ.

ಉದ್ಯೋಗ ಆಕಾಂಕ್ಷಿ ಅಭ್ಯರ್ಥಿಗಳು ಸಾರಿಗೆ ಸೌಲಭ್ಯದ ಲಾಭ ಪಡೆಯುವಂತೆ ಸಂಸ್ಥೆಯ ಕಲಬುರಗಿ ವಿಭಾಗ–2ರ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹದಿಹರೆಯದ ಹೆಣ್ಣು ಮಕ್ಕಳಿಗೆ ವಿಟ್ ಪ್ಯಾಕೆಟ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಮಲಿಂಗನಾಳ:ಮಲಿಂಗನಾಳ ಗ್ರಾಮದಲ್ಲಿ ಏಲೂಕಖಿ ಸ್ಫೂರ್ತಿ ಯೋಜನೆ ವತಿಯಿಂದ ಮಾರನಾಳ ಗ್ರಾಮ ಪಂಚಾಯತ್ ಸಂಬಂಧಸಿದ ಹದಿಹರಿಯದ ಹೆಣ್ಣುಮಕ್ಕಳಿಗೆ ಪೌಷ್ಟಿಕ ಮಟ್ಟ ಹೆಚ್ಚಿಸುವ ದೃಷ್ಟಿಯಿಂದ ಶಕ್ತಿ ವಿಟ್ ಪಾಕೆಟ್ ನೀಡಲಾಯಿತು KHPT ಸ್ಫೂರ್ತಿ ಯೋಜನೆ ಸಮುದಾಯದ ಸಂಘಟಕಿ ರೇಣುಕಾ ಮೇಟಿ ಅವರು ಸಮುದಾಯದ ಮೂಲಕ ಶಕ್ತಿ ವಿಟ್ ಪಾಕೆಟ್ ನ್ನು ಮಕ್ಕಳಿಗೆ ವಿತರಿಸಲಾಯಿತು ಒಟ್ಟು ಪಂಚಾಯಿತಿ ವ್ಯಾಪ್ತಿಯಲ್ಲಿ 521 ಮಕ್ಕಳು ಇದ್ದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು ಮತ್ತು ಮಹಿಳೆಯರು ಪಾಲ್ಗೊಂಡಿದ್ದರು.

## ಇಂದು ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನ ಅಂಗವಾಗಿ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.14–ಬಳ್ಳಾರಿಯಲ್ಲಿ ಜರುಗಲಿರುವ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಏ.15 ರಂದು ಸಂಜೆ 05 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯಲ್ಲಿನ ಬಿ.ಪಿ.ಎಸ್.ಸಿ (ಬಸವರಾಜೇಶ್ವರಿ ಪಬ್ಲಿಕ್ ಸ್ಕೂಲ್ ಅಂಡ್ ಕಾಲೇಜ್) ಶರಣ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷರಾದ ನಾಡೋಜ ಡಾ.ಮಹೇಶ್ ಜೋಶಿ ಅವರು ಪಾಲ್ಗೊಳ್ಳುವರು.

ಜನಪ್ರತಿನಿಧಿಗಳ, ಕನ್ನಡಪರ ಸಾಹಿತ್ಯ–ಸಾಂಸ್ಕೃತಿಕ ಸಂಘಟನೆಗಳ ಹಾಗೂ ವಿವಿಧ ಸಂಘಟನೆಗಳ, ಕಸಾಪ ಜಿಲ್ಲೆ ತಾಲೂಕು ಮತ್ತು ಹೋಬಳಿ ಪದಾಧಿಕಾರಿಗಳ ಸಭೆ ಆಯೋಜಿಸಲಾಗಿದ್ದು, ಸಹೃದಯ ಕನ್ನಡ ಅಭಿಮಾನಿಗಳು ಈ ಸಭೆಗೆ ಆಗಮಿಸಿ ಸಮ್ಮೇಳನದ ಯಶಸ್ವಿಯ ಹಿನ್ನೆಲೆಯಲ್ಲಿ ಸಲಹೆ–ಸೂಚನೆ ನೀಡಬೇಕು ಎಂದು ಅಖಂಡ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ ಅವರು ತಿಳಿಸಿದ್ದಾರೆ.

ಮನುಷ್ಯ ಚಿರಂಜೀವಿ ಆಗಲಾರ,
ಅದರೆ
ಆತನ ಚಿಂತನೆಗಳು ಶಾಶ್ವತವಾಗಿ
ಉಳಿಯುತ್ತದೆ.
–ಡಾ.ಬಿ.ಆರ್.ಅಂಬೇಡ್ಕರ್

# ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ರವರ 134ನೇ ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜನರ ಬಾಳಿಗೆ ಬೆಳಕನ್ನು ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್ ರವರ ಕೊಡುಗೆಗಳು ಅಪಾರವಾಗಿದ್ದು, ನಾವೆಲ್ಲರೂ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ನಡೆಯೋಣ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಸೋಮವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ರವರ 134ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ವಿಶ್ವದಲ್ಲಿಯೇ ಅತ್ಯಂತ ಸುಂದರವಾದ ಮತ್ತು ಬಹುದೊಡ್ಡ ಸಂವಿಧಾನವನ್ನು ನಮ್ಮ ದೇಶಕ್ಕೆ ನೀಡಿರುವ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ ಜನ್ಮ ದಿನವಾದ ಏಪ್ರಿಲ್ 14 ನಮ್ಮೆಲ್ಲರಿಗೂ ಪ್ರವಿತ್ರವಾಗಿದೆ. ಅಸಮಾನತೆಯಿಂದ ಕೂಡಿದ್ದ ನಮ್ಮ ದೇಶದಲ್ಲಿ ಸಮಾನತೆಯನ್ನು ತರಲು ಹಾಗೂ ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯನ್ನು ಹೋಗಲಾಡಿಸಲು ಶಿಕ್ಷಣ, ಸಂಘಟನೆ, ಹೋರಾಟಗಳ ಮೂಲಕ ದೇಶದಲ್ಲಿ ಸಮ ಸಮಾಜವನ್ನು ನಿರ್ಮಿಸಲು ಅವರು ಶ್ರಮಿಸಿದ್ದರು. ಇಂದು ನಮ್ಮಂತಹ ಜನಪ್ರತಿನಿಧಿಗಳು, ಗ್ರಾ.ಪಂ., ತಾ.ಪಂ., ಜಿ.ಪಂ ಮತ್ತು ಸ್ಥಳೀಯ ನಗರ ಸಂಸ್ಥೆಗಳು ಸದಸ್ಯರು ಹಾಗೂ ಶಾಸಕರು, ಸಂಸದರಾಗಲು ಸಂವಿಧಾನವೇ ಕಾರಣವಾಗಿದೆ ಎಂದರು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಅವರು ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ರವರು ವ್ಯಕ್ತಿಯಲ್ಲ, ಅವರೊಂದು ಶಕ್ತಿಯಾಗಿದ್ದಾರೆ. ಹಿಂದುಳಿದವರು, ಮಹಿಳೆಯರು ಹಾಗೂ ಅಲ್ಪಸಂಖ್ಯಾತರಿಗೆ ಬದುಕನ್ನು ಕಟ್ಟಿಕೊಳ್ಳಲು ಅವರು ರಚಿಸಿದ ಸಂವಿಧಾನವು ನಮಗೆ ಒಂದು ಶಕ್ತಿಯಾಗಿದೆ. ಅಂಬೇಡ್ಕರ್ ಎಂದರೇ, ಒಂದು ಚಳುವಳಿ, ಸಮಾನತೆ. ಸಮಾನತೆಯ ಬದುಕು ಕಟ್ಟಿಕೊಟ್ಟವರು. ಅವರು ಎಲ್ಲಾ ವರ್ಗದವರಿಗೂ ರಾಜಕೀಯ, ಸಾಮಾಜಿಕ, ಆರ್ಥಿಕ ಸಮಾನತೆಯನ್ನು ನೀಡಿದ್ದಾರೆ ಎಂದರು. ಕಲಬುರಗಿಯ ಬರಹಗಾರಾದ ಡಾ. ವಿಠ್ಠಲ್ ವಗ್ಗನ್ ಅವರು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ರವರ ಕುರಿತು ವಿಶೇಷ ಉಪನ್ಯಾಸ ನೀಡಿ, ಡಾ.ಬಿ.ಆರ್. ಅಂಬೇಡ್ಕರ್ ರವರ ಕೊಡುಗೆಗಳು ಅಪಾರವಾಗಿವೆ. ಅವರು ಹಲವಾರು ಪದವಿಗಳನ್ನು ಪಡೆದಿದ್ದರು. ಭಾರತ ಸಂವಿಧಾನವನ್ನು ಅವರು ಸರ್ವಜನಾಂಗದ ಅಭಿವೃದ್ಧಿಗಾಗಿ ನೀಡಿದ್ದಾರೆ.

ಜೈನ್ ಮುನಿ ಕಮಲಮುನಿ ಕಮಲೇಶ್ ಅವರು ಕಾರ್ಯಕ್ರದಲ್ಲಿ ಮಾತನಾಡಿದರು. ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಸಂವಿಧಾನ ಪೀಠಿಕೆಯನ್ನು ಎಲ್ಲರಿಗೂ ಬೋಧಿಸಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ್, ನಗರಸಭೆ ಸದಸ್ಯರಾದ ಮುತ್ತುರಾಜ ಕುಷ್ಟಗಿ, ಸಿದ್ದು ಮ್ಯಾಗೇರಿ, ಮಹೇಂದ್ರ ಛೋಪ್ರಾ, ಗುರುರಾಜ ಹಲಗೇರಿ, ರಾಜಶೇಖರ ಆಡೂರು ಹಾಗೂ ಇತರರು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ್, ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಸಮಾಜದ ಮುಖಂಡರಾದ ಗಾಳೆಪ್ಪ ಪೂಜಾರ, ಗೂಳಪ್ಪ ಹಲಗೇರಿ, ಡಾ. ಜ್ಞಾನಸುಂದರ, ಗವಿಸಿದ್ದಪ್ಪ ಕಂದಾರಿ, ಸಿದ್ದೇಶ ಪೂಜಾರ, ರಾಮಣ್ಣ ಕಂದಾರಿ, ಯಲ್ಲಪ್ಪ ಬಳಗನೂರ, ಗವಿಸಿದ್ದಪ್ಪ ಬೆಲ್ಲದ್, ಕೃಷ್ಣ ಇಟ್ಟಂಗಿ, ಗಾಳೆಪ್ಪ ಕಡೆಮನಿ ಸೇರಿದಂತೆ ಸಮಾಜದ ಮತ್ತಿತರರು ಉಪಸ್ಥಿತರಿದ್ದರು.

# ದೇಶಕ್ಕೆ ಡಾ.ಅಂಬೇಡ್ಕರ್ ಕೊಡುಗೆ ಅಪಾರ: ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.14-ಡಾ.ಬಾಬಾಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನದ ಅಡಿಯಲ್ಲಿ ದೇಶ ಮುನ್ನಡೆಯುತ್ತಿದ್ದು, ದೇಶಕ್ಕೆ ಅವರ ಕೊಡುಗೆ ಅಪಾರ ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದರು.

ಕಾಂಗ್ರೆಸ್ ಕಚೇರಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಮಾತನಾಡಿದ ಅವರು, ಡಾ.ಅಂಬೇಡ್ಕರ ದೀನ ದಲಿತರು ಹಾಗೂ ತುಳಿತಕ್ಕೊಳಗಾದವರ ಏಳಿಗೆಗೆ ನಿರಂತರ ಹೋರಾಟ ಮಾಡಿದ ಧೀಮಂತ ನಾಯಕರು ಎಂದರು.

ಅಂಬೇಡ್ಕರ ರಚಿಸಿದ ಸಂವಿಧಾನದ ಅಡಿಯಲ್ಲಿಯೇ ಇಂದು ದೇಶದ ಆಡಳಿತ ವ್ಯವಸ್ಥೆ ನಡೆಯುತ್ತಿದೆ. ಡಾ.ಅಂಬೇಡ್ಕರ ವಿಚಾರಧಾರೆಗಳು ಇಡೀ ವಿಶ್ವಕ್ಕೆ ಮೆಚ್ಚುಗೆಯಾಗಿದ್ದು ವಿದೇಶಗಳಲ್ಲೂ ಅವರ ಜನ್ಮದಿನಾಚರಣೆ ನಡೆಯುತ್ತಿರುವುದೇ ಸಾಕ್ಷಿಯಾಗಿದೆ ಎಂದು ಎಸ್.ಆರ್.ಪಾಟೀಲ ಹೇಳಿದರು.

ಕಾಂಗ್ರೆಸ್ ಪಕ್ಷದ ಎಸ್.ಸಿ.ಘಟಕದ ಜಿಲ್ಲಾಧ್ಯಕ್ಷ ರಾಜು ಮನ್ನಿಕೇರಿ ಮಾತನಾಡಿ, ಬಾಬಾಸಾಹೇಬ ಅಂಬೇಡ್ಕರ್ ಅವರು ದೇಶದ ಸಂವಿಧಾನ ರಚಿಸದೇ ಹೋಗಿದ್ದಲ್ಲಿ ದೇಶದಲ್ಲಿರುವ ಅಲ್ಪಸಂಖ್ಯಾತ, ಹಿಂದುಳಿದ ವರ್ಗ ಹಾಗೂ ದಲಿತರು ಹಿಂದಿನ ಕಾಲದಲ್ಲಿ ಅನುಭವಿಸಿದ ನೋವುಗಳನ್ನು ಅನುಭವಿಸಬೇಕಾಗಿತ್ತು, ಆದರೆ ಅಂಬೇಡ್ಕರ್ ರಚಿಸಿದ ಸಂವಿಧಾನದಿಂದ ದೇಶದಲ್ಲಿರುವ ಸರ್ವ ಜನಾಂಗದವರು ಸಹೋದರತ್ವ ಮನೋಭಾವದಿಂದ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಜಿಪಂ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ, ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ರಕ್ಷಿತಾ ಈಟಿ, ಮಲ್ಲಿಕಾರ್ಜುನ ಮೇಟಿ, ಉಮೇಶ ಮೇಟಿ, ನಾಗರಾಜ ಹದ್ಲಿ, ಶ್ರವಣ ಖಾತೇದಾರ, ಗುಣವಂತಿ ನಿಡೋಣಿ, ರೇಣುಕಾ ನ್ಯಾಮಗೌಡರ, ರೇಣುಕಾ ನಾರಾಯಣಕರ, ಹಣಮಂತ ಗೊರವರ, ವಾಯ್.ವಾಯ್. ತಿಮ್ಮಾಪೂರ, ಮಲ್ಲು ಶಿರೂರ, ವಿಜಯ ಕಮತಗಿ, ಅಬ್ದುಲ್ ಬಾಗವಾನ, ರಮೇಶ ಸನದಿ, ವೀರಣ್ಣ ಹುಂಡೇಕಾರ, ಸುರೇಶ ಝಿಂಗಾಡೆ, ದಶರಥ ಚಿಕ್ಕಸಂಶಿ, ಸುಧಾ ಪಾಟೀಲ, ಮಮತಾಜ ಸುತಾರ, ಪ್ರೇಮಾ ರಾಠೋಡ, ಮಂಜುಳಾ ಭೂಸಾರೆ, ಸಾವಿತ್ರಿ ಗೌಡರ, ಮಹಾಬೂಬಿ ಬೈರೇಕದಾರ, ಆರೀಫ ಕಿರಸೂರ, ಹಣಮಂತ ಲೆಂಕೆಣ್ಣವರ, ವಿಠ್ಠಲ ಮಾದರ, ಅಭಿಷೇಕ ತಳ್ಳಿಕೇರಿ, ದ್ಯಾಮಣ್ಣ ಗಾಳಿ, ಆನಂದ ರಾಠೋಡ, ನಾಗಮಲ್ಲೇಶ್ವರಿ, ಅನ್ನಪೂರ್ಣ ಗೂಗ್ಯಾಳ, ಸುನೀಲ ಕೊಡಬಾಗಿ, ಪಹಾದ ಪಟೇಲ್, ಚಂದ್ರಶೇಖರ ಜಂಗ್ಲಿ, ನಾಗೇಶ ಹೊಸಮನಿ, ಸಿದ್ದಪ್ಪ ಚಲವಾದಿ, ಗ್ಯಾನಪ್ಪ ಚಲವಾದಿ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

### ಬಿಜೆಪಿ ಜಿಲ್ಲಾ ಕಛೇರಿಯಲ್ಲಿ ಅಂಬೇಡ್ಕರ್ ಅವರ ಜಯಂತಿ ಆಚರಣೆ

# ನರೇಂದ್ರ ಮೋದಿ ಆಡಳಿತ ಅವಧಿಯಲ್ಲಿ ಅಂಬೇಡ್ಕರ್ ಅವರ ಐದು ಪ್ರಮುಖ ಸ್ಥಳಗಳ ರಕ್ಷಣೆ:ವಿಭೂತಿಹಳ್ಳಿ,



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಮಾತನಾಡಿದ ಅವರು, ಮೇಲ್ವರ್ಗದವರಿಗೆ ಹೆಚ್ಚಿನ ಪ್ರಧಾನ್ಯತೆ ಇದ್ದ ವೇಳೆ ಹಿಂದುಳಿದವರಿಗೆ ಪ್ರಧಾನ್ಯತೆ ನೀಡಬೇಕಾದ ಅವಶ್ಯಕತೆ ಇತ್ತು.ಕೇಂದ್ರ ಬಿಜೆಪಿ ಸರ್ಕಾರ ಡಾ.ಬಿ.ಆರ್.ಅಂಬೇಡ್ಕರ್ ಅವರ ನೆನಪಿಗೆ ಅನೇಕ ಕೆಲಸಗಳನ್ನು ಮಾಡುತ್ತಿದೆ. ಜನ್ಮ ಸ್ಥಳ, ಶಿಕ್ಷಣ ಪಡೆದ ಸ್ಥಳಗಳನ್ನು ರಕ್ಷಣೆ ಮಾಡಿ ಸಾರ್ವಜನಿಕರು ವೀಕ್ಷಣೆ ಮಾಡಲು ಅವಕಾಶ ನೀಡಿದೆ. ಮಹಾ ಪರಿನಿರ್ವಾಣದ ಸ್ಥಳ ರಕ್ಷಣೆ, ಬೌದ್ಧ ಧರ್ಮ ಸ್ವೀಕರಿಸಿದ ನಾಗಪುರ ಸ್ಥಳ ರಕ್ಷಣೆ ಮಾಡುವ ಮೂಲಕ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವ ಮಹಾತ್ಕಾರ್ಯವನ್ನು ಬಿಜೆಪಿ ಸರ್ಕಾರ ಮಾಡಿದೆ. ಅರ್ಥಶಾಸ್ತ್ರ ಅಂಬೇಡ್ಕರ್‌ಗೆ ಆಸಕ್ತಿ ಇದ್ದ ವಿಷಯವಾಗಿತ್ತು. ಆದರೆ ಅವರು ಕೇಂದ್ರದಲ್ಲಿ ಹಣಕಾಸು ಸಚಿವರಾಗಲು ಸಾಧ್ಯವಾಗಲಿಲ್ಲ. ಯಾವುದೇ ಸರ್ಕಾರಗಳು ಬರಲಿ, ಒಳ್ಳೆಯರೇ ಬರಲಿ ಕೆಟ್ಟವರೇ ಬರಲಿ ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳನ್ನು ಬಾಬಾ ಸಾಹೇಬ್ ಅಂಬೇಡ್ಕರ್ ನೀಡಿದ್ದಾರೆ ಎಂದು ಅಂಬೇಡ್ಕರ್ ಅವರನ್ನು ಹಾಡಿ ಹೊಗಳಿದರು.

ಈ ಸಂದರ್ಭದಲ್ಲಿ ಅಲೆಮಾರಿ ಅರೆ ಅಲೆಮಾರಿ ನಿಗಮದ ಅಧ್ಯಕ್ಷ ದೇವಿಂದ್ರನಾಥ ನಾದ ಮಾತನಾಡಿದ ಅವರು

ಅಂಬೇಡ್ಕರ್ ಕೇವಲ ಎಸ್ ಸ್ಸಿ ಸಮುದಾಯಕ್ಕೆ ಮಾತ್ರ ನಾಯಕರಲ್ಲ ಇಡೀ ವಿಶ್ವವೆ ಮೆಚ್ಚುವಂತಹ ನಾಯಕ ಇವರನ್ನು ಪ್ರತಿ ಮನೆಯಲ್ಲಿ ಪ್ರತಿ ಮನಸಲ್ಲೂ ಪೂಜಾ ಭಾವನೆಯಿಂದ ನೋಡುವಂತೆ ನಮ್ಮ ಮಕ್ಕಳಿಗೆ ಇವರ ಬಗ್ಗೆ ತಿಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಈ ಸಂದರ್ಭದಲ್ಲಿ ಡಾ.ಮರೆಪ್ಪ ನಾಟಕಾರ ವಿಶೇಷ ಉಪನ್ಯಾಸ ನೀಡಿದರು,

ಈ ಸಂದರ್ಭದಲ್ಲಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ಮತ್ತು ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿದ ಮಾತನಾಡದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ನಾಗರತ್ನ ಕುಪ್ಪಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಮತ್ತು ಪರುಶುರಾಮ ಕುರಕುಂದಿ, ವೆಂಕಟರೆಡ್ಡಿ ಅಬ್ಬೆತುಮಕೂರು, ಎಸ್.ಸಿ ಮೋರ್ಚಾ ಜಿಲ್ಲಾಧ್ಯಕ್ಷ ಭೀಮಾಶಂಕರ ಬಿಲ್ಲವ್, ಬಸವರಾಜಪ್ಪಗೌಡ ಬಿಳಾರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಆರ್ ಸಾಹುಕಾರ, ಯುಡ ಮಾಜಿ ಅಧ್ಯಕ್ಷ ಬಸವರಾಜ ಚಂಡ್ರಿಕಿ, ನಗರಸಭೆ ಮಾಜಿ ಅಧ್ಯಕ್ಷ ವಿಲಾಸ ಪಾಟೀಲ, ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೇರಿ, ಮಾರುತಿ ಕಲಾಲ್, ಅಡಿವೆಪ್ಪ ಜಾಕ, ಸಿದ್ದಲಿಂಗಪ್ಪ ನಾಯಕ, ಮೋನೇಶ ಬೆಳಿಗೇರಿ, ಮಲ್ಲಿಕಾರ್ಜುನ ಹೊನಿಗೇರಿ, ಬಸಣಗೌಡ ಕನ್ಯಕೋಳುರ, ಶಕುಂತಲಾ ಜಿ.ಭೀಮಬಾಯಿ ಶೆಂಡಿಗಿ, ಸ್ನೇಹ ರಸಳಕರ್, ಮಲ್ಲು ಕುಲಿವಾಡ ಜಿಲ್ಲಾ ಮಾಧ್ಯಮ ಸಹ ಸಂಚಾಲಕ ಚಂದ್ರಶೇಖರ ಕಡೆಸೂರ ಸೇರಿದಂತೆ ಅನೇಕರು

# ಸೈನಿಕರ ಕರ್ತವ್ಯ, ತ್ಯಾಗಜೀವನ ಸದಾ ಸ್ಮರಣೀಯ-ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.14-ದೇಶ ರಕ್ಷಣೆಯ ಮಹತ್ತರ ಕಾರ್ಯದಲ್ಲಿ ತೊಡಗಿರುವ ಸೈನಿಕರ ಕರ್ತವ್ಯ ಹಾಗೂ ತ್ಯಾಗಮಯ ಜೀವನ ಸದಾ ಸ್ಮರಣೀಯ' ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದ್ದಾರೆ. ಸಮೀಪದ ಶಿರೂರ ಪಟ್ಟಣದಲ್ಲಿ ಭಾನುವಾರ ಸ್ಥಳೀಯ ಸಿದ್ಧಲಿಂಗೇಶ್ವರ ಗೆಳೆಯರ ಬಳಗ ಹಮ್ಮಿಕೊಂಡಿರುವ ಶಿರೂರ ಪ್ರೀಮಿಯರ್ ಲೀಗ್ ಸೀಸನ್ -2 ಕ್ರಿಕೆಟ್ ಪಂದ್ಯಾವಳಿ ಹಾಗೂ ಸೈನಿಕರ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿ, ವೈಯಕ್ತಿಕ ಹಿತಾಸಕ್ತಿ ಬದಿಗಿರಿಸಿ ದೇಶ ರಕ್ಷಣೆಯ ಕಾರ್ಯದಲ್ಲಿ ತೊಡಗುವ ಸೈನಿಕರ ಕರ್ತವ್ಯವನ್ನು ಪ್ರತಿಯೊಬ್ಬರೂ ಗೌರವಿಸಬೇಕಿದೆ ಎಂದರು.

ಸಿದ್ಧಲಿಂಗೇಶ್ವರ ಗೆಳೆಯರ ಬಳಗ ಕೇವಲ ಕ್ರಿಕೆಟ್ ಆಡುವುದಕ್ಕೆ ಮಹತ್ವ ನೀಡದೇ ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ತನಗಿರುವ ಸಾಮಾಜಿಕ ಕಳಕಳಿಯನ್ನು ತೋರಿ ಇನ್ನೊಬ್ಬರಿಗೆ ಮಾದರಿಯಾಗಿದೆ ಎಂದು ಪೂಜಾರ ಬಣ್ಣಿಸಿದರು. ಮುಖ್ಯ ಅತಿಥಿ-ಯಾಗಿದ್ದ ಭಾರತೀಯ ಆಹಾರ ನಿಗಮದ ಸಲಹಾ ಸಮಿತಿಯ ನಿರ್ದೇಶಕ ತಮ್ಮಣ್ಣ ಗಿರಿಜಾ ಮಾತನಾಡಿ, ಯುವಕರು ದುಶ್ಚಟಗಳಿಗೆ ಬಲಿಯಾಗದೇ ಉತ್ತಮ ಹವ್ಯಾಗಳನ್ನು ರೂಢಿಸಿಕೊಂಡು ಕ್ರೀಡೆಗಳಲ್ಲಿ ಭಾಗವಹಿಸಿ ದೇಹದ ಸದೃಢತೆಯನ್ನು ಕಾಪಾಡಿಕೊಳ್ಳಬೇಕು. ದೇಶ ರಕ್ಷಿಸುವ ಸೈನಿಕರನ್ನು ಗೌರವಿಸುವ ಕೆಲಸವನ್ನು ಸಮಾಜ ಸದಾ ಮಾಡುತ್ತಿರಬೇಕು ಎಂದರು. ಸಮಾರಂಭದಲ್ಲಿ ಸ್ಥಳೀಯ ಮಾಜಿ ಸೈನಿಕರ ಸಂಘದ ಸರ್ವ ಯೋಧರನ್ನು ಸನ್ಮಾನಿಸಲಾಯತು. ಗ್ರಾಪಂ ಮಾಜಿ ಅಧ್ಯಕ್ಷ ರಂಗಪ್ಪ ಮಳ್ಳಿ, ಶಶಿಧರ ನಡುವಿನಮನಿ, ಸುರೇಶಗೌಡ ಪಾಟೀಲ, ರವಿ ಮೇಟಿ, ಸುರೇಶ ಗಾಣಿಗೇರ, ಅನ್ವರ್ ಅಮರಗೋಳ, ಮಂಜು ಆಡಿನ, ಮಲ್ಲು ಕುರಹಟ್ಟಿ, ಸತೀಶ ಅಂಬಿಗೇರ, ಸಂಜಯ ನಡುವಿನಮನಿ, ಬಾಬು ನಬಿವಾಲೆ ವೇದಿಕೆಯಲ್ಲಿದ್ದರು.

ಸಿದ್ಧಲಿಂಗೇಶ್ವರ ಗೆಳೆಯರ ಬಳಗ ಹಮ್ಮಿಕೊಂಡಿರುವ ಕ್ರಿಕೆಟ್ ಟೂರ್ನಿಯಲ್ಲಿ ಶಿರೂರಿನ 9 ತಂಡಗಳು ಪಾಲ್ಗೊಂಡಿದ್ದು, ಟೂರ್ನಿಯಲ್ಲಿ ಪಡೆಯುವ ಪ್ರತಿ ವಿಕೆಟ್ ಗೆ ಒಂದು ಸಸಿ ನೆಡುವ ಯೋಜನೆಯನ್ನು ಹಾಕಿಕೊಂಡಿದ್ದು, ಜೂನ್ 5 ವಿಶ್ವ ಪರಿಸರ ದಿನಾಚರಣೆಯಂದು ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಬಳಗದ ರವಿ ಮೇಟಿ ತಿಳಿಸಿದರು.

# ಸಾಮಾಜಿಕ ಅಸಮಾನತೆ ನಿವಾರಣೆಗೆ ಹೋರಾಡಿದ ಡಾ.ಅಂಬೇಡ್ಕರ-ಪಿ.ಎಚ್.ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.14-ಸಾಮಾಜಿಕ ಅಸಮಾನತೆ, ಅಸ್ಪೃಶ್ಯತೆಯ ನಿವಾರಣೆಗೆ ಹೋರಾಡಿದ ಡಾ.ಬಿ.ಆರ್.ಅಂಬೇಡ್ಕರ ಸಮಾಜಕ್ಕೆ ಒಳ್ಳೆಯದನ್ನು ಕೊಡಬೇಕೆನ್ನುವ ಉತ್ಕಟ ಆಕಾಂಕ್ಷಿಯಾಗಿದ್ದರು ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದರು.


ನವನಗರದ ಸೆಕ್ಟರ್ ನಂ.12 ರಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ ಅವರ 134 ನೇ ಜಯಂತಿ ಕಾರ್ಯಕ್ರಮದಲ್ಲಿ ಅಂಬೇಡ್ಕರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ, ಡಾ.ಅಂಬೇಡ್ಕರ ಜೀವನದುದ್ದಕ್ಕೂ ತುಳಿತಕ್ಕೊಳಗಾದವರ ಪರವಾಗಿ ಹೋರಾಡಿದ ಮಹಾನ್ ವ್ಯಕ್ತಿ ಎಂದರು.

ಮಹಾಜ್ಞಾನಿಯಾಗಿದ್ದ ಅಂಬೇಡ್ಕರ್ 9 ಭಾಷೆಗಳಲ್ಲಿ ಪಾಂಡಿತ್ಯ ಹೊಂದಿದ್ದರು. ಅವರ ಅಪಾರವಾದ ಜ್ಞಾನದ ಶಕ್ತಿ ಸಂವಿಧಾನ ರಚನೆಯಲ್ಲಿ ಅಡಕವಾಗಿದ್ದು, ಸಾಮಾಜಿಕ ಕಳಕಳಿಯ ಬದುಕಿನಿಂದಾಗಿ ಅವರು ಸಾರ್ಥಕ ಜೀವನ ಕಂಡರು ಎಂದು ಪೂಜಾರ ಹೇಳಿದರು.

ಡಾ.ಶೇಖರ ಮಾನೆ, ವಿರುಪಾಕ್ಷ ಅಮೃತಕರ, ಕಟ್ಟಿಮನಿ ಅಂಬೇಡ್ಕರ ಜೀವನ, ಬದುಕು, ಸಾಮಾಜಿಕ ಕಳಕಳಿಯ ಕುರಿತು ಮಾತನಾಡಿದರು.

ಸಮಾರಂಭದಲ್ಲಿ ಪೌರಕಾರ್ಮಿಕರಾದ ನಾಗಮ್ಮ ಪಾತ್ರೋಟಿ, ಸಮಾಜ ಸೇವಕರಾದ ಹರೀಶ ನಾರಾಯಣಿ, ರಾಜು ಕಟ್ಟಿಮನಿ, ಮಹಾದೇವಪ್ಪ ಪಲ್ಲೇದ ಅವರನ್ನು ಸನ್ಮಾನಿಸಲಾಯಿತು. ತಮ್ಮಣ ಗಿರಿಜಾ, ಶಂಭುಗೌಡ ಪಾಟೀಲ, ರಾಜು ಶ್ರೀರಾಮ, ಸಂಗನಗೌಡ ಗೌಡರ, ಮಲ್ಲಿಕಾರ್ಜುನ ಪಾತೆ-ಪ್ರೋಟಿ, ಗಣೇಶ ದೂದಾನಿ, ಸುಧೀರ ಜಾಧವ, ಮಂಜು ಬಳ್ಳೂರಗಿ, ಬಲ್ಲಿಸ್ವಾಮಿ ಸುರಪುರ, ರಾಜು ನಾಯಕ, ವೀರೇಶ ನಾಲತ್ತವಾಡ, ಓಣಿಯ ಮಹಿಳೆಯರು, ಯುವಕರು, ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಅಧ್ಯಯನದ ಜೊತೆ ಸೇವಾ ಮನೋಭಾವ ಬೆಳೆಸಿಕೊಳ್ಳಿ-ನರಗುಂದ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.14-ವಿದ್ಯಾರ್ಥಿಗಳು ಅಧ್ಯಯನದ ಜೊತೆಗೆ ಸಾಮಾಜಿಕ ಸೇವೆಯಲ್ಲಿ ತೊಡಗಿಕೊಳ್ಳಬೇಕೆಂಬುದು ಎನ್‌ಎಸ್‌ಎಸ್ ಆಶಯವಾಗಿದ್ದು ಅದನ್ನು ಸಾಕಾರಗೊಳಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಪ್ರಸಕ್ತ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯ ಚಟುವಟಿಕೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಓದಿಗಷ್ಟೇ ಸೀಮಿತಗೊಳ್ಳದೆ ರಚನಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಈ ದಿಶೆಯಲ್ಲಿ ಎನ್‌ಎಸ್‌ಎಸ್ ಮಹತ್ವದ ಪಾತ್ರವನ್ನು ವಹಿಸುತ್ತದೆ. ಸೇವೆ ನಾವು ಸಮಾಜಕ್ಕೆ ಮಾಡುವ ಕರ್ತವ್ಯವೇ ಹೊರತು ಉಪಕಾರವಲ್ಲ ಎಂದು ನರಗುಂದ ಹೇಳಿದರು.

ಅಧ್ಯಯನದಿಂದ ಬೌದ್ಧಿಕ ವಿಕಾಸವಾದರೆ ಎನ್‌ಎಸ್‌ಎಸ್‌ದಂತಹ ಪಠ್ಯಪೂರಕ ಚಟುವಟಿಕೆಗಳಿಂದ ವ್ಯಕ್ತಿತ್ವ ವಿಕಾಸವಾಗಬಲ್ಲದು. ಮನಸ್ಸಿಗೆ ನೆಮ್ಮದಿ ತರಬಲ್ಲದು. ಪರರಿಗೆ ಸೇವೆ ಹಾಗೂ ಉಪಕಾರವನ್ನು ಮಾಡುವುದು ಈ ನೆಲದ ಸಂಸ್ಕೃತಿಯಾಗಿದೆ. ಅದನ್ನು ಯುವಜನತೆ ಅರಿಯಬೇಕು ಎಂದು ಅವರು ಹೇಳಿದರು.

ಎನ್.ಎಸ್.ಎಸ್. ಅಧಿಕಾರಿ ಎಸ್.ಎಂ.ಹಡಪದ ಎನ್‌ಎಸ್‌ಎಸ್ ನಡೆದು ಬಂದ ಬಗೆಯನ್ನು ತಿಳಿಸಿದರು. ಸ್ವಪ್ನಾ ಗೌಡರ ಪ್ರಾರ್ಥಿಸಿದರು. ಉಪನ್ಯಾಸಕರಾದ ಎಚ್.ಎಸ್. ಗಿಡಗಂಟಿ ಮತ್ತು ಎಂ.ಡಿ.ಕೋರವಾರ ಎನ್‌ಎಸ್‌ಎಸ್ ಗೀತೆ ಹಾಡಿದರು. ಉಪನ್ಯಾಸಕಿ ಕೀರ್ತಿ ದಾಸರ ನಿರೂಪಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ವಂದಿಸಿದರು.

### ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿಕೆ

# ಏ.20 ಕೂಡಲಸಂಗಮದಲ್ಲಿ ಪಂಚಮಸಾಲಿ ಸಮಾಜದ ರಾಜ್ಯಮಟ್ಟದ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.14-ಪಂಚಮಸಾಲಿ ಸಮಾಜದ ಮೀಸಲಾತಿ ಹೋರಾಟ, ಸಧ್ಯಕ್ಕೆ ಸಮಾಜದಲ್ಲಿ ಉಂಟಾಗಿರುವ ಭಿನ್ನಾಭಿಪ್ರಾಯಗಳನ್ನು ಪರಿಹರಿಸಿಕೊಳ್ಳುವ ದೃಷ್ಟಿಯಿಂದ ಜಿಲ್ಲೆಯ ಕೂಡಲಸಂಗಮದ ಪಂಚಮಸಾಲಿ ಪೀಠದಲ್ಲಿ ಏ.20 ರಂದು ಪಂಚಮಸಾಲಿ ಸಮಾಜದ ರಾಜ್ಯಮಟ್ಟದ ಸಭೆ ಕರೆಯಲಾಗಿದೆ ಎಂದು ಕೂಡಲಸಂಗಮ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದ್ದಾರೆ.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಸ್ವಾಮೀಜಿ, ಅಂದಿನ ಸಭೆಯಲ್ಲಿ ಪಂಚಮಸಾಲಿ ಸಮಾಜದ ರಾಷ್ಟ್ರ, ರಾಜ್ಯ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು, ಸಚಿವರು, ಶಾಸಕರು ಸೇರಿದಂತೆ ಸಮಾಜದ ಎಲ್ಲ ಜನರು ಭಾಗವಹಿಸಿ ಸಲಹೆ, ಸೂಚನೆ ನೀಡಬೇಕು ಎಂದು ಹೇಳಿದರು.

ಮೀಸಲಾತಿ ಹೋರಾಟ ಪ್ರಾರಂಭಿಸಿದ್ದರಿಂದಾಗಿ ಇಂದು ಸಮಾಜದ ಸಂಘಟನೆ ಜಗತ್ತಿನಾದ್ಯಂತ ಸದೃಢವಾಗಿದೆ. ನನ್ನ ಉದ್ದೇಶ ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಣ್ಣೀರು ಒರೆಸುವುದು ಹಾಗೂ ಸಮಾಜಕ್ಕೆ ನ್ಯಾಯ ಒದಗಿಸುವುದಾಗಿದೆ ಎಂದ ಸ್ವಾಮೀಜಿ, ನಾನು ಸಮಾಜದ ಯಾವುದೇ ವ್ಯಕ್ತಿ ಪರವಾಗಿ ಹೋರಾಟ ಮಾಡಿಲ್ಲ. ಸಮಾಜದ ಹಿತಕ್ಕಾಗಿ ನನ್ನ ಹೋರಾಟ ನಿರಂತರವಾಗಿರುತ್ತದೆ ಎಂದರು.

ಸಮಾಜ ಸಂಘಟನೆಯ ಸಂದರ್ಭದಲ್ಲಿ ಕೆಲವರಲ್ಲಿ ಭಿನ್ನಾಭಿಪ್ರಾಯ, ಗೊಂದಲಗಳು ಇರುವುದು ಸಹಜ. ಇನ್ನು ಕೆಲವರು ಅಜ್ಞಾನ, ಆಸೆ, ಆಮಿಷಗಳಿಗೆ ಒಳಗಾಗಿ ಟೀಕೆ, ಟಿಪ್ಪಣೆ ಮಾಡುತ್ತಾರೆ. ಆದರೂ ನಾನು ಯಾರಿಗೂ ಉತ್ತರಿಸುವುದಿಲ್ಲ. ನಾವು ಮಾಡುವ ಕಾರ್ಯಗಳು ಒಳ್ಳೆಯದು ಎನ್ನುವವರೂ ನಮ್ಮವರೇ, ಒಳ್ಳೆಯದಲ್ಲ ಎನ್ನುವವರೂ ನಮ್ಮವರೇ. ಹೀಗಾಗಿ ಅವರನ್ನು ವಿರೋಧಿಸುವುದಿಲ್ಲ ಎಂದು ಹೇಳಿದ ಬಸವಜಯಮೃತ್ಯುಂಜಯ ಸ್ವಾಮೀಜಿ, ನಾನು ಭೌತಿಕತೆಗೆ ಒಳಗಾಗಿಲ್ಲ. ಮನಸ್ಸುಗಳನ್ನು ಕಟ್ಟುವ ಕೆಲಸ ಮಾಡಿದ್ದೇನೆ. ಮುಂದೆಯೂ ಮಾಡುತ್ತೇನೆ ಎಂದು ಹೇಳಿದರು.

ನಾನು ಪೀಠ ಕಟ್ಟಿದ್ದು ಬಯಲಲ್ಲೇ. ಅಲ್ಲೇ ಇದ್ದು ಸಮಾಜ ಸಂಘಟನೆ ಮಾಡಿದ್ದೇನೆ. ಆಸ್ತಿ, ಅಂತಸ್ತು ಯಾವುದೂ ನನಗೆ ಮುಖ್ಯ ಅಲ್ಲ. ನನ್ನ ಸಮಾಜ ಮುಖ್ಯ. ಸಮಾಜದ ಪ್ರತಿಯೊಬ್ಬ ವ್ಯಕ್ತಿ ಏನು ಸಲಹೆ ಕೊಡುತ್ತಾನೋ ಆ ರೀತಿ ನಡೆದುಕೊಳ್ಳುತ್ತೇನೆ. ಯಾರು ಏನೇ ಅಂದರೂ ಸಮಾಜದ ಹಿತದೃಷ್ಟಿಯಿಂದ ಸಹಿಸಿಕೊಂಡು ಬರುತ್ತಿದ್ದೇನೆ ಎಂದು ಹೇಳಿದ ಅವರು, ಉಂಟಾಗಿರುವ ಎಲ್ಲ ಭಿನ್ನಾಭಿಪ್ರಾಯಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಏ.20 ರಂದು ಸಭೆಯನ್ನು ಕರೆಯಲಾಗಿದೆ ಎಂದರು. ಮಠದ ಪೀಠಾಧಿಪತಿ ಬದಲಾವಣೆ ವಿಷಯದಲ್ಲಿ ಶಾಸಕ ವಿಜಯಾನಂದ ಕಾಶಪ್ಪನವರ ಹೇಳಿಕೆಗೆ ಪ್ರತಿಕ್ರಿಯಿಸಿದ ಸ್ವಾಮೀಜಿ, ಅವರು ನನ್ನನ್ನು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ. ಯಾರೆಲ್ಲಾ ಟೀಕೆ ಮಾಡಿದ್ದಾರೆ ಅವರೆಲ್ಲರೂ ನಮ್ಮವರೇ. ಅವರಿಗೆ ದೇವರು ಸದ್ಬುದ್ಧಿ ಕೊಡಲಿ. ಶ್ರೀ ಪೀಠದ ಬಗ್ಗೆ ಗೌರವ, ಅಭಿಮಾನ ಹೊಂದಿರುವ ಎಲ್ಲರೂ ಏ.20ರ ಸಭೆಗೆ ಬರ್ತಾರೆ ಎಂದು ಮಾರ್ಮಿಕವಾಗಿ ಉತ್ತರಿಸಿದರು.

ತಾವು ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡುವ ಉದ್ದೇಶ ಹೊಂದಿದ್ದೀರಿ ಎಂದು ಹೇಳುತ್ತಾರಲ್ಲ ಎಂಬ ಪ್ರಶ್ನೆಗೆ ಸ್ಪಷ್ಟನೆ ನೀಡಿದ ಬಸವಜಯಮೃತ್ಯುಂಜಯ ಸ್ವಾಮೀಜಿ, ನಾನು ಯಾವುದೇ ಚುನಾವಣೆಗೆ ಸ್ಪರ್ಧಿಸುವುದಿಲ್ಲ. ನಮ್ಮ ಸಮಾಜದ ವ್ಯಕ್ತಿಗಳನ್ನು ಜನಪ್ರತಿನಿಧಿಗಳನ್ನಾಗಿ ಮಾಡಲು ತಯಾರು ಮಾಡುತ್ತೇನೆ ಎಂದು ಹೇಳಿದರು.

# ರಾಜ್ಯದ ಮುಖ್ಯಮಂತ್ರಿಗಳ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.14-ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ಏಪ್ರಿಲ್ 16 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು.

ಅಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಕಲಬುರಗಿ ಹಾಗೂ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಬೆಂಗಳೂರು ಇವುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ಕೆ.ಸಿ.ಟಿ. ಕಾಲೇಜ ಆವರಣದಲ್ಲಿ ಹಮ್ಮಿಕೊಳ್ಳಲಾದ ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸುವರು.



ಅಂದುಮಧ್ಯಾಹ್ನ 1.15 ಗಂ-ಟೆಗೆ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ವತಿಯಿಂದ 8ನೇ, 9ನೇ ಮತ್ತು 10ನೇ ಮಹಡಿಯಲ್ಲಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವೀಕ್ಷಣೆ ಹಾಗೂ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸುವರು.

ಅಂದು ಮಧ್ಯಾಹ್ನ 1.30 ಗಂ-ಟೆಗೆ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದಿಂದ ನೂತನ ಜಿಟಿಟಿಸಿ ಬಹುಕೌಶಲ್ಯ ಅಭಿವೃದ್ಧಿ ಕೇಂದ್ರ(ಎಂಎಸ್‌ಡಿಸಿ) ಮತ್ತು ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಹಾಗೂ 09 ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 3.45 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೀದರಿಗೆ ಪ್ರಯಾಣಿಸುವರು.

# ಅಂಬೇಡ್ಕರ್ ತತ್ವಗಳೇ ಸಮಸಮಾಜದ ನಿರ್ಮಾಣಕ್ಕೆ ದಾರಿ: ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.14-ಡಾ.ಬಾಬಾಸಾಹೇಬ್ ಅಂಬೇಡ್ಕರ ಅವರ ತತ್ವಗಳೇ ಸಮಸಮಾಜದ ನಿರ್ಮಾಣಕ್ಕೆ ದಾರಿಯಾಗಿವೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ನವನಗರದ ಅಂಬೇಡ್ಕರ್ ಭವನದಲ್ಲಿ ಸೋಮವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯದಲ್ಲಿಯೇ ಜಾತಿ ವ್ಯವಸ್ಥೆಯ ನೋವನ್ನು ಅನುಭವಿಸಿದ್ದ ಡಾ.ಅಂಬೇಡ್ಕರ, ಅದನ್ನು ಮೆಟ್ಟಿ ನಿಂತು ಉನ್ನತ ಶಿಕ್ಷಣವನ್ನು ಪಡೆದದ್ದು ನಿಜಕ್ಕೂ ಸ್ಫೂರ್ತಿದಾಯಕ. ತಮ್ಮ ಈ ಅನುಭವದ ಆಧಾರದಲ್ಲಿ ಎಲ್ಲರೂ ಸಮಾನತೆಯಿಂದ ಬದುಕಬೇಕೆಂಬ ಧ್ಯೇಯದೊಂದಿಗೆ ಭಾರತೀಯ ಸಂವಿಧಾನ ರಚನೆಯಲ್ಲಿ ಅನೇಕ ಸುಧಾರಣೆಗಳನ್ನು ತಂದರು ಎಂದು ಹೇಳಿದ ಗದ್ದಿಗೌಡರ, ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ್ಯಕ್ಕೆ ಬಲ ನೀಡುವ ಅಂಶಗಳನ್ನು ಸಂವಿಧಾನದಲ್ಲಿ ಅವರು ಸೇರಿಸಿದ್ದು, ಈ ತತ್ವಗಳೇ ಸಮಸಮಾಜದ ನಿರ್ಮಾಣಕ್ಕೆ ದಾರಿ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿದ್ದ ವಿಧಾನಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಅಂಬೇಡ್ಕರ್ ಅವರು ಸಮಾನತೆ ತರುವ ನಿಟ್ಟಿನಲ್ಲಿ ಶ್ರಮಿಸಿದರು. ಕುರಾನ್,ಬೈಬಲ್,ಗೀತೆ ಎಲ್ಲವನ್ನು ಅಧ್ಯಯನ ಮಾಡಿದ ಅವರು, ತಮ್ಮ ಮನೆಯಲ್ಲಿಯೇ 50,000ಕ್ಕೂ ಅಧಿಕ ಗ್ರಂಥಗಳ ಗ್ರಂಥಾಲಯವಿತ್ತು ಎಂದು ಹೇಳಿದರು.

ಉಪನ್ಯಾಸ ನೀಡಿದ ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಚಿನ್ನಸ್ವಾಮಿ ಸೋಸಲೆ, ಇಂದಿನ ಜನರು ಅಂಬೇಡ್ಕರ್‌ವಾದಿಗಳೆಂದು ಹೇಳಿಕೊಳ್ಳುವುದಕ್ಕಿಂತ ಅವರ ತತ್ವಗಳನ್ನು ಪಾಲಿಸುವದು ಮುಖ್ಯ. ಮೀಸಲಾತಿಯ ಹಕ್ಕು ಮತ್ತು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ತೊಡಗಿಸಿಕೊಳ್ಳುವ ಅವಕಾಶ ಸಿಕ್ಕಿರುವುದಕ್ಕೆ ಅಂಬೇಡ್ಕರ್ ಕಾರಣ ಎಂದರು.

ಹೊಳೆನರಸೀಪುರ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನ ಪ್ರೊ.ಎನ್.ಆರ್.ಶಿವರಾಂ,ಅಂಬೇಡ್ಕರ್ ಅಸ್ಪೃಶ್ಯತೆ, ಜಾತಿ ತಾರತಮ್ಯ ಮುಂತಾದ ಬೇಧಭಾವಗಳನ್ನು ದೂರ ಮಾಡಿ ಸಮಾಜವನ್ನು ಆರೋಗ್ಯವಂತಗೊಳಿಸಲು ವೈದ್ಯನಂತೆ ಕಾರ್ಯನಿರ್ವಹಿಸಿದರು. ಅವರು ಟೀಕೆ ಟಿಪ್ಪಣಿಗಳಿಲ್ಲದ, ಶುದ್ಧ ಪ್ರಾಮಾಣಿಕ ನಾಯಕರಾಗಿದ್ದರು ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳನ್ನು ಮತ್ತು ಉತ್ತಮ ಫಲಿತಾಂಶ ಸಾಧನೆಯ ವಿದ್ಯಾರ್ಥಿ ನಿಲಯದ ಅಧಿಕಾರಿಗಳಿಗೂ ಸನ್ಮಾನಿಸಲಾಯಿತು.

ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಉಪಸ್ಥಿತರಿದ್ದರು.

**ಭವ್ಯ ಮೆರವಣಿಗೆ**

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನವನಗರದ ಸೆಕ್ಟರ್ ನಂಬರ್ 45 ರಲ್ಲಿನ ಸಮುದಾಯ ಭವನದಿಂದ ಡಾ.ಬಿ.ಆರ್. ಅಂಬೇಡ್ಕರ ಭವನದವರೆಗೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಅಂಬೇಡ್ಕರ್ ಅವರ ಭಾವಚಿತ್ರ ಭವ್ಯ ಮೆರವಣಿಗೆ ನಡೆಯಿತು.

# ಏ.17 ರ ಸಂಪುಟ ಸಭೆ ನಂತರ ಜಾತಿಗಣತಿ ಬಗ್ಗೆ ಮಾತನಾಡುವೆ:ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.14: ಹಿಂದುಳಿದ ವರ್ಗಗಳ ಜಾತಿ ಜನಗಣತಿ ವರದಿಯ ಕುರಿತು ಇದೇ 17 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಲಾಗುವುದು. ಆವರೆಗೂ ತಾವು ಯಾವುದೇ ಹೇಳಿಕೆಗಳನ್ನು ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಅಲ್ಪಸಂಖ್ಯಾತರ ತುಷ್ಟಿಕರಣಕ್ಕಾಗಿ ಜಾತಿ ಜನಗಣತಿ ವರದಿಯನ್ನು ರಾಜ್ಯಸರ್ಕಾರ ಮಂಡಿಸಿದೆ ಎಂದು ಬಿಜೆಪಿ ಮಾಡಿರುವ ಆರೋಪಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದ. ಮುಖ್ಯಮಂತ್ರಿಯವರು, 17 ರಂದು ಸಚಿವ ಸಂಪುಟ



ಸಭೆಯಲ್ಲಿ ವರದಿಯ ಕುರಿತು ಚರ್ಚಿಸುವ ಒಂದು ವಿಷಯ ಮಾತ್ರ ಇದೆ. ಆ ಸಭೆಯ ಬಳಿಕ ನಾನು ಮಾತನ್ನಾಡುತ್ತೇನೆ.. ಅದಕ್ಕೂ ಮುನ್ನ ಯಾವುದೇ ಹೇಳಿಕೆಗಳನ್ನು ನೀಡುವುದಿಲ್ಲ ಎಂದರು.

ಜಾತಿ ಜನಗಣತಿಯ ವರದಿ ರಾಜ್ಯದಲ್ಲಿ ಕಿಚ್ಚು ಹಚ್ಚಿದ್ದು ಪರ-ವಿರೋಧದ ಚರ್ಚೆಗೆ ಗ್ರಾಸವಾಗಿದೆ. ಕಾಂಗ್ರೆಸ್ ಒಳವಲಯದಲ್ಲೇ ಬಹಳಷ್ಟು ಮಂದಿ ಜಾತಿವಾರು ಜನಸಂಖ್ಯೆ ಲೆಕ್ಕಾಚಾರದ ಬಗ್ಗೆ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಕೆಲ ಸಚಿವರು ವರದಿ ತಮ್ಮ ಕೈ ಸೇರಿದೆ. ಅದನ್ನು ಅಧ್ಯಯನ ಮಾಡಿದ ಬಳಿಕ ಪ್ರತಿಕ್ರಿಯಿಸುತ್ತೇವೆ ಎಂದು ಜಾರಿಕೊಳ್ಳುತ್ತಿದ್ದಾರೆ. ಒಂದೆಡೆ ಬಿಜೆಪಿ ವರದಿ ಕುರಿತಂತೆ ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದೆ, ಜೆಡಿಎಸ್ ಕೂಡ ವಿರೋಧ ವ್ಯಕ್ತಪಡಿಸಿದೆ.

ಹೀಗಿರುವಾಗ ಕಾಂಗ್ರೆಸ್ ನಾಯಕರು ಮಾತ್ರ ತಮ್ಮದೇ ಸರ್ಕಾರದ ನಿರ್ಧಾರವನ್ನು ಸಮರ್ಥಿಸಿಕೊಳ್ಳಲು ಪರದಾಡುತ್ತಿದ್ದಾರೆ.

ಮುಖ್ಯ ಮಂತ್ರಿಯವರೇ ಹೇಳಿಕೆ ನೀಡಲು ಹಿಂದೇಟು ಹಾಕುತ್ತಿದ್ದಾರೆ.

# ಕಾರಿನಲ್ಲಿ ಬಂದು ಕುರಿ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.14-ಮೂವರು ಕಳ್ಳರು ಕಾರಿನಲ್ಲಿ ಬಂದು ಕುರಿಗಳನ್ನು ಕಳವು ಮಾಡಿಕೊಂಡು ಹೋಗಿರುವ ಘಟನೆ ಫರಹತಾಬಾದ ಗ್ರಾಮದಲ್ಲಿ ನಡೆದಿದೆ.

ಸಾಯಿಬಣ್ಣ ರಾಂಪೂರ ಎಂಬುವವರಿಗೆ ಸೇರಿದ 40 ಸಾವಿರ ರೂ.ಮೌಲ್ಯದ ಮೂರು ಕುರಿಗಳನ್ನು ಕಳ್ಳರು ಕಾರಿನಲ್ಲಿ ಹಾಕಿಕೊಂಡು ಹೋಗಿದ್ದಾರೆ. ಈ ಸಂಬಂಧ ಸಾಯಿಬಣ್ಣ ಅವರು ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ನಗರದ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ : ಕು. ಅನಪೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನೂತನ ಜಿಲ್ಲಾ ಕೇಂದ್ರವಾಗಿ ಯಾದಗಿರಿ ನಗರ 14 ವರ್ಷ ಕಳೆದಿದೆ, ಜನಸಂಖ್ಯೆ ಕೂಡ ಕಾಲ-ಕಾಲಕ್ಕೆ ಹೆಚ್ಚಾಗುತ್ತಿದೆ, ನಗರಸಭೆಯಿಂದ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ನಾವೂ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇವೆ ಎಂದು ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ ಹೇಳಿದರು.

ಭಾನುವಾರ ನಗರಕ್ಕೆ ಹೊಂದಿಕೊಂಡಿರುವ ಭೀಮಾ ನದಿಯಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಲ್ಲಿ ಜನರು ತ್ಯಾಜ್ಯ ವಸ್ತುಗಳನ್ನು ಎಸೆದಿದ್ದಾರೆ, ಪರಿಣಾಮ ನಗರಕ್ಕೆ ನೀರು ಸರಬರಾಜು ಮಾಡುವ ಜಾಕವೆಲ್ ಸುತ್ತ-ಮುತ್ತ ಪರಿಸರ ಮಾಲಿನ್ಯವಾಗಿದೆ, ಮೊದಲು ಅದನ್ನು ಸ್ವಚ್ಛಗೊಳಿಸಲಾಗಿದೆ,



ನಾನು ಅಧಿಕಾರವಹಿಸಿಕೊಂಡ ನಂತರ ನಮ್ಮ ನಡೆ ನಗರದಲ್ಲಿರುವ 31 ವಾರ್ಡ್‌ಗಳ ಕಡೆಗೆ ಎಂಬ ಕಾರ್ಯಕ್ರಮ ಮಾಡಿ, ಜನರಿಗೆ ಬಾಕಿ ಉಳಿದಿರುವ ತೆರಿಗೆ ಸಂಗ್ರಹ ಮಾಡಿ, ಜನರ ಸಮಸ್ಯೆಗಳನ್ನು ಅಧಿಕಾರಿಗಳ ಸಹಕಾರದೊಂದಿಗೆ ಸ್ಥಳದಲ್ಲಿಯೇ ಪರಿಹಾರ ಮಾಡಲಾಗಿದೆ,

ಜನಸ್ಪಂಧನ ಕಾರ್ಯಕ್ರಮ ಮೂಲಕ ಜನರ ವಿವಿಧ ಸಮಸ್ಯೆಗಳನ್ನು ಆಲಿಸಿ, ವಾಸ್ತವಿಕತೆ ಸತ್ಯವಿರುವ ದೂರುಗಳನ್ನು ಗಮನಿಸಿ,ಸ್ಪಂಧಿಸಲಾಗಿದೆ, ನಗರದಲ್ಲಿರುವ ದೋಕಾಶಾಲೆ ಆಡಳಿತ ಮಂಡಳಿಯವರು ಅನಧಿಕೃತವಾಗಿ ಸಾರ್ವಜನಿಕ ಉದ್ಯಾನವನ ಸ್ಥಳವನ್ನು ಆಕ್ರಮಿಸಿಕೊಂಡು ಕಂಪೌಂಡ್ ನಿರ್ಮಿಸಿದ್ದರು, ಅದನ್ನು ತೆರವುಗೊಳಿಸಿ, ಆ ಸ್ಥಳಕ್ಕೆ ನಗರಸಭೆಯಿಂದ ತಡೆಗೋಡೆ ನಿರ್ಮಾಣ ಮಾಡಲಾಗಿದೆ.

ನಗರದ ಸಣ್ಣ-ಪುಟ್ಟ ವ್ಯಾಪಾರಸ್ಥರಿಗೆ ಸ್ವ-ನಿಧಿ ಯೋಜನೆ ಬಗ್ಗೆ ಅವರಲ್ಲಿ ಜಾಗೃತಿ ಮೂಡಿಸಲಾಗಿದೆ, ಅತಿಯಾದ ಪ್ಲಾಸ್ಟಿಕ್‌ಗಳ ಬಳಕೆಯಿಂದ ಚರಂಡಿಗಳಲ್ಲಿ ನೀರು ಹರಿಯದಂತ ಸ್ಥಿತಿ ನಿರ್ಮಾಣವಾಗಿರುವುದರಿಂದ ನಾವು ಪ್ಲಾಸ್ಟಿಕ್ ನಿಷೇಧ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ, ಬಟ್ಟೆ ಬ್ಯಾಗಗಳನ್ನು ವಿತರಿಸಲಾಗಿದೆ ಎಂದು ವಿವರಿಸಿದರು.

ನಗರದಲ್ಲಿ ಬೈಕ್‌ಗಳ ಹಾಗೂ ವಾಹನಗಳ ಸುಗಮ ಸಂಚಾರಕ್ಕಾಗಿ ಚರಂಡಿಗಳ ಮೇಲೆ ಸ್ಲಾಬ್‌ಗಳನ್ನು ಹಾಕಲಾಗಿದೆ, ಇದರಿಂದ ಜನರಿಗೆ ಅನುಕೂಲವಾಗಿದೆ, ಸಾರ್ವಜನಿಕ ಉದ್ಯಾನವನಗಳನ್ನು ಸ್ವಚ್ಛತೆಗೊಳಿಸಿ ಅಭಿವೃದ್ಧಿಪಡಿಸಲಾಗಿದೆ, ಸಾರ್ವಜನಿಕರ ಕುಂದು-ಕೊರತೆಗಳನ್ನು ಸಕಾಲಕ್ಕೆ ವಿಲೇವಾರಿ ಮಾಡಲಾಗಿದೆ,

ಸ್ವಚ್ಛತೆ ಬಗ್ಗೆ ನಾವೂ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜನರಲ್ಲಿ ಜಾಗೃತಿ ಮೂಡಿಸಿದ್ದೇವೆ, ನಗರಕ್ಕೆ ನೀರು ಸರಬರಾಜು ಮಾಡುವ ಭೀಮಾ ನದಿ ಜಾಕವೆಲ್ ದುರಸ್ಥಿಗೊಳಿಸಲಾಗಿದೆ.

ಕೆಲ ದಿನಗಳ ಹಿಂದೆ ನಗರಕ್ಕೆ ಗುಲಸರಂ ಬ್ರಿಡ್ಜ್ ಕಂ ಬ್ಯಾರೇಜ್‌ನಿಂದ ಶುದ್ಧ ಕುಡಿಯುವ ನೀರು ಪೂರೈಸುವ 53 ಕೋಟಿ ರೂ. ಪೈಪಲೈನ್ ಅಳವಡಿಸುವ ಕಾಮಗಾರಿಗೆ ಚಾಲನೆ ನೀಡಲಾಗಿದೆ, ಇನ್ನೂ 2 ವರ್ಷದಲ್ಲಿ ಎಲ್ಲಾ ವಾರ್ಡಗಳ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಮೊದಲು ಆದ್ಯತೆ ನೀಡಿದ್ದೇವೆ ಎಂದರು,

ನಗರದಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಗಳು ಕೆಲವು ಪ್ರಭಾವಿ ವ್ಯಕ್ತಿಗಳು ನಗರಸಭೆಗೆ ತೆರಿಗೆ ಬಾಕಿ ಉಳಿಸಿಕೊಂಡಿದ್ದರು, ನಾನು ಖುದ್ದಾಗಿ ಅಧಿಕಾರಿಗಳ ತಂಡದೊಂದಿಗೆ ತೆರಳಿ ವಾಸ್ತವಿಕ ಪರಿಸ್ಥಿತಿ ತಿಳಿಸಿ, ಅಭಿವೃದ್ಧಿಗಾಗಿ ನೀವೂ ಮೊದಲು ತೆರಿಗೆ ಪಾವತಿಸಿ ಎಂದು ತಿಳಿ ಹೇಳಿದ ನಂತರ ಎಲ್ಲರೂ ತೆರಿಗೆ ಹಣ ಪಾವತಿಸಿದ್ದಾರೆ, ಇದರಿಂದ ನಗರಸಭೆಗೆ ಸಾಕಷ್ಟು ಆರ್ಥಿಕ ಸಂಪನ್ಮೂಲ ಸಂಗ್ರಹವಾಗುತ್ತಿದೆ, ಈ ಹಣವನ್ನು ಜನರ ಕಲ್ಯಾಣಕ್ಕಾಗಿ ವಿನಿಯೋಗಿಸಲಾಗುವುದು ಎಂದು ತಿಳಿಸಿದರು.

ಭೀಮಾ ನದಿಗೆ ತೆರಳಲು ಮುಖ್ಯರಸ್ತೆಯಿಂದ ಸುಗಮ ರಸ್ತೆ ನಿರ್ಮಾಣ ಮಾಡಲಾಗಿದೆ, ಕಂಗಳೇಶ್ವರ ದರ್ಶನಕ್ಕೆ ಹಾಗೂ ನದಿ ಸ್ನಾನಕ್ಕೆ ತೆರಳುವ ಭಕ್ತರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದರು.

ಬೇಸಿಗೆ ಸಮಯವಾಗಿರುವುದರಿಂದ ಹಲವಾರು ವಾರ್ಡ್‌ಗಳಲ್ಲಿ ಜನರು ನೀರಿನ ಸಮಸ್ಯೆ ಎದುರಿಸುತ್ತಿದ್ದಾರೆ, ಅದನ್ನು ಗಮನಿಸಿ ನಾವೂ ತುರ್ತಾಗಿ ಬೊರವೆಲ್‌ಗಳನ್ನು ಕೊರೆಸುವ ಮೂಲಕ ನೀರು ಸರಬರಾಜಿಗೆ ಕ್ರಮ ಕೈಗೊಂಡಿದ್ದೇವೆ. ಅಲ್ಲದೇ ಸಾರ್ವಜನಿಕ ಸ್ಥಳಗಳಲ್ಲಿ ನಗರಸಭೆಯಿಂದ ತಂಪಾದ ನೀರಿನ ಅರವಂಟಿಗೆಗಳನ್ನು ಸ್ಥಾಪಿಸಿದ್ದೇವೆ, ಪಶು-ಪಕ್ಷಿಗಳಿಗೆ ಕೂಡ ನೀರಿನ ಸೌಕರ್ಯ ಕಲ್ಪಿಸಲಾಗಿದೆ.

ನಗರದಲ್ಲಿ ಇತ್ತೀಚಿನ ದಿನಗಳಲ್ಲಿ ಬ್ಯಾನರಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಅಳವಡಿಸುವುದು ಹೆಚ್ಚಾಗಿದೆ, ಪರಿಸರ ಸ್ವಚ್ಛತೆ ದೃಷ್ಟಿಯಿಂದ ಪರವಾನಗಿ ಪಡೆಯದೇ ಹಾಕಿರುವ ಎಲ್ಲಾ ಬ್ಯಾನರಗಳನ್ನು ತೆರವುಗೊಳಿಸಲಾಗಿದೆ ಎಂದು ತಿಳಿಸಿದರು.

# ಅಂಬೇಡ್ಕರ ಅವರು ಬಡತನದಲ್ಲಿ ಅರಳಿದ ಹೂ: ಪ್ರಾ. ಶಿವಾಜಿ ಆರ್.ಎಚ್.



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸಂವಿಧಾನ ಶಿಲ್ಪಿ ಡಾ. ಬಿ. ಆರ್.ಅಂಬೇಡ್ಕರ ಅವರು ಬಡತನ, ಅವಮಾನ, ನೋವುಗಳ್ಳನ್ನು ಮೆಟ್ಟಿ ನಿಂತು, ಬಡತನದಲ್ಲಿ ಅರಳಿದ ಹೂವಿನಂತೆ ತಮ್ಮ ಜೀವನವನ್ನು ಹೊರಟವನ್ನಾಗಿ ಮಾಡಿ, ಇಂದು ನಮ್ಮಗೆ ವಿಶ್ವದಲ್ಲೇ ವಿಶಾಲವಾದ ಸಂವಿಧಾನವನ್ನು ನೀಡಿ ಎಲ್ಲರನ್ನು ಸಮಾನತೆಯ ದಡದಲ್ಲಿ ತಂದು ನಿಲ್ಲಿಸಿ ದ್ದಾರೆ ಎಂದು ಪ್ರಾಚಾರ್ಯರ ಶಿವಾಜಿ ಆರ್. ಎಚ್. ಅವರು ಹೇಳಿದರು.

ಪಟ್ಟಣದಲ್ಲಿ ತಾಲೂಕ ಆಡಳಿತವತಿಯಿಂದ ತಹಸೀಲ್ದಾರ ಕಛೇರಿ ಆವರಣದಲ್ಲಿ ಹಮ್ಮಿಕೊಂಡ ಡಾ. ಬಿ.ಆರ್. ಅಂಬೇಡ್ಕರ ಅವರ 134ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸದಲ್ಲಿ ಮಾತನಾಡಿದರು.

ಬಡತನದಲ್ಲಿ ಹುಟ್ಟಿದು ನನ್ನ ತಪ್ಪುಲ್ಲ ಆದ್ದರೆ ಬಡತನದಲ್ಲಿ ಸಾಯಿವುದು ನನ್ನ ತಪ್ಪು ಎಂದು ಅರಿತು, ಅನೇಕ ವಿಷಯದಲ್ಲಿ ಜ್ಞಾನ ಪಡೆಯದ ಡಾ. ಬಿ.ಆರ್ ಅಂಬೇಡ್ಕರ್ ವಿಶ್ವವಿಜ್ಞಾನಿಯಾದರೂ, ಇಂದು ನಾವೆಲ್ಲರೂ ಶಾಂತತೆ-ಯ ಬದುಕ ಸಾದಿಸಲು ಅವರು ಶ್ರಮವೇ ಕಾರಣವಾಗಿದೆ ಎಂದು ಹೇಳಿದರು.

ಹಣಮತರಾಯ ಕೌಟಗೆ,ತಾ.ಪಂ. ಎ.ಡಿ ಅವರು ಪ್ರಾಸ್ತವಿಕ ಮಾತನಾಡಿದರು, ಅಂಬೇಡ್ಕರ ಅವರು ಬಹುಮುಖ ಜ್ಞಾನಿಯಾಗಿದ್ದರು, ಹತ್ತು ಹಲವು ವಿಷಯಗಲ್ಲಿ ಪಿ.ಎಚ್.ಡಿ ಮುಗಿಸಿದ ಅಪರೂಪದ ವ್ಯಕ್ತಿಯಾಗಿದ್ದರು. ಅದೇ ಅವರನ್ನು ಇಂದು ದೇಶವಿದೇಶದಲ್ಲಿ ಗುರುತಿಸವಂತೆ ಮಾಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ, ರಮೇಶ ಪೆದ್ದೆ,

ಗ್ರಾ. ಪಂ. ಅಧ್ಯಕ್ಷೆ ಸುಶೀಲಾ ಸಜ್ಜನಶೆಟ್ಟಿ, ಪಿ. ಡಿ. ಓ. ರಾಜಕುಮಾರ ತಂಬಾಕೆ,ಗೋವಿಂದ ತಾಂದಳೆ, ತಾ. ಪಂ. ಮಾಜಿ ಅಧ್ಯಕ್ಷ ಶ್ರೀರಂಗ ಪರಿಹಾರ, ಸುನಿಲ ಕಸ್ತೂರೆ, ಬಾಲಾಜಿ ಕಾಂಬಳೆ, ನೀಲಕಂಠರಾವ ಕಾಂಬಳೆ, ವಿಷ್ಣುದಾಸ ಶಿಂದೆ, ಸಿ. ಪಿ. ಐ ಅಮರಪ್ಪ ಶಿವಬಲ್ಪಿ, ಪಿ.ಎಸ್.ಐ. ಚಂದ್ರಶೇಖರ, ಸೇರಿದಂತೆ ವಿವಿಧ ಇಲಾಖೆಯ ಪ್ರಮುಖರು ಇದ್ದರು.

ಕಾರ್ಯಕ್ರಮವನ್ನು ಮಹಾದೇವ ಮಡಿವಾಳ ಸಂಚಾಲನೆ ಮಾಡಿದರು.

# ಕಾಂಗ್ರೆಸ್ ಕಚೇರಿಯಲ್ಲಿ ಡಾ. ಅಂಬೇಡ್ಕರ್ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.14:-ನಗರದ ಶಿವನಗರದ ಕಾಂಗ್ರೆಸ್ ಜಿಲ್ಲಾ ಘಟಕದ ಕಚೇರಿಯಲ್ಲಿ ಸೋಮವಾರ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಆಚರಿಸಲಾಯಿತು.



ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಮಾಜಿ ಸಂಸದ ನರಸಿಂಗರಾವ್ ಸೂರ್ಯವಂಶಿ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ರಾಜ್ಯ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ್ ಜಾಗೀರದಾರ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಬೀದರ್ ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಪಂಡಿತರಾವ್ ಚಿದ್ರಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಗೀತಾ ಚಿದ್ರಿ, ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ದತ್ತಾತ್ರಿ ಮೂಲಗೆ, ಎಂ.ಎ. ಸಮಿ, ಮುಖಂಡ ಶಂಕರ ದೊಡ್ಡಿ ಮತ್ತಿತರರು ಇದ್ದರು.

# ಎಸ್.ಸಿ. ಒಳ ಮೀಸಲಾತಿ ಜಾರಿಗೊಳಿಸಿದ ದೇಶದ ಮೊದಲ ರಾಜ್ಯ ತೆಲಂಗಾಣ



ಮಲ್ಲಮ್ಮ ನುಡಿ ವಾರ್ತೆ

ಹೈದರಾಬಾದ್:ಏ.14: ಪರಿಶಿಷ್ಟ ಜಾತಿ(ಎಸ್‌ಸಿ) ಉಪ-ವರ್ಗೀಕರಣ ಅಥವಾ ಎಸ್‌ಸಿ ಒಳ ಮೀಸಲಾತಿ ಜಾರಿಗೊಳಿಸಿ ತೆಲಂಗಾಣ ಸರ್ಕಾರ ಸೋಮವಾರ ಆದೇಶ ಹೊರಡಿಸಿದೆ. ಈ ಮೂಲಕ ಖಅ ಒಳ ಮೀಸಲಾತಿಯನ್ನು ಅಧಿಕೃತವಾಗಿ ಜಾರಿಗೆ ತಂದ ದೇಶದ ಮೊದಲ ರಾಜ್ಯವಾಗಿದೆ ಎಂದು ತೆಲಂಗಾಣ ನೀರಾವರಿ ಸಚಿವ ಎನ್ ಉತ್ತಮ್ ಕುಮಾರ್ ರೆಡ್ಡಿ ಅವರು ಹೇಳಿದ್ದಾರೆ.

ಎಸ್‌ಸಿ ಒಳ ಮೀಸಲಾತಿ ಕುರಿತು ವರದಿ ನೀಡಲು ತೆಲಂಗಾಣ ಸರ್ಕಾರವು ಈ ಹಿಂದೆ ನಿವೃತ್ತ ಹೈಕೋರ್ಟ್ ನ್ಯಾಯಾಧೀಶ ಶಮೀಮ್ ಅಕ್ತರ್ ನೇತೃತ್ವದಲ್ಲಿ ಆಯೋಗ ರಚಿಸಿತ್ತು. ಈ ಆಯೋಗ ತೆಲಂಗಾಣದಲ್ಲಿ ಪರಿಶಿಷ್ಟ ಜಾತಿಗಳಲ್ಲಿ 59 ಉಪಜಾತಿಗಳನ್ನು ಸಮಿತಿ ಗುರುತಿಸಿದೆ ಮತ್ತು ಅಸ್ತಿತ್ವದಲ್ಲಿರುವ ಶೇ.15 ರಷ್ಟು ಮೀಸಲಾತಿಯೊಳಗೆ ಅವುಗಳನ್ನು 1,2 ಮತ್ತು 3 ಎಂಬ ಮೂರು ಗುಂಪುಗಳಾಗಿ ವಿಂಗಡಿಸಲು ಶಿಫಾರಸುಗಳನ್ನು ಮಾಡಿತ್ತು.

"ಈ ಸಂಬಂಧ ತೆಲಂಗಾಣ ಸರ್ಕಾರ, ತೆಲಂಗಾಣ ಪರಿಶಿಷ್ಟ ಜಾತಿಗಳ ಮೀಸಲಾತಿ ಮಸೂದೆಯ್ನು ವಿಧಾನಸಭೆಯಲ್ಲಿ ಮಂಡಿಸಿ ಅಂಗೀಕರಿಸಿದ್ದು, ಇದಕ್ಕೆ ಏಪ್ರಿಲ್ 8, 2025 ರಂದು ತೆಲಂಗಾಣ ರಾಜ್ಯಪಾಲರು ಅಂಕಿತ ಸಹಹಾಕಿದ್ದಾರೆ. ಇಂದು ಈ ಸಂಬಂಧ ಗೆಜೆಟ್ ಅಧಿಸೂಚನೆ ಪ್ರಕಟಿಸಲಾಗಿದೆ" ಎಂದು ಉತ್ತಮ್ ಕುಮಾರ್ ರೆಡ್ಡಿ ಅವರು ತಿಳಿಸಿದ್ದಾರೆ.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮದಿನದಂದೆ ತೆಲಂಗಾಣ ಸರ್ಕಾರ ಎಸ್ ಸಿ ಒಳ ಮೀಸಲಾತಿ ಜಾರಿಗೊಳಿಸಿ ಆದೇಶ ಹೊರಡಿಸಿದೆ.

ಆಯೋಗದ ವರದಿಯ ಪ್ರಕಾರ, ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಖಅ ಸಮುದಾಯಗಳನ್ನು ಒಳಗೊಂಡಿರುವ ಗುಂಪು-1 ಒಂದ-ಕ್ಕೆ ಶೇಕಡಾ ಒಂದು ಮೀಸಲಾತಿ ನೀಡಲಾಗುತ್ತದೆ.

ಮಧ್ಯಮ ಪ್ರಯೋಜನ ಪಡೆದ 18 ಉಪಜಾತಿಗಳ ಗುಂಪು -2ಗೆ ಶೇಕಡಾ 9 ರಷ್ಟು ಮೀಸಲಾತಿ ನೀಡಲಾಗುತ್ತದೆ ಮತ್ತು ಗಮನಾರ್ಹವಾಗಿ ಪ್ರಯೋಜನ ಪಡೆದ 26 ಉಪಜಾತಿಗಳನ್ನು ಒಳಗೊಂಡಿರುವ ಗುಂಪು 3 ಶೇ. 5 ರಷ್ಟು ಮೀಸಲಾತಿ ಪಡೆಯುತ್ತದೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಎಸ್‌ಸಿ ಒಳ ಮೀಸಲಾತಿ ಉಪಸಮಿತಿಯ ನೇತೃತ್ವ ವಹಿಸಿದ್ದ ಸಚಿವ ರೆಡ್ಡಿ, ಇಂದು ಬೆಳಗ್ಗೆ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರಿಗೆ ಸರ್ಕಾರಿ ಆದೇಶದ ಮೊದಲ ಪ್ರತಿಯನ್ನು ನೀಡಲಾಗಿದೆ ಎಂದು ಹೇಳಿದರು. "ಇಂದಿನಿಂದ, ಈ ಕ್ಷಣದಿಂದ, ತೆಲಂಗಾಣದಲ್ಲಿ ಉದ್ಯೋಗ ಮತ್ತು ಶಿಕ್ಷಣದಲ್ಲಿ ಎಸ್‌ಸಿ ಒಳ ಮೀಸಲಾತಿ ಜಾರಿಗೆ ತರಲಾಗುವುದು. ನಾವು ಆ ಮಟ್ಟಿಗೆ ಸರ್ಕಾರಿ ಆದೇಶವನ್ನು ಹೊರಡಿಸಿದ್ದೇವೆ ಮತ್ತು ಮೊದಲ ಪ್ರತಿಯನ್ನು ಮುಖ್ಯಮಂತ್ರಿಗೆ ನೀಡಿದ್ದೇವೆ" ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

"ಸುಪ್ರೀಂ ಕೋರ್ಟ್‌ನ ತೀರ್ಪಿನ ನಂತರ ಎಸ್‌ಸಿ ಒಳ ಮೀಸಲಾತಿಯನ್ನು ಜಾರಿಗೆ ತಂದ ಮೊದಲ ರಾಜ್ಯ ತೆಲಂಗಾಣ" ಎಂದು ರೆಡ್ಡಿ ಹೇಳಿದರು.

# 40 ಸಾವಿರ ರೂ.ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.14-ಮೆಡಿಕಲ್ ಸ್ಟೋರ್ ಷಟರ್ ಲಾಕ್ ಮುರಿದು ಅದರಲ್ಲೊಗಿದ್ದ 40 ಸಾವಿರ ರೂಪಾಯಿ ನಗದು ಕಳವು ಮಾಡಿರುವ ಘಟನೆ ನಗರದಲ್ಲಿ ನಡೆದಿದೆ. ಆಳಂದ ರಸ್ತೆಯ ಜಿ.ಆರ್.ನಗರದ ವಿಜಯಕುಮಾರ ಗೋದೆ ಅವರ ವಿವಿಜಿ ಮೆಡಿಕಲ್ ಸ್ಟೋರ್‌ನ ಷಟರ್ ಲಾಕ್ ಮುರಿದು ಗಲ್ಲಾದಲ್ಲಿದ್ದ 40 ಸಾವಿರ ರೂಪಾಯಿಗಳನ್ನು ಕಳ್ಳರು ಕಳವು ಮಾಡಿಕೊಂಡು ಹೋಗಿದ್ದಾರೆ. ವಿಜಯಕುಮಾರ ಅವರು ಈ ಸಂಬಂಧ ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy. Office Ph. No: +91 9449732000.